# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

**25ನೇ ಜುಲೈ 2024**
**ಗುರುವಾರ**

## ವಿಷಯಾನುಕ್ರಮಣಿಕೆ (INDEX)

**1. ನಿಯಮ 59ರ ಮೇರೆಗೆ ನಿಲುವಳಿ ಸೂಚನೆಯಡಿ ವಿಷಯ ಮಂಡಿಸಲು ಅನುಮತಿ ಕೋರಿಕೆ, ಒತ್ತಾಯ ಮತ್ತು ಮುಂದುವರೆದ ಧರಣಿ.**

**"ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು."**

- ಶ್ರೀ ಎಸ್.ಎಲ್.ಭೋಜೇಗೌಡ
- ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು)
- ಶ್ರೀ ಸಲೀಂ ಅಹಮದ್ (ಸರ್ಕಾರದ ಮುಖ್ಯ ಸಚೇತಕರು)
- ಶ್ರೀ ಸಿ.ಟಿ.ರವಿ
- ಶ್ರೀಮತಿ ಉಮಾಶ್ರೀ
- ಶ್ರೀಮತಿ ಭಾರತಿ ಶೆಟ್ಟಿ
- ಶ್ರೀ ಐವನ್ ಡಿ'ಸೋಜಾ
- ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು)

**(ಚರ್ಚೆಗೆ ಅನುಮತಿ ನಿರಾಕರಿಸಲಾಯಿತು)**

**2. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**3. ಕಾರ್ಯದರ್ಶಿಯವರ ವರದಿ**

**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ವಿಧೇಯಕಗಳ ಮಂಡನೆ.**

1) ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕ, 2024
2) ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ, 2024
3) ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024

**4. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**5. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕ, 2024**

- ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಆ) ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024**

- ಶ್ರೀ ಸಂತೋಷ್ ಎಸ್.ಲಾಡ್ (ಕಾರ್ಮಿಕ ಸಚಿವರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಇ) ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2024**

- ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**6. ಚುನಾವಣಾ ಪ್ರಸ್ತಾವಗಳು**

**“ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ, ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಹಾಗೂ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶಿಸಲು ಅಧಿಕಾರ ನೀಡುವ ಪ್ರಸ್ತಾವ”**

- ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು)

**(ಸದನದ ಅನುಮೋದನೆ ದೊರೆಯಿತು)**

**7. ವರದಿಗಳನ್ನೊಪ್ಪಿಸುವುದು**

**8. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಈ) ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024**

- ಶ್ರೀ ಡಿ.ಕೆ.ಶಿವಕುಮಾರ್(ಉಪ ಮುಖ್ಯಮಂತ್ರಿಗಳು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**9. ಸರ್ಕಾರಿ ನಿರ್ಣಯಗಳು**

**ಅ) ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮತ್ತು ರಾಜ್ಯದ ವಿಧಾನಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿಯನ್ನಾಧರಿಸಿ ನಿರ್ಧರಿಸುವ ಬಗ್ಗೆ.**

- ಶ್ರೀ ಸಿದ್ದರಾಮಯ್ಯ(ಮುಖ್ಯಮಂತ್ರಿಗಳು)

**(ನಿರ್ಣಯ ಅಂಗೀಕರಿಸಲ್ಪಟ್ಟಿತು)**

**ಆ) ಕೇಂದ್ರದ "ಒಂದು ರಾಷ್ಟ್ರ, ಒಂದು ಚುನಾವಣೆ" ನೀತಿಯನ್ನು ಅನುಷ್ಠಾನ ಮಾಡಬಾರದು ಎನ್ನುವ ಬಗ್ಗೆ.**

- ಶ್ರೀ ಸಿದ್ದರಾಮಯ್ಯ(ಮುಖ್ಯಮಂತ್ರಿಗಳು)

**(ನಿರ್ಣಯ ಅಂಗೀಕರಿಸಲ್ಪಟ್ಟಿತು)**

**ಇ) "ನೀಟ್" ಪರೀಕ್ಷೆಯಿಂದ ರಾಜ್ಯಕ್ಕೆ ವಿನಾಯಿತಿ ನೀಡಿ "ಸಿಇಟಿ" ಅಂಕಗಳನ್ನು ಆಧರಿಸಿ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶಾತಿ ನೀಡುವ ಬಗ್ಗೆ.**

- ಶ್ರೀ ಡಿ.ಕೆ.ಶಿವಕುಮಾರ್(ಉಪ ಮುಖ್ಯಮಂತ್ರಿಗಳು)(ಮುಖ್ಯಮಂತ್ರಿಗಳ ಪರವಾಗಿ)

**(ನಿರ್ಣಯ ಅಂಗೀಕರಿಸಲ್ಪಟ್ಟಿತು)**

**ಈ) ಅರಣ್ಯವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ(ಅರಣ್ಯ ಹಕ್ಕುಗಳ ಮಾನ್ಯತೆ ಅಧಿನಿಯಮ, 2006 (2007 ಕೇಂದ್ರ ಅಧಿನಿಯಮ 02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವ ಬಗ್ಗೆ.**

- ಶ್ರೀ.ಎಸ್,ಎನ್.ಬೋಸರಾಜು (ಸಭಾನಾಯಕರು)(ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಪರವಾಗಿ)

**(ನಿರ್ಣಯ ಅಂಗೀಕರಿಸಲ್ಪಟ್ಟಿತು)**

## 10. ಶಾಸನ ರಚನೆ

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಉ) ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕ, 2024**

- ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಊ) ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2024**

- ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)(ನಗರಾಭಿವೃದ್ಧಿ ಮತ್ತು ನಗರ ಯೋಜನೆ ಮಂತ್ರಿಗಳ ಪರವಾಗಿ)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

## 11. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತ ವಿಷಯದಲ್ಲಿ ವಿರೋಧಪಕ್ಷದ ಸದಸ್ಯರುಗಳಿಂದ ಮುಂದುವರೆದ ಗದ್ದಲ ಹಾಗೂ ಧರಣಿ.

- ಶ್ರೀ ಎಸ್.ಎಲ್.ಭೋಜೇಗೌಡ
- ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ(ವಿರೋಧ ಪಕ್ಷದ ನಾಯಕರು)
- ಶ್ರೀ ಸಿ.ಟಿ. ರವಿ
- ಶ್ರೀ ಹೆಚ್.ಕೆ.ಪಾಟೀಲ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)

## 12. ಪ್ರಕಟಣೆ

**ವಿಧಾನಸಭೆ ಅಂಗೀಕರಿಸಿರುವ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ಕೋರಿರುವ ಬಗ್ಗೆ.**

## 13. ಸಭೆಯ ಮುಂದಿಡಲಾದ ಕಾಗದ ಪತ್ರಗಳು

## 14. ಶಾಸನ ರಚನೆ

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಋ) ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024**

- ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಎ) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024**

- ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು) (ಸಮಾಜ ಕಲ್ಯಾಣ ಸಚಿವರ ಪರವಾಗಿ)
- ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು)
- ಶ್ರೀ ಕೃಷ್ಣಭೈರೇಗೌಡ (ಕಂದಾಯ ಸಚಿವರು)
- ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಏ) ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2024**

- ಶ್ರೀ ಕೃಷ್ಣ ಭೈರೇಗೌಡ (ಕಂದಾಯ ಸಚಿವರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಐ) ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024**

- ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಮತ್ತು ಮುಜರಾಯಿ ಸಚಿವರು)
- ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಒ) <u>ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ)(ತಿದ್ದುಪಡಿ) ವಿಧೇಯಕ, 2024</u>**

- ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)(ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಸಚಿವರ ಪರವಾಗಿ)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**ಓ) ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024**

– ಶ್ರೀ ದಿನೇಶ್ ಗುಂಡೂರಾವ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

**(ವಿಧೇಯಕ ಅಂಗೀಕರಿಸಲ್ಪಟ್ಟಿತು)**

**15. ಪ್ರಶ್ನೋತ್ತರಗಳ ಮಂಡನೆ**

**ದಿನಾಂಕ: 25ನೇ ಜುಲೈ 2024ರ ಚುಕ್ಕೆ ಗುರುತಿನ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು)

**16. ಸಭಾಪತಿಯವರ ಅನುಮತಿ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆಗಳು.**

**ಅ) ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ವಿಶೇಷಚೇತನರಿಗಾಗಿ ನೀಡಲಾಗುವ ದ್ವಿಚಕ್ರ ವಾಹನಗಳು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ನೋಂದಣಿ ಮಾಡಿಸಲು ಸಾಧ್ಯವಾಗದೇ ವಿತರಣೆಯಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಪರವಾಗಿ)

**ಆ) ಆರು ತಿಂಗಳ ಹಿಂದೆ ಮೃತಪಟ್ಟ ಸೇಡಂ ಪುರಸಭೆಯಲ್ಲಿ ಕಿರಿಯ ಇಂಜಿನಿಯರ್ ಆಗಿದ್ದ ಅಶೋಕ ಪುಟಪಾಕ್ ಅವರನ್ನು ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯಲ್ಲಿ ಖಾಲಿ ಇರುವ ಕಿರಿಯ ಇಂಜಿನಿಯರ್ ಹುದ್ದೆಗೆ ವರ್ಗಾವಣೆ ಮಾಡಿರುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಪೌರಾಡಳಿತ ಮತ್ತು ಹಜ್ ಸಚಿವರ ಪರವಾಗಿ)

**ಇ) ಮುಖ್ಯ ಶಿಕ್ಷಕರ ಬಡ್ತಿ, ಪ್ರೌಢಶಾಲಾ ಶಿಕ್ಷಕರ ಬಡ್ತಿ, ಸೇವಾ ಜೇಷ್ಠತೆಯಂತಹ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಪರವಾಗಿ)

**ಈ) ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ 2ನೇ ಅತಿದೊಡ್ಡದಾದ ಅರೇಶಂಕರ ಕೆರೆಯ ಜೀರ್ಣೋದ್ಧಾರದ ಅಭಿವೃದ್ಧಿಗೆ ಯೋಜನೆ ರೂಪಿಸುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು)

**ಉ) ರಾಜ್ಯದಲ್ಲಿ ರೈತರಿಗೆ ಬೇಕಾದ ರಸಗೊಬ್ಬರ ಸರಿಯಾದ ಸಮಯದಲ್ಲಿ ಪೂರೈಕೆಯಾಗುತ್ತಿಲ್ಲದಿರುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಕೃಷಿ ಸಚಿವರ ಪರವಾಗಿ)

**ಊ) ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆಯ ಅರ್ಚಕರಿಗೆ ವೇತನ ನಿಗದಿಪಡಿಸಿ ಪ್ರತೀ ತಿಂಗಳು ಕಾಲಮಿತಿಯೊಳಗೆ ವೇತನ ಪಾವತಿಸುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಾರಿಗೆ ಮತ್ತು ಮುಜರಾಯಿ ಸಚಿವರ ಪರವಾಗಿ)

**ಋ) 2022-23 ನೇ ಸಾಲಿನ ರಾಜ್ಯದ ಸರ್ಕಾರಿ ಕಾನೂನು ಕಾಲೇಜಿನ ವಿದ್ಯಾರ್ಥಿಗಳ ಹಾಗೂ ಚಿಕ್ಕಮಗಳೂರು ಶಾರದಾ ಕಾನೂನು ಕಾಲೇಜು ವಿದ್ಯಾರ್ಥಿಗಳ ಫಲಿತಾಂಶವನ್ನು ಕೂಡಲೇ ನೀಡುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಪರವಾಗಿ)

**ಎ) ಸಹಕಾರ ಮಾರಾಟ ಮಹಾ ಮಂಡಳ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನಿವೃತ್ತ ಅಧಿಕಾರಿ ಕೆ.ಎಂ.ಆಶಾ ರವರನ್ನು ನೇಮಿಸಿರುವುದನ್ನು ವಿರೋಧಿಸಿರುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಹಕಾರ ಸಚಿವರ ಪರವಾಗಿ)

**ಏ) ಪತ್ರಿಕೋದ್ಯಮ ವಿಷಯದಲ್ಲಿ ರೆಗ್ಯೂಲರ್ ಆಗಿ ಸ್ನಾತಕೋತ್ತರ ಪದವಿ ಪಡೆದು ಸ್ಥಳೀಯ ಜಿಲ್ಲಾ ಮಟ್ಟದ ಕನ್ನಡ ದಿನಪತ್ರಿಕೆ ಆರಂಭಿಸಿರುವ ಸಂಪಾದಕರಿಗೆ ಪ್ರತಿ ತಿಂಗಳು ಎರಡು ಪುಟ ಜಾಹೀರಾತು ವ್ಯವಸ್ಥೆ ಮಾಡುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು(ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ)

**ಐ) ಸರ್ಕಾರದ ನಿರ್ಲಕ್ಷ್ಯಕ್ಕೊಳಗಾಗಿರುವ ರೇಷ್ಮೆ ಇಲಾಖೆಗೆ ಮರುಜೀವ ನೀಡುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು(ಸಭಾನಾಯಕರು) (ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಪರವಾಗಿ)

**ಒ) ದರ್ವೇಶ್ ಗ್ರೂಪ್ ಆಫ್ ಕಂಪನಿ ಎಂಬ ಸಂಸ್ಥೆ ಹೂಡಿಕೆದಾರರಿಗೆ ಅಧಿಕ ಬಡ್ಡಿ ನೀಡುವುದಾಗಿ ಹೇಳಿ ಅವರಿಂದ ಡಿಪಾಸಿಟ್ ರೂಪದಲ್ಲಿ ಹಣ ಪಡೆದು, ವಂಚಿಸಿರುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಗೃಹ ಸಚಿವರ ಪರವಾಗಿ)

**ಓ) 2024-25 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರ್ತಿಸಿ ತಾತ್ಕಾಲಿಕ ಪಟ್ಟಿ ಮಾಡಿರುವುದನ್ನು ರದ್ದುಪಡಿಸುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಪರವಾಗಿ)

**ಔ) ಅಡಿಕೆ ಕೃಷಿಕರಿಗೆ ಈ ಬಾರಿ ಮತ್ತೆ ಕೊಳೆರೋಗ ಮತ್ತು ಮಳೆಯಿಂದ ಶಿಲೀಂದ್ರ ರೋಗ ಕಾಣಿಸಿಕೊಂಡಿರುವ ಬಗ್ಗೆ.**

– ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರ ಪರವಾಗಿ)

17. ಸಾರಾಂಶ

~ ~ ~

(684) 25.07.2024/11.20/ಎಸ್‌ಕೆ-ಎಂಡಿ

**ಕರ್ನಾಟಕ ವಿಧಾನ ಪರಿಷತ್ತು**

**ಗುರುವಾರ, 25ನೇ ಜುಲೈ, 2024**

ಸದನವು ವಿಧಾನಸೌಧದಲ್ಲಿರುವ ವಿಧಾನ ಪರಿಷತ್ತಿನ ಸಭಾಂಗಣದಲ್ಲಿ

**ಪೂರ್ವಾಹ್ನ 11 ಗಂಟೆ 29 ನಿಮಿಷಕ್ಕೆ ಸಮಾವೇಶಗೊಂಡಿತು.**

**ಸಭಾಪತಿಯವರಾದ ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿಯವರು**

**ಪೀಠದಲ್ಲಿ ಉಪಸ್ಥಿತರಿದ್ದರು**

**1. ನಿಯಮ 59ರ ಮೇರೆಗೆ ನಿಲುವಳಿ ಸೂಚನೆಯಡಿ ವಿಷಯ ಮಂಡಿಸಲು ಅನುಮತಿ ಕೋರಿಕೆ, ಒತ್ತಾಯ ಮತ್ತು ಮುಂದುವರೆದ ಧರಣಿ**

**"ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು."**

**- - - -**

**(ಸದನ ಪ್ರಾರಂಭವಾಗುತ್ತಿದ್ದಂತೆಯೇ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿಯವರು ಮತ್ತು ಶ್ರೀ ಸಿ.ಟಿ. ರವಿಯವರನ್ನು ಹೊರತುಪಡಿಸಿ, ಭಾರತೀಯ ಜನತಾ ಪಕ್ಷದ ಇನ್ನುಳಿದ ಮಾನ್ಯ ಸದಸ್ಯರುಗಳು ಹಾಗೂ ಶ್ರೀ ಎಸ್.ಎಲ್. ಭೋಜೇಗೌಡರನ್ನು ಹೊರತುಪಡಿಸಿ, ಜೆ.ಡಿ.(ಎಸ್.) ಪಕ್ಷದ ಇನ್ನುಳಿದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

(ಮುಂದು)

(685) 25.07.2024 11.30, ಟಿಸಿಹೆಚ್-ಎಕೆ (ಸಭಾಪತಿಯವರ ಉಪಸ್ಥಿತಿ)

**ಸಭಾಪತಿಯವರು:-** ಸದನದ ಬಾವಿಯಲ್ಲಿ ನಿಂತಿರತಕ್ಕಂಥವರು ಬಾವಿಯಿಂದ ಹೊರಗಡೆ ಬಂದು ತಮ್ಮ ಸ್ಥಾನದಲ್ಲಿ ಕುಳಿತುಕೊಳ್ಳಬೇಕೆಂದು ಹೇಳುತ್ತಿದ್ದೇನೆ.

**ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ನಾವು ಕೊಟ್ಟಿರತಕ್ಕಂಥ ಅರ್ಜಿ ನಿಮ್ಮ ಬಳಿ ಇದೆ. ಆ ಅರ್ಜಿಗೆ ತಾವು ಸಮಯಾವಕಾಶ ಕೇಳಿದ್ದೀರಿ. ಆ ಸಮಯಾವಕಾಶ ಸುಮಾರು 30 ಗಂಟೆಗಳ ನಂತರ ಸಿಕ್ಕಿದೆ. ಈಗ ತಾವು ಅರ್ಜಿಯನ್ನು ವಿಲೇವಾರಿ ಮಾಡಿ ನಮಗೆ ಅವಕಾಶ ಕೊಡಬೇಕು.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ನಮಗೆ ಅವಕಾಶ ಕೊಟ್ಟರೆ ಚರ್ಚೆಯಾಗಿ ಇತ್ಯರ್ಥವಾಗುತ್ತದೆ.

**(ಗೊಂದಲ)**

**ಶ್ರೀ ಸಲೀಂ ಅಹಮದ್ (ಸರ್ಕಾರದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೇ, ಈಗಾಗಲೇ ತಾವು ರೂಲಿಂಗ್ ಕೊಟ್ಟಿದ್ದೀರಿ.

**(ಗೊಂದಲ)**

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಅರ್ಜಿ ನಮ್ಮದು. ಆಯಿತು ಅವರ ಬಿಲ್‌ಗಳಿಗೆ...

**ಶ್ರೀ ಸಲೀಂ ಅಹಮದ್:-** ಮಾನ್ಯ ಸಭಾಪತಿಯವರೇ, ದಯವಿಟ್ಟು ಇವತ್ತು ಸಾಕಷ್ಟು ಬಿಲ್‌ಗಳಿವೆ. **(ಗೊಂದಲ)** ಚರ್ಚೆ ಮಾಡುವುದಕ್ಕೆ ಬೇರೆ ಬೇರೆ ವಿಷಯಗಳಿವೆ. ಆದ್ದರಿಂದ ದಯವಿಟ್ಟು ಅವರು ತಮ್ಮ ಸ್ಥಾನಕ್ಕೆ ಹೋಗಿ ಕುಳಿತುಕೊಳ್ಳಬೇಕು. ಈಗಾಗಲೇ ತಾವು ತಮ್ಮ ತೀರ್ಮಾನವನ್ನು ಕೊಟ್ಟಿದ್ದೀರಿ. ದಯವಿಟ್ಟು ಅವರು ತಮ್ಮ ಸ್ಥಳಕ್ಕೆ ಹೋಗಿ ಕುಳಿತುಕೊಂಡರೆ ಸಹಕಾರವಾಗುತ್ತದೆ ಎಂದು ನಾನು ಮನವಿ ಮಾಡುತ್ತಿದ್ದೇನೆ.

**(ಗೊಂದಲ)**

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ನಾವು ಅರ್ಜಿ ಕೊಟ್ಟ ನಂತರ ತಾವು ವಿಚಾರ ಮಾಡಿ ಹೇಳುತ್ತೇನೆ ಎಂದು ಹೇಳಿದ್ದೀರಿ. ಆಗ ನಮಗೆಲ್ಲಾ ಸಮಾಧಾನ ಆಗದೇ ಇರುವುದಕ್ಕೇ ನಾವೆಲ್ಲಾ ಸದನದ ಬಾವಿಗೆ ಬಂದಿದ್ದೇವೆ. ನಾವು ಈಗಲೂ ಕೂಡ ಸದನದ ಬಾವಿಯಲ್ಲೇ ಇದ್ದೇವೆ. ನಾವು ಅಹೋರಾತ್ರಿ ಧರಣಿ ಮಾಡಿದ್ದೇವೆ.

**ಸಭಾಪತಿಯವರು:-** ಈಗ ಹೇಳುತ್ತೇನೆ.

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, in spite of that, ನಮ್ಮ ಮೇಲೆ ಮತ್ತು ನಮ್ಮ ಅರ್ಜಿ ಮೇಲೆ ನಿಮಗೆ ಕರುಣೆ ಇಲ್ಲ. ಕಾನೂನು ಪ್ರಕಾರವೇ ನಮ್ಮ ಅರ್ಜಿಯನ್ನು ಬರೆದು ಕೊಟ್ಟಿದ್ದೇವೆ. ದಯಮಾಡಿ ತಾವು ಅದನ್ನು ಕೂಲಂಕಷವಾಗಿ ಓದಿದ್ದೀರಿ ಎಂದು ನಾವೆಲ್ಲಾ ಭಾವಿಸಿದ್ದೇವೆ. ಒಂದುವೇಳೆ ತಾವು ಅದನ್ನು ಓದದಿದ್ದರೆ ತಮಗೆ ಇರತಕ್ಕಂಥ ಸುದೀರ್ಘವಾದ 45 ವರ್ಷದ ಅನುಭವದಲ್ಲಿ ನಮ್ಮ ಅರ್ಜಿಯನ್ನು ಪುರಸ್ಕಾರ ಮಾಡಿ ಕೊಡಿ. ಇದು ಚರ್ಚೆಯಾಗಲಿ, ಮುಂದೆ ಏನಾಗಿದೆ ನೋಡೋಣ.

**(ಗೊಂದಲ)**

**ಶ್ರೀ ಸಲೀಂ ಅಹಮದ್:-** ಮಾನ್ಯ ಸಭಾಪತಿಯವರೇ, ತಾವು ತಮ್ಮ ನಿರ್ಣಯ ಹೇಳುವುದಕ್ಕಿಂತ ಮುಂಚೆ ಅವರೆಲ್ಲರೂ ತಮ್ಮ ಸ್ಥಾನಕ್ಕೆ ಹೋಗಿ ಕುಳಿತುಕೊಳ್ಳಲಿ ಎಂದು ತಮ್ಮ ಮೂಲಕ ಕೇಳಿಕೊಳ್ಳುತ್ತಿದ್ದೇನೆ.

**(ಗೊಂದಲ)**

**ಶ್ರೀ ಸಿ.ಟಿ.ರವಿ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಲೀಂ ಅಹಮದ್ ರವರೇ, ತಾವು ಮಾನ್ಯ ಸಭಾಪತಿಯವರಿಗೆ dictate ಮಾಡುತ್ತೀರಾ?

**(ಗೊಂದಲ)**

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೇ, the House is not in order…

**(ಗೊಂದಲ)**

**ಸಭಾಪತಿಯವರು:-** ಶ್ರೀ ಐವನ್ ಡಿ'ಸೋಜಾ ರವರೇ, ಶ್ರೀ ಪ್ರಕಾಶ್ ಕೆ.ರಾಥೋಡ್‌ರವರೇ, ತಾವೆಲ್ಲಾ ಏಕೆ ಮಾತನಾಡುತ್ತೀರಿ?

**(ಗೊಂದಲ)**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ತಮ್ಮಿಂದ ಸ್ಪಷ್ಟವಾದ ಉತ್ತರ ಬರದಿದ್ದರೆ ಸದನದ ಬಾವಿಯಲ್ಲಿರುವ ಮಾನ್ಯ ಸದಸ್ಯರು ಯಾರು ಕೂಡ ತಮ್ಮ ಸ್ಥಾನಕ್ಕೆ ಹೋಗಿ ಕುಳಿತುಕೊಳ್ಳುವುದಿಲ್ಲ. ನಾವೆಲ್ಲರೂ ಅಹೋರಾತ್ರಿ ಧರಣಿ ನಡೆಸಿದ್ದೇವೆ. ತಮ್ಮ ಬರುವಿಕೆಯನ್ನು ನಾವೆಲ್ಲರೂ ಕಾಯುತ್ತಿದ್ದೆವು. ತಮ್ಮ ಉತ್ತರಕ್ಕಾಗಿ ಕಾಯುತ್ತಿದ್ದೇವೆ. ಆದ್ದರಿಂದ ತಾವು ದಯವಿಟ್ಟು ತಮ್ಮ ನಿರ್ಧಾರ ಹೇಳಿದ ನಂತರ ಚರ್ಚೆಗೆ ಅವಕಾಶ ಕೊಟ್ಟರೆ ಚರ್ಚೆ ಮಾಡೋಣ.

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಇದು ಎಂತಹ ಸುಸಮಯ. ಸನ್ಮಾನ್ಯ ಮುಖ್ಯಮಂತ್ರಿಯವರು ಕೂಡ ಇದೇ ಸಮಯಕ್ಕೆ ಆಗಮಿಸಿದ್ದಾರೆ.

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ, ಅವರು ಚರ್ಚೆಗೆ ಹೆದರಿ ಓಡಿಹೋಗುವಂತಹ ಮುಖ್ಯಮಂತ್ರಿಯಲ್ಲ. ಚರ್ಚೆ ಮಾಡಲಿ ಎಂದು ಹೇಳುತ್ತಾರೆ. ಸನ್ಮಾನ್ಯ ಮುಖ್ಯಮಂತ್ರಿಯವರು ಕೂಡ ನಮ್ಮ ನೆರವಿಗೆ ಬರುತ್ತಾರೆ. ಅವರು ಚರ್ಚೆ ನಡೆಯಲಿ ಎಂದು ತಮಗೂ ಕೂಡ ವಿನಂತಿ ಮಾಡುತ್ತಾರೆ. ಆ ವಿಶ್ವಾಸ ನನಗಿದೆ.

**ಸಭಾಪತಿಯವರು:-** ಶ್ರೀ ಸಿ.ಟಿ.ರವಿ ಯವರೇ, ನಿಮ್ಮ ಮಾತು ಕೇಳಿದರೆ ಗಿಡದಲ್ಲಿರತಕ್ಕಂಥ ಮಂಗಗಳು ಓಡಿಹೋಗುತ್ತವೆ.

**(ಗೊಂದಲ)**

**ಶ್ರೀ ಸಲೀಂ ಅಹಮದ್:-** ಮಾನ್ಯ ಸಭಾಪತಿಯವರೇ, ಮಾನ್ಯ ಸಿ.ಟಿ.ರವರು ಆಗಾಗ ದಾರಿ ತಪ್ಪಿಸುತ್ತಿರುತ್ತಾರೆ.

**(ಗೊಂದಲ)**

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ, ಇಲ್ಲವೆಂದರೆ ಹುಲಿಯ ಎನ್ನುವುದಕ್ಕೆ ಗೌರವವೇ ಇರುವುದಿಲ್ಲ. ಅವರು ಚರ್ಚೆಗೆ ಅವಕಾಶ ಕೊಡದಿದ್ದರೆ ಇಲಿ ಆಗಿಬಿಡುತ್ತಾರೆ. ಹುಲಿಯ ಎಂದು ಹೇಳಿದರೆ ಚರ್ಚೆಗೆ ಅವಕಾಶ ಕೊಡುತ್ತಾರೆ.

**(ಗೊಂದಲ)**

**ಸಭಾಪತಿಯವರು:-** ನಾನು ನನ್ನ ನಿರ್ಧಾರ ಹೇಳುತ್ತೇನೆ. ದಯಮಾಡಿ ಎಲ್ಲರೂ ಕೂಡ ತಮ್ಮ ತಮ್ಮ ಸ್ಥಾನಕ್ಕೆ ಹೋಗಿ ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ದಯವಿಟ್ಟು ತಮ್ಮ ನಿರ್ಣಯವನ್ನು ತಾವು ಪ್ರಕಟಣೆ ಮಾಡಿ. ನಿಮ್ಮ ನಿರ್ಣಯ ಪ್ರಕಟವಾದ ಮೇಲೆ . . .

**(ಗೊಂದಲ)**

**ಸಭಾಪತಿಯವರು:-** ನೀವೆಲ್ಲರೂ ತಮ್ಮ ಸ್ಥಾನಕ್ಕೆ ಹೋಗಿ ಕುಳಿತುಕೊಂಡರೆ ನಾನು ಹೇಳುವುದಕ್ಕೆ ಸರಿಯಾಗುತ್ತದೆ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಅವರು ಕುಳಿತುಕೊಳ್ಳುವುದಿಲ್ಲ. ಏಕೆಂದರೆ ಅವರು ನಿನ್ನೆಯಿಂದ ಅಲ್ಲೇ ಇದ್ದಾರೆ.

**ಸಭಾಪತಿಯವರು:-** ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಯವರೇ, ನೀವಲ್ಲಾ ರೀ ಅವರು.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಹೌದು. ನಾನು ಕುಳಿತುಕೊಳ್ಳುತ್ತೇನೆ.

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೇ, ನಾವು ಇಲ್ಲೇ ಕುಳಿತುಕೊಳ್ಳಬೇಕಾಗುತ್ತದೆ.

**ಸಭಾಪತಿಯವರು:-** ಶ್ರೀಮತಿ ಭಾರತಿ ಶೆಟ್ಟಿಯವರೇ, ಅಲ್ಲಿ ನಿಂತುಕೊಳ್ಳುವುದು ಬೇಡ. ತಾವು ಹೋಗಿ ತಮ್ಮ ಸ್ಥಾನದಲ್ಲಿ ಕುಳಿತುಕೊಳ್ಳಿ.

**ಶ್ರೀಮತಿ ಭಾರತಿ ಶೆಟ್ಟಿ:-** ಮಾನ್ಯ ಸಭಾಪತಿಯವರೇ, ನಾವು ನಿನ್ನೆಯಿಂದ ಸದನದ ಬಾವಿಯಲ್ಲೇ ಇದ್ದೇವೆ.

**ಶ್ರೀ ಐವನ್ ಡಿ'ಸೋಜಾ:-** ಮಾನ್ಯ ಸಭಾಪತಿಯವರೇ, ಶ್ರೀಮತಿ ಭಾರತಿ ಶೆಟ್ಟಿಯವರು ಅವರು ಬಾವಿಯಲ್ಲಿ ಇರುವುದು ಬೇಡ. ಬಾವಿಯಲ್ಲಿ ನೀರು ಇಲ್ಲ.

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಬಾವಿಯಲ್ಲಿರತಕ್ಕಂಥ ನೀರನ್ನೆಲ್ಲಾ ಖಾಲಿ ಮಾಡಿರುವುದು ಇವರು.

**ಸಭಾಪತಿಯವರು:-** ಮಾನ್ಯ ಛಲವಾದಿ ಟಿ.ನಾರಾಯಣ ಸ್ವಾಮಿಯವರೇ, ನಿಮ್ಮವರನ್ನೆಲ್ಲಾ ಹೋಗಿ ಕುಳಿತುಕೊಳ್ಳಲು ಹೇಳಿ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರುಗಳು ನಿನ್ನೆಯಿಂದ ಸದನದ ಬಾವಿಯಲ್ಲೇ ಇದ್ದಾರೆ. ಆದ್ದರಿಂದ ತಾವು ಏನು ಹೇಳುತ್ತೀರೋ ಅದನ್ನು ಕೇಳುವುದಕ್ಕೆ ಕಾತರರಾಗಿದ್ದಾರೆ. ತಾವು ದಯವಿಟ್ಟು ಪ್ರಕಟಣೆ ಮಾಡಿ.

**ಸಭಾಪತಿಯವರು:-** ಶ್ರೀ ಭೋಜೇಗೌಡ ರವರೇ, ರಾತ್ರಿ ಸದನದ ಬಾವಿಯಲ್ಲಿದ್ದಾಗ ತಾವು ನನಗೆ ಏನು ಹೇಳಿದ್ದೀರಿ?

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ನಾವೆಲ್ಲಾ ಅಹೋರಾತ್ರಿ ಧರಣಿ ನಡೆಸುತ್ತಿದ್ದಾಗ ತಾವು ರಾತ್ರಿ 12.30 ಗಂಟೆಗೆ ಬಂದು ನಮ್ಮ ಕ್ಷೇಮ ವಿಚಾರಿಸಿದ್ದೀರಿ. ಅದಕ್ಕಾಗಿ ತಮಗೆ ರಾತ್ರಿಯೇ ಧನ್ಯವಾದಗಳನ್ನು ಹೇಳಿದ್ದೇವೆ ಹಾಗೂ ಈಗಲೂ ಸಹ ತಮಗೆ ಧನ್ಯವಾದಗಳನ್ನು ಹೇಳುತ್ತೇವೆ. ಸರ್ಕಾರದ ಮುಖ್ಯ ಸಚೇತಕರಾದ ಶ್ರೀ ಸಲೀಂ ಅಹಮದ್‌ರವರು ಹಾಗೂ ಮಾನ್ಯ ಸಭಾನಾಯಕರಾದ ಶ್ರೀ ಎನ್.ಎಸ್.ಭೋಸರಾಜು ರವರು ಕೂಡ ಬಂದಿದ್ದರು. ಅದೇ ರೀತಿ ನಮ್ಮನ್ನೆಲ್ಲಾ ಮಾತನಾಡಿಸುವುದಕ್ಕೆ ಸನ್ಮಾನ್ಯ ಮುಖ್ಯಮಂತ್ರಿಯವರು ಬರುತ್ತಾರೆ ಎಂದು ನಾವೆಲ್ಲಾ ಬಹಳ ಕಾತರದಿಂದ ಕಾದಿದ್ದೆವು. ಆದರೆ ನಮ್ಮ ಮೇಲೆ ಅವರಿಗೆ ಏಕೋ ಕರುಣೆ ಬಂದಿಲ್ಲವೆಂದು ಕಾಣುತ್ತದೆ.

**ಸಭಾಪತಿಯವರು:-** ನಾವು ಅವರ ಪರವಾಗಿಯೇ ಬಂದಿದ್ದು.

**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ಮಾನ್ಯ ಶ್ರೀ ಭೋಜೇಗೌಡ ರವರು ಬಹಳ ಪ್ರೀತಿಯಿಂದ ಹೇಳಿದ್ದಾರೆ ಅಂದುಕೊಂಡಿದ್ದೇನೆ.

**ಶ್ರೀ ಎಸ್.ಎಲ್.ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ಅದರಲ್ಲಿ ಎರಡನೇ ಮಾತಿಲ್ಲ. ಖಂಡಿತವಾಗಿಯೂ ಅತ್ಯಂತ ಪ್ರೀತಿಯಿಂದ ಹೇಳಿದ್ದೇನೆ.

**ಶ್ರೀ ಸಿದ್ದರಾಮಯ್ಯ:-** ಮಾನ್ಯ ಸಭಾಪತಿಯವರೇ, ಅವರು ಬಹಳ ಪ್ರೀತಿಯಿಂದ ಮತ್ತು ಅಭಿಮಾನದಿಂದ ಹೇಳಿದ್ದಾರೆ ಅಂದುಕೊಂಡಿದ್ದೇನೆ.

**ಸಭಾಪತಿಯವರು:-** ಮಾನ್ಯ ಭೋಜೇಗೌಡರವರು ಇಲ್ಲಿ ಒಂದು ಹೇಳುತ್ತಾರೆ, ಹೊರಗಡೆ ಹೋದಾಗ ಮತ್ತೊಂದು ಹೇಳುತ್ತಾರೆ.

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ಇವರು ಬೇಕಂತಲೇ non-issue ನ್ನು issue ಮಾಡಿದ್ದಾರೆ. ಜೆ.ಡಿ.(ಎಸ್) ಪಕ್ಷದವರು ಮತ್ತು ಬಿ.ಜೆ.ಪಿ., ಪಕ್ಷದವರು ವೈಯಕ್ತಿಕವಾಗಿ ತೆಗೆದುಕೊಂಡಿದ್ದಾರೆ. ಕಾನೂನು ರೀತ್ಯಾ ಎಲ್ಲಾ ಸರಿಯಾಗಿ ಇದ್ದರೂ ಕೂಡ, ಅದನ್ನು issue ಮಾಡಿ ತೆಗೆದುಕೊಂಡಿದ್ದಾರೆ. ಮತ್ತೆ 2021ನೇ ಇಸವಿಯಲ್ಲಿ ಬಿ.ಜೆ.ಪಿ. ಸರ್ಕಾರ ಅಧಿಕಾರದಲ್ಲಿದ್ದಾಗ ಆ ಸೈಟ್‌ಗಳನ್ನು ಕೊಟ್ಟಿರುವುದು. ನಾವು ಇಂತಹ ಕಡೆ ನಮಗೆ ಸೈಟ್ ಕೊಡಿ ಎಂದು ಕೇಳಿಲ್ಲ.

**ಶ್ರೀ ಸಿ.ಟಿ.ರವಿ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಚರ್ಚೆಗೆ ಅವಕಾಶ ಮಾಡಿಕೊಡಿ. ಸರ್ಕಾರ ಉತ್ತರ ಕೊಡಲಿ.

**(ಗೊಂದಲ)**

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ಇವರೆಲ್ಲಾ ಮಾತನಾಡುವಾಗ ನಾನು ಮಧ್ಯೆ ಮಾತನಾಡಿದ್ದೇನೆಯೇ? **(ಗೊಂದಲ)** ನಿಯಮಾವಳಿಗಳ ಪ್ರಕಾರ ಯಾವುದೇ Adjournment Motion recent occurrence ಆಗಿಲ್ಲದೇ ಇದ್ದರೂ ಕೂಡ . . .

**(ಗೊಂದಲ)**

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ, ಇದರಲ್ಲಿ ವೈಯಕ್ತಿಕತೆ ಏನಿದೆ ಎಂದು ಸನ್ಮಾನ್ಯ ಮುಖ್ಯಮಂತ್ರಿಯವರಿಂದ ಈ ಸದನಕ್ಕೆ ಹೇಳಿಸಬೇಕು. **(ಗೊಂದಲ)** ಇವರು ಆರೋಪ ಕೇಳುವುದಕ್ಕೆ ರೆಡಿ ಇಲ್ಲ. **(ಗೊಂದಲ)** ಈ ಆರೋಪದಲ್ಲಿ ನಿರಪರಾಧಿ ಎಂದು ಸಾಬೀತುಪಡಿಸಲಿ. ಮೊದಲು ನಮ್ಮ ಆರೋಪ ಕೇಳಿ.

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ನಿಯಮಾವಳಿಗಳ ಪ್ರಕಾರ ಅದು recent occurrence ಆಗಿರಬೇಕು. 2021ನೇ ಇಸವಿಯಲ್ಲಿ ಆ ಸೈಟ್‌ಗಳನ್ನು ಕೊಟ್ಟಿರುವುದು. ಆಗ ಯಾವ ಸರ್ಕಾರ ಅಧಿಕಾರದಲ್ಲಿತ್ತು? ಆಗ ಬಿ.ಜೆ.ಪಿ. ಸರ್ಕಾರ ಅಧಿಕಾರದಲ್ಲಿ ಇತ್ತು. ಮತ್ತೆ ನಾವು ಇಂತಹ ಕಡೆ **(ಗೊಂದಲ)** ಕೊಡಿ ಎಂದು ಕೇಳಿಲ್ಲ. **(ಗೊಂದಲ)** 2021ರಲ್ಲಿ ಯಾರು ಅಧಿಕಾರದಲ್ಲಿ ಇದ್ದವರು? ಬಿ.ಜೆ.ಪಿ.,ಯವರು ಅಧಿಕಾರದಲ್ಲಿ ಇದ್ದರು.

**(ಗೊಂದಲ)**

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ, ಆಯಿತು ನಮ್ಮನ್ನು ಕೇಳಿ.

**(ಗೊಂದಲ)**

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ಬಿ.ಜೆ.ಪಿಯವರು ಕೊಟ್ಟರು. ಅವರು ಕೊಟ್ಟಿದ್ದಾರೆ ಎಂದು ನಾನು ಹೇಳುವುದಕ್ಕೆ ಹೋಗುವುದಿಲ್ಲ. **(ಗೊಂದಲ)** MUDA ದವರು in their discretion, they have taken a decision and they have passed a resolution. **(ಗೊಂದಲ)** It is not of recent occurrence. This is number one. ಎರಡನೇಯದಾಗಿ, ಈಗಾಗಲೇ ಜುಲೈ 14ನೇ ತಾರೀಖು ನಾವು Judicial Commission appoint ಮಾಡಿದ್ದೇವೆ. ಇದು sub-judice ಆಗುತ್ತದೆ. ಆದ್ದರಿಂದ **(ಗೊಂದಲ)** ಮಾನ್ಯ ಸಭಾಪತಿಯವರೇ, ತಾವು ನಿಲುವಳಿ ಸೂಚನೆಯನ್ನು reject ಮಾಡಿರುವುದು ಕಾನೂನು ರೀತ್ಯಾ ಸರಿಯಾಗಿದೆ. ಈ ಕೆಟ್ಟ ಸಂಪ್ರದಾಯಗಳಿಗೆ ನೀವು ಮಣೆ ಹಾಕಬಾರದು. ಇದು ಕೆಟ್ಟ ಸಂಪ್ರದಾಯವಾಗುತ್ತದೆ. **(ಗೊಂದಲ)** ಅದಕ್ಕೋಸ್ಕರ ಇದನ್ನು ಮತ್ತೆ ಚರ್ಚೆ ಮಾಡುವುದಕ್ಕೆ ಅವಕಾಶವಿಲ್ಲ. **(ಗೊಂದಲ)** ನೀವು ಸರಿಯಾದ ತೀರ್ಮಾನವನ್ನು ತೆಗೆದುಕೊಂಡಿದ್ದೀರಿ.

**(ಗೊಂದಲ)**

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ ಒಂದು ವಿಷಯ. . .

**(ಗೊಂದಲ)**

**ಸಭಾಪತಿಯವರು:-** ಮಾನ್ಯ ಸಿ.ಟಿ.ರವಿಯವರೇ, ನಾನು ನನ್ನ ನಿರ್ಧಾರ ಹೇಳುತ್ತೇನೆ.

**(ಗೊಂದಲ)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಒಂದು ನಿಮಿಷ. ಸನ್ಮಾನ್ಯ ಮುಖ್ಯಮಂತ್ರಿಗಳು ಇದರಲ್ಲಿ ವೈಯಕ್ತಿವಾಗಿ ತೆಗೆದುಕೊಂಡಿದ್ದಾರೆ ಎಂದು ಹೇಳಿದರು. ಇದರಲ್ಲಿ ಯಾವ ವೈಯಕ್ತಿಕತೆ ಏನಿದೆ?

**(ಗೊಂದಲ)**

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ಈಗ ಇವರು ಪ್ರಸ್ತಾಪಿಸಿರುವಂಥ ವಿಚಾರದಲ್ಲಿ ನನ್ನದು ಏನಾದರೂ ಪಾತ್ರ ಇದೆಯೇ? ಇದು ಇವರ ಪಾತ್ರ. 2021ನೇ ಇಸವಿಯಲ್ಲಿ ಅಧಿಕಾರದಲ್ಲಿ ಇದ್ದವರು ಇವರು. Mr. Rajiv was the Chairman at that time. Mr. Rajiv belongs to B.J.P. ಇದರಲ್ಲಿ ಬಿ.ಜೆ.ಪಿಯವರು ಸದಸ್ಯರಿದ್ದಾರೆ, ಜೆ.ಡಿ.(ಎಸ್) ನವರು ಸದಸ್ಯರಿದ್ದಾರೆ ಮತ್ತು ಕಾಂಗ್ರೆಸ್‌ನವರು ಕೂಡ ಸದಸ್ಯರಿದ್ದಾರೆ.

**(ಗೊಂದಲ)**

**ಶ್ರೀ ಸಿ.ಟಿ.ರವಿ:-** ಮಾನ್ಯ ಸಭಾಪತಿಯವರೇ, ದಲಿತರ ಜಮೀನನ್ನು ಏಕೆ ತೆಗೆದುಕೊಳ್ಳಬೇಕಿತ್ತು?

**(ಗೊಂದಲ)**

**ಶ್ರೀ ಸಿದ್ದರಾಮಯ್ಯ:-** ಮಾನ್ಯ ಸಭಾಪತಿಯವರೇ, ಅದನ್ನು ನಾವು ಮಾಡಿದ್ದು ಅಲ್ಲ. ನಾವು ಅರ್ಜಿ ಕೊಟ್ಟಿದ್ದೇವೆ. **(ಗೊಂದಲ)** 50:50 ಹಂಚಿಕೆ ಮಾಡಿದವರು ಯಾರು? ಅವರು ಅವೊತ್ತು ಕಾನೂನು ರೀತ್ಯಾ ಮಾಡಿದ್ದಾರೆ. ಒಂದುವೇಳೆ 1.48,000 ಚದರ ಅಡಿ 3.16 ಎಕರೆ **(ಗೊಂದಲ)** ಮೂಡಾದವರು ಕಾನೂನು ಬಾಹಿರವಾಗಿ ಅದನ್ನು ತೆಗೆದುಕೊಂಡು ಸೈಟ್‌ಗಳನ್ನು ಮಾಡಿ ಹಂಚಿದ್ದಾರೆ. ಈ ಹಿಂದೆ ಎಲ್ಲಾ land to land ಕೊಟ್ಟಿದ್ದಾರೆ. **(ಗೊಂದಲ)** ನಾವು ಯಾರಿಗೂ land to land ಕೊಟ್ಟಿಲ್ಲ. **(ಗೊಂದಲ)** ನಾವು ಯಾರಿಗೂ ಶೇ.100ರಲ್ಲಿ ಶೇ.50ರಷ್ಟು ಕೂಡ ಕೊಟ್ಟಿಲ್ಲ. 1,44,000 ಚದರ ಅಡಿಯಲ್ಲಿ ನಮಗೆ 31,384 ಚದರ ಅಡಿ ಕೊಟ್ಟಿದ್ದಾರೆ. **(ಗೊಂದಲ)** ನೀವು ಇಂತಹ ಜಾಗದಲ್ಲೇ ಅಂದರೆ, ವಿಜಯನಗರದಲ್ಲೇ ಕೊಡಿ. 3rd stage, 4th stage ನಲ್ಲಿಯೇ ನಮಗೆ ಮಾಡಿಕೊಡಿ ಎಂದು ನಾವು ಕೇಳಿಲ್ಲ. ಏಕೆಂದರೆ ನಾವು ಜಮೀನು ಕಳೆದುಕೊಂಡಿದ್ದೇವೆ, ನಮ್ಮ ಜಮೀನಿಗೆ ಪರ್ಯಾಯವಾಗಿ ಕೊಡಿ ಎಂದು ಹೇಳಿದ್ದೇವೆ ಅಷ್ಟೇ. ನಾವು 50:50ಕ್ಕೆ ಒಪ್ಪಿಕೊಂಡಿದ್ದೇವೆ. **(ಗೊಂದಲ)** ನಾನು 2014ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಕೊಡುವುದಕ್ಕೆ ಆಗುವುದಿಲ್ಲ ಎಂದು ಹೇಳಿದ್ದೆನು. ಕಾನೂನು ಪ್ರಕಾರ ಇದ್ದರೂ ಕೂಡ ನಾನು ಕೊಡುವುದಿಲ್ಲ ಎಂದು ಹೇಳಿದ್ದೆನು. ಆದರೆ 2021ನೇ ಇಸವಿಯಲ್ಲಿ ಬಿ.ಜೆ.ಪಿ. ಸರ್ಕಾರ ಅಧಿಕಾರದಲ್ಲಿದ್ದಾಗ ಕೊಟ್ಟಿರತಕ್ಕಂಥದ್ದು. ಆದ್ದರಿಂದ ಇದರಲ್ಲಿ ಯಾವುದೇ ಅಕ್ರಮ ನಡೆದಿಲ್ಲ. ಯಾವುದೇ ಕಾನೂನು ಬಾಹಿರ ಕೆಲಸ ನಡೆಸಿಲ್ಲ. ನಮ್ಮದು ಎಲ್ಲಾ ಕಾನೂನು ರೀತಿ ಇರತಕ್ಕಂಥದ್ದು. **(ಗೊಂದಲ)** ಇವರು non-issue ನ್ನು issue ಮಾಡಿಕೊಂಡು ವೈಯಕ್ತಿವಾಗಿ ತೆಗೆದುಕೊಳ್ಳಲು ಹೊರಟಿದ್ದಾರೆ. ಇದನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ.

(ಮುಂದು)

(686)25.7.2024/11.40/ಎಂ.ಎಂ-ಎ.ಕೆ (ಸಭಾಪತಿಯವರ ಉಪಸ್ಥಿತಿ)

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ಸಿದ್ದರಾಮಯ್ಯ:-** ನಿಮ್ಮ ಉದ್ದೇಶವೇನೆಂದರೆ ನನಗೆ ಮಸಿ ಬಳಿಯಬೇಕು ಅಂತ. ನಾನು ಮಂತ್ರಿಯಾಗಿಯೇ 40 ವರ್ಷಗಳಾಯಿತು. 40 ವರ್ಷಗಳಲ್ಲಿ ಒಂದು ಕಪ್ಪು ಚುಕ್ಕೆಯೂ ಇಲ್ಲ. ಹೊಟ್ಟೆಕಿಚ್ಚು, ಹೊಟ್ಟೆ ಉರಿ ಅವರಿಗೆ. ಹೊಟ್ಟೆಕಿಚ್ಚು, ಹೊಟ್ಟೆ ಉರಿಯಿಂದ ಈ ತರಹದ issue ತೆಗೆದುಕೊಂಡು (**ಗೊಂದಲ**) ಗಲಾಟೆ

ಮಾಡುತ್ತಿದ್ದಾರೆ. It is totally a non-issue. Issue ನೇ ಇಲ್ಲ, ಯಾವುದೇ ತಪ್ಪು ಇಲ್ಲ. ಎಲ್ಲವೂ ಕಾನೂನು ರೀತಿ ಇದೆ. ಇದನ್ನು ಇವರು ಮಾಡುತ್ತಿದ್ದಾರೆ.

**(ಗೊಂದಲ)**

**ಸಭಾಪತಿಯವರು:-** ಒಂದು ನಿಮಿಷ ನಾನೊಂದು ನಿರ್ಣಯ ಹೇಳುತ್ತೇನೆ ಕೇಳಿ (**ಗೊಂದಲ**) ದಿನಾಂಕ 24.7.2024ರಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶನ ಹಂಚಿಕೆಗೆ ಸಂಬಂಧಪಟ್ಟಂತೆ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತು ವಿರೋಧ ಪಕ್ಷದವರು ನೀಡಿದ ನಿಲುವಳಿ ಸೂಚನೆಗೆ ರಾಜ್ಯ ಸರ್ಕಾರವು ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸದರಿ ವಿಷಯದ ಬಗ್ಗೆ ಪರಿಶೀಲಿಸಲು ಹಾಗೂ ವರದಿ ನೀಡಲು ಆಯೋಗವನ್ನು ರಚಿಸಿರುವುದರಿಂದ ನಿಯಮ 62ರ ಮೇರೆಗೆ ಚರ್ಚೆಗೆ ಅವಕಾಶವನ್ನು ನಿರಾಕರಿಸಲಾಗಿದೆ ಎಂದು ನೀಡಿದ ತೀರ್ಪಿನ ಮೇರೆಗೆ ವಿರೋಧ ಪಕ್ಷದ ನಾಯಕರು ಗೌರವಾನ್ವಿತ ಪೀಠವು ನೀಡಿರುವ ತೀರ್ಪನ್ನು ಮರುಪರಿಶೀಲಿಸಬೇಕೆಂದು ವಿನಂತಿ ಮಾಡಿದ ಮೇರೆಗೆ ಪತ್ರವನ್ನು ನೀಡಿದಲ್ಲಿ ಪರಿಶೀಲಿಸಲಾಗುವುದೆಂದು ಪೀಠದಿಂದ ತಿಳಿಸಲಾಗಿರುತ್ತದೆ. ಅದರಂತೆ ವಿರೋಧ ಪಕ್ಷದವರು ಕಳೆದ ವಾರ ವಾಲ್ಮೀಕಿ ನಿಗಮದ ಹಗರಣದ ಬಗ್ಗೆ ನೀಡಲಾದ ಸೂಚನೆಯ ಸಂಬಂಧ ಷರತ್ತಿಗೊಳಪಟ್ಟಂತೆ ಚರ್ಚಿಸಲು ನಿಯಮ 68ರಡಿಯಲ್ಲಿ ಅವಕಾಶ ನೀಡಬೇಕೆಂದು ಕೋರಿ ಪತ್ರ ನೀಡಿರುತ್ತಾರೆ. ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗಾಗಿ ನಿಗಮದಲ್ಲಿ 180 ಕೋಟಿ ರೂಪಾಯಿಗಳನ್ನು ಅಕ್ರಮವಾಗಿ ದುರುಪಯೋಗ ಮಾಡಿಕೊಳ್ಳಲಾಗಿದೆ ಎಂಬ ವಿಷಯವನ್ನು ನಿಲುವಳಿ ಸೂಚನೆ ಮೂಲಕ ಚರ್ಚಿಸಲು ದಿನಾಂಕ 15-7-2024ರಂದು ನೀಡಿದ ಸೂಚನೆಗೆ ಸಂಬಂಧಪಟ್ಟಂತೆ ಸದರಿ ವಿಷಯವು ನ್ಯಾಯಾಲಯದಲ್ಲಿದ್ದು ತೀರ್ಪು ನೀಡಿರದ ಯಾವುದೇ ಸಂಗತಿಯನ್ನು ಕುರಿತು ಮಾತನಾಡತಕ್ಕದ್ದಲ್ಲ ಮತ್ತು ಸದಸ್ಯರೊಬ್ಬರ ಮೇಲೆ ವೈಯಕ್ತಿಕ ದೋಷಾರೋಪಣೆ ಮಾಡತಕ್ಕದ್ದಲ್ಲ ಎಂಬ ಷರತ್ತಿನೊಂದಿಗೆ ನಿಯಮ 68ರಡಿಯಲ್ಲಿ ಚರ್ಚಿಸಲು ಅವಕಾಶ ನೀಡಲಾಗಿತ್ತು. ಆದರೆ ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 61(iii) ಅನ್ವಯ ನಿಲುವಳಿ ಸೂಚನೆಯು ಇತ್ತೀಚೆಗೆ ನಡೆದ ನಿರ್ದಿಷ್ಟ ವಿಷಯವಾಗಿಲ್ಲವಾದ್ದರಿಂದ ಚರ್ಚೆಗೆ ಅವಕಾಶವನ್ನು ನಿರಾಕರಿಸಲಾಗಿದೆ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**(ಗೊಂದಲ)**

**ಸಭಾಪತಿಯವರು:-** ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**2. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಸರಣಾ ಲೆಕ್ಕಪರಿಶೋಧನಾ ವರದಿ (2024ರ ವರದಿ ಸಂಖ್ಯೆ-3)ಯನ್ನು ಸಭೆಯ ಮುಂದಿಡುತ್ತಿದ್ದೇನೆ.

**ಸಭಾಪತಿಯವರು:-** ಮಂಡಿಸಲಾಯಿತು.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**3. ಕಾರ್ಯದರ್ಶಿಯವರ ವರದಿ**

**ಕಾರ್ಯದರ್ಶಿ, ಕ.ವಿ.ಪ.:-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುತ್ತಿದ್ದೇನೆ.

1. ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕ, 2024
2. ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ) (ಎರಡನೇ ತಿದ್ದುಪಡಿ) ವಿಧೇಯಕ, 2024
3. ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024

**ಸಭಾಪತಿಯವರು:-** ಮಂಡಿಸಲಾಯಿತು.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**4. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**(ಮೂರನೇ ಪಟ್ಟಿ)**

**(ದಿನಾಂಕ 25.7.2024)**

**ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ,

**2017ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ಅಧಿನಿಯಮದ ಪ್ರಕರಣ 166ರ ಮೇರೆಗೆ:**

2017ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ ನಿಯಮಗಳನ್ನು ರಚಿಸಿ ಹೊರಡಿಸಿರುವ ಅಧಿಸೂಚನೆ ಹಾಗೂ ನಿಯಮಗಳಿಗೆ ಮತ್ತು ಅದರಲ್ಲಿನ ನಮೂನೆಗಳು ಸೇರಿದಂತೆ ಕೆಲವು ತಿದ್ದುಪಡಿಗಳು/ಪ್ರತ್ಯಾಯೋಜನೆ/ಬಿಟ್ಟುಬಿಡುವಿಕೆ ಮತ್ತು ಹೊಸದಾಗಿ ಸೇರ್ಪಡೆಗೊಳಿಸಿ, ಹೊರಡಿಸಲಾಗಿರುವ ಕೆಳಕಂಡ ಕ್ರ.ಸಂ. 1, 2 ಮತ್ತು 3ರ ಕೆ.ಜಿ.ಎಸ್.ಟಿ ತೆರಿಗೆ-ಕಾನೂನು ಹಾಗೂ ಕ್ರ.ಸಂ. 4 ಮತ್ತು 5ರ ಕೆ.ಜಿ.ಎಸ್.ಟಿ ತೆರಿಗೆ-ದರದ ಅಧಿಸೂಚನೆಗಳು:

1. ಅಧಿಸೂಚನೆ (01/2024) ಸಂಖ್ಯೆ: ಆಇ 07 ಸಿಎಸ್ಎಲ್ 2024, ದಿನಾಂಕ:18.01.2024
2. ಅಧಿಸೂಚನೆ (02/2024) ಸಂಖ್ಯೆ: ಆಇ 07 ಸಿಎಸ್ಎಲ್ 2024, ದಿನಾಂಕ:18.01.2024
3. ಅಧಿಸೂಚನೆ (03/2024) ಸಂಖ್ಯೆ: ಆಇ 07 ಸಿಎಸ್ಎಲ್ 2024, ದಿನಾಂಕ:22.04.2024
4. ಅಧಿಸೂಚನೆ (01/2024) ಸಂಖ್ಯೆ: ಆಇ 02 ಸಿಎಸ್ಎಲ್ 2024, ದಿನಾಂಕ:09.01.2024
5. ಅಧಿಸೂಚನೆ (16/2023) ಸಂಖ್ಯೆ: ಆಇ 16 ಸಿಎಸ್ಎಲ್ 2023ರ, ತಿದ್ದೋಲೆ ದಿನಾಂಕ:23.02.2024

**1957ರ ಕರ್ನಾಟಕ ಮಾರಾಟ ತೆರಿಗೆ ಅಧಿನಿಯಮದ ಪ್ರಕರಣ 39ರ ಮೇರೆಗೆ:**

1. 1957ರ ಕರ್ನಾಟಕ ಮಾರಾಟ ತೆರಿಗೆಯನ್ವಯ ಡೀಸೆಲ್ ಮಾರಾಟದ ಮೇಲೆ ತೆರಿಗೆಯನ್ನು 2023ರ ಆಗಸ್ಟ್ 1ನೇ ದಿನದಿಂದ ವಿನಾಯಿತಿ ನೀಡಿ, ದಿನಾಂಕ: 01.03.2024ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಆಇ 45 ಸಿಎಸ್ಎಲ್ 2023.
2. 1957ರ ಕರ್ನಾಟಕ ಮಾರಾಟ ತೆರಿಗೆ ಅಧಿನಿಯಮ(1957ರ ಕರ್ನಾಟಕದ ಅಧಿನಿಯಮದ 25(ಇನ್ನು ಮುಂದೆ ಈ ಅಧಿಸೂಚನೆಯಲ್ಲಿ "ಸದರಿ ಅಧಿನಿಯಮವೆಂದು" ಉಲ್ಲೇಖಿಸಿದೆ) ಪ್ರಕರಣ 8ಎ ರ ಉಪಪ್ರಕರಣ (1)ರಡಿ ಹೊರಡಿಸಲಾದ ಅಧಿಸೂಚನೆಯನ್ನು ತಿದ್ದುಪಡಿಗೊಳಿಸಿ, 1. ಕೋಷ್ಟಕ-1ರ ಕಾಲಂ 3ರಲ್ಲಿ ಮತ್ತು 2. ಕೋಷ್ಟಕ 2ರ ಕಾಲಂ 3ರಲ್ಲಿ ಪದಗಳು ಮತ್ತು ಅಂಕಿಗಳನ್ನು ಪ್ರತಿಯೋಜಿಸಿ, ದಿನಾಂಕ:15.06.2024ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಆಇ 31 ಸಿಎಸ್ಎಲ್ 2024.

**<u>1976ರ ಕರ್ನಾಟಕ ವೃತ್ತಿ ತೆರಿಗೆ ಅಧಿನಿಯಮದ ಪ್ರಕರಣ 33(3)ರ ಮೇರೆಗೆ:</u>**

1. 1976ರ ಕರ್ನಾಟಕ ವೃತ್ತಿಗಳ, ಕಸುಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆಗಳನ್ನು ನಿರ್ದಿಷ್ಟಪಡಿಸಿ, ದಿನಾಂಕ:06.05.2023ರಂದು ಹೊರಡಿಸಲಾದ ತೊಂದರೆಗಳ ನಿವಾರಣೆ ಆದೇಶ ಸಂಖ್ಯೆ:(01/2023) ಆಇ 06 ಸಿಪಿಟಿ 2023.

2. 1976ರ ಕರ್ನಾಟಕ ವೃತ್ತಿಗಳ, ಕಸುಬುಗಳ, ಅಜೀವಿಕೆಗಳ ಮತ್ತು ಉದ್ಯೋಗಗಳ ಮೇಲಣ ತೆರಿಗೆಯ ಪ್ರಕರಣ 10ರ ತಿದ್ದುಪಡಿಗೊಳಿಸಿ, ದಿನಾಂಕ:30.05.2024ರಂದು ಹೊರಡಿಸಲಾದ ತೊಂದರೆಗಳ ನಿವಾರಣೆ ಆದೇಶ ಸಂಖ್ಯೆ:(01/2024) ಆಇ 02 ಸಿಪಿಟಿ 2024 ಮಂಡಿಸುತ್ತಿದ್ದೇನೆ.

**ಸಭಾಪತಿಯವರು:** ಮಂಡಿಸಲಾಯಿತು.

**ಸಭೆಯ ಮುಂದಿಡಲಾದ ಕಾಗದ ಪತ್ರಗಳ ಪಟ್ಟಿ**

**(ನಾಲ್ಕನೇ ಪಟ್ಟಿ)**

**ಗುರುವಾರ, ದಿನಾಂಕ: 25ನೇ ಜುಲೈ 2024**

****

I. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ,

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ, 1951ರ ಕಲಂ 37(7) ರನ್ವಯ

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ 2022-23ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

II. **ಶ್ರೀ ಡಿ.ಕೆ. ಶಿವಕುಮಾರ್ (ಉಪ ಮುಖ್ಯಮಂತ್ರಿಗಳು) ಬೃಹತ್ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರಾಭಿವೃದ್ಧಿ (ಬೆಂಗಳೂರು ನಗರ ಯೋಜನೆಗೆ ಸಂಬಂಧಿಸಿದಂತೆ ಬಿಬಿಎಂಪಿ, ಬಿಡಿಎ, ಬಿಡಬ್ಲ್ಯೂಎಸ್ಎಸ್‌ಬಿ, ಬಿಎಂಆರ್‌ಡಿಎ, ಬಿಎಂಆರ್‌ಸಿಎಲ್ ಪ್ರಾಧಿಕಾರಗಳು)**

**ಕಾಡಾ ಅಧಿನಿಯಮ 1980ರ ಕಲಂ 24(2) ಮತ್ತು 25ರನ್ವಯ**

ಕಾಡಾ ಭದ್ರಾ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಶಿವಮೊಗ್ಗ ಇದರ 2021-22ನೇ ಸಾಲಿನ ವಾರ್ಷಿಕ ಮತ್ತು 2019-20ನೇ ಸಾಲಿನ ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

III. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಆಕ್ಟ್ (ಕರ್ನಾಟಕ ಆಕ್ಟ್ 22 ಆಫ್ 1986) ರನ್ವಯ**

ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ, ಬೆಂಗಳೂರು ಇದರ 2021-22ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

IV. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಸಾರಿಗೆ ಮತ್ತು ಮುಜರಾಯಿ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**ರಸ್ತೆ ಸಾರಿಗೆ ನಿಗಮಗಳ ಅಧಿನಿಯಮ, 1950ರ ಅನುಚ್ಛೇಧ 33 ರಡಿ**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ 2022-23ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

V. **ಶ್ರೀ ಎಂ.ಬಿ.ಪಾಟೀಲ್ (ಬೃಹತ್& ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಕರ್ಯ ಅಭಿವೃದ್ಧಿ ಸಚಿವರು): ಮಾನ್ಯ ಸಭಾಪತಿಯವರೇ,**

**ಕಂಪನಿ ಕಾಯ್ದೆ, 2013ರ ಕಲಂ 394ರನ್ವಯ**

ಹಾಸನ-ಮಂಗಳೂರು ರೈಲ್ವೇ ಅಭಿವೃದ್ಧಿ ಕಂಪನಿ ನಿಯಮಿತದ 2021-22ನೇ ಸಾಲಿನ ವಾರ್ಷಿಕ ವರದಿ(ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ) ಮಂಡಿಸುತ್ತಿದ್ದೇನೆ.

VI. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಸಮಾಜ ಕಲ್ಯಾಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**ಕಂಪನಿ ಕಾಯ್ದೆ, 2013ರ ನಿಯಮ 395ರನ್ವಯ**

ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದ 2020-21ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

VII. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು)(ಕಂದಾಯ (ಮುಜರಾಯಿ ಹೊರತುಪಡಿಸಿ) ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಸೆಕ್ಷನ್ 12(7)ರನ್ವಯ**

ಶ್ರೀ ಲಿಂಗಪ್ಪಗೌಡ ನಿವೃತ್ತ ತಹಶೀಲ್ದಾರ್, ಕೊಪ್ಪ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧ ತೆಗೆದುಕೊಂಡ ಕ್ರಮದ ಬಗ್ಗೆ ಮಾನ್ಯ ಉಪ ಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯನ್ನು ಮಂಡಿಸುತ್ತಿದ್ದೇನೆ.

**VIII. ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ):- ಮಾನ್ಯ ಸಭಾಪತಿಯವರೇ,**

**ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಅನುಚ್ಛೇದ 262(3)ರಂತೆ**

ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್‌ನ 2022-23ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

IX. **ಶ್ರೀ ಬಿ.ಝೆಡ್.ಜಮೀರ್ ಅಹ್ಮದ್‌ಖಾನ್ (ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):- ಮಾನ್ಯ ಸಭಾಪತಿಯವರೇ,**

**(1) ಕರ್ನಾಟಕ ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಗಳು, 2016ರ ಕಲಂ 77(4) ಮತ್ತು ಕರ್ನಾಟಕ ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಗಳು 2017ರ ನಿಯಮ 48(4)ರನ್ವಯ**

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ 2017-18 ಮತ್ತು 2018-19ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳು.

(2) **ಕರ್ನಾಟಕ ಕೊಳಚೆ ಪ್ರದೇಶಗಳ(ಅಭಿವೃದ್ಧಿ ಮತ್ತು ನಿರ್ಮೂಲನೆ) ಕಾಯ್ದೆ 1973ರ ಸೆಕ್ಷನ್-41 ರೊಡನೆ ಓದಿಕೊಂಡಂತೆ Comptroller and Auditor General (Duties, Powers and Conditions of Service) Act, 1971, ಸೆಕ್ಷನ್ 19(3)ರ ಪ್ರಕಾರ**

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಬೆಂಗಳೂರು ಇದರ 2021-22ನೇ ಸಾಲಿನ ವಾರ್ಷಿಕ ವರದಿ ಮತ್ತು 2020-21ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

**(3) ಕಂಪನಿ ಕಾಯ್ದೆ, ಸೆಕ್ಷನ್ 619ಎ(3) ರನ್ವಯ ಮತ್ತು ಕರ್ನಾಟಕ ಗೃಹ ಮಂಡಳಿಯ ಕಾಯ್ದೆ, 1962ರ ಕಲಂ 69ರನ್ವಯ**

1. ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತದ 2022-23ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ಗೃಹ ಮಂಡಳಿಯ 2023-24ನೇ ಸಾಲಿನ ವಾರ್ಷಿಕ ವರದಿ (ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ) ಮಂಡಿಸುತ್ತಿದ್ದೇನೆ.

**X. ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರ ಪರವಾಗಿ) :-**
ಮಾನ್ಯ ಸಭಾಪತಿಯವರೇ,

**ಕಂಪನಿ ಕಾಯ್ದೆ, 2013 ರಂತೆ**

ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತದ 2022-23ನೇ ಸಾಲಿನ ವಾರ್ಷಿಕ ವರದಿ(ಲೆಕ್ಕಪರಿಶೋಧನಾ ವರದಿ ಒಳಗೊಂಡಂತೆ) ಮಂಡಿಸುತ್ತಿದ್ದೇನೆ.

XI. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು)(ಸಹಕಾರ (ಕೃಷಿ ಮಾರುಕಟ್ಟೆ ಹೊರತುಪಡಿಸಿದಂತೆ) ಸಚಿವರ ಪರವಾಗಿ) :-** ಮಾನ್ಯ ಸಭಾಪತಿಯವರೇ,

**ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಕಾಯ್ದೆ, 1965 ಸೆಕ್ಷನ್ 31(11)ರನ್ವಯ**

ಕರ್ನಾಟಕ ರಾಜ್ಯ ಉಗ್ರಾಣ ನಿಗಮದ 2021-22ನೇ ಸಾಲಿನ ವಾರ್ಷಿಕ ವರದಿ ಮತ್ತು

ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

XII. **ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ನಗರಾಭಿವೃದ್ಧಿ ಮತ್ತು ನಗರ ಯೋಜನೆ (ಕೆಯುಡಬ್ಲ್ಯೂಎಸ್‌ಡಿಬಿ ಮತ್ತು ಕೆಯುಐಡಿಎಫ್‌ಸಿ ಸೇರಿದಂತೆ) ಬೆಂಗಳೂರು ನಗರಾಭಿವೃದ್ಧಿ ಹೊರತುಪಡಿಸಿದಂತೆ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**(1) ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ, 1987ರ ಕಲಂ 48(5) ರನ್ವಯ**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ 2021-22ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

**(2) ಕಂಪನಿಗಳ ಕಾಯ್ದೆ ಸೆಕ್ಷನ್ 394 & 395 ರಂತೆ**

ಹುಬ್ಬಳ್ಳಿ-ಧಾರವಾಡ ಬಿಆರ್‌ಟಿಎಸ್ ಕಂಪನಿ ಲಿಮಿಟೆಡ್ ಸಂಸ್ಥೆಯ 2018-19 ರಿಂದ 2022-23ನೇ ಸಾಲಿನವರೆಗಿನ ವಾರ್ಷಿಕ(ಲೆಕ್ಕಪರಿಶೋಧನಾ ವರದಿಗಳು ಒಳಗೊಂಡಂತೆ).

**XIII. ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ) :-** ಮಾನ್ಯ ಸಭಾಪತಿಯವರೇ,

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ-1966ರ ನಿಯಮ 25ರನ್ವಯ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ, ಬೆಂಗಳೂರು ಇದರ 2022-23ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

**XIV. ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು) (ಉನ್ನತ ಶಿಕ್ಷಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ,

**(1) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಅಧಿನಿಯಮ, 1992ರ ಅಧಿನಿಯಮ 27(4) ಪ್ರಕರಣದನ್ವಯ**

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು, ಇದರ 2020-21ನೇ ಸಾಲಿನ ಲೆಕ್ಕಪರಿಶೋಧನಾ ವರದಿಗೆ ಲೆಕ್ಕ ತಪಾಸಣಾ ವರದಿ.

**(2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 50ರ ಉಪ ಪ್ರಕರಣ 2 ರಂತೆ ಮತ್ತು ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಅಧಿನಿಯಮ, 2000 ಪರಿಚ್ಛೇದ 47 ರನ್ವಯ**

1. ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ, ಇದರ

2019-20 ಮತ್ತು 2020-21ನೇ ಸಾಲಿನ ಲೆಕ್ಕಪರಿಶೋಧನಾ ವರದಿಗಳು.

2. ಮಂಗಳೂರು ವಿಶ್ವವಿದ್ಯಾಲಯದ 2022-23ನೇ ಸಾಲಿನ ವಾರ್ಷಿಕ ವರದಿ.

**(3) ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಅಧಿನಿಯಮ, 2010ರ ಪ್ರಕರಣ 20(2)ರನ್ವಯ**

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್‌ನ 2020-21 ಮತ್ತು 2021-22ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುತ್ತಿದ್ದೇನೆ.

**ಸಭಾಪತಿಯವರು:** ಮಂಡಿಸಲಾಯಿತು.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**5. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಅ) ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024 ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, 2024-25ರ ಈ ಆರ್ಥಿಕ ವರ್ಷದಲ್ಲಿ ಪೂರಕ ಅಂದಾಜುಗಳ ಮೊದಲನೇ ಕಂತನ್ನು ಮಂಡಿಸುತ್ತಿದ್ದೇನೆ.

**(ಈ ಹಂತದಲ್ಲಿ ಸದನದಲ್ಲಿ ಬಿ.ಜೆ.ಪಿ ಮತ್ತು ಜೆ.ಡಿ(ಎಸ್) ಪಕ್ಷದ ಸದಸ್ಯರುಗಳು ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಿದ್ದರು)**

**ಸಭಾಪತಿಯವರು:-** ಇದು ಧನವಿನಿಯೋಗ ವಿಧೇಯಕ. At least ...

**ಶ್ರೀ ಸಿದ್ಧರಾಮಯ್ಯ:-** ಮಾನ್ಯ ಸಭಾಪತಿಯವರೇ, ಪೂರಕ ಅಂದಾಜುಗಳಲ್ಲಿ ರೂ. 8573.2 ಕೋಟಿಗಳನ್ನು ಒದಗಿಸಲಾಗಿದೆ. ಅದರಲ್ಲಿ ರೂ. 7865.41 ಕೋಟಿಗಳನ್ನು ರಾಜಸ್ವ ವೆಚ್ಚ, ರೂ. 708.31 ಕೋಟಿ ಬಂಡವಾಳ ವೆಚ್ಚ ಒಟ್ಟು ಖಜಾನೆಯಿಂದ ಹೊರಗಡೆ ಹೋಗುತ್ತಿರುವುದು, outflow ಆಗುತ್ತಿರುವುದು ರೂ. 1342 ಕೋಟಿ 79 ಲಕ್ಷ. ಈ ಪೂರಕ ಅಂದಾಜುಗಳಲ್ಲಿ ಹೆಚ್ಚಾಗಿ ಕೇಂದ್ರದಿಂದ ಎನ್.ಡಿ.ಆರ್.ಎಫ್.ನಲ್ಲಿ ರೂ. 3,454.22 ಕೋಟಿ ಬಂದಿದೆ. ಅದನ್ನು ಸೇರಿಸಿದ್ದೇವೆ. ಅದು account adjustment. ಆಮೇಲೆ ಗ್ರಾಮೀಣ ರಸ್ತೆಗಳಿಗೆ ರೂ. 450 ಕೋಟಿಗಳನ್ನು ಕೊಟ್ಟಿದ್ದೇವೆ. ಕರ್ನಾಟಕ ರಾಜ್ಯ (ಗೊಂದಲ) ನಿಧಿಯಿಂದ ರೂ. 250 ಕೋಟಿಗಳನ್ನು ಕೊಟ್ಟಿದ್ದೇವೆ. (ಗೊಂದಲ) National Housing Bank ನಿಂದ ಪಡೆದ ಸಾಲದಲ್ಲಿ ರೂ. 200 ಕೋಟಿಗಳನ್ನು ಕೊಟ್ಟಿದ್ದೇವೆ . . . ಕಾಮಗಾರಿಗಳು. ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ ಕೆಲಸಕ್ಕೆ ರೂ. 165 ಕೋಟಿ ಕೊಟ್ಟಿದ್ದೇವೆ. PMAY

(Pradhan Mantri Awas Yojana) ಯೋಜನೆಯಡಿ ಅನುಷ್ಠಾನಗೊಳಿಸುವ ಮನೆಗಳಿಗೆ ರಾಜ್ಯದ ವಂತಿಗೆ ಪಾಲು 100 ಕೋಟಿ ರೂಪಾಯಿಗಳನ್ನು, ರಾಜ್ಯದಲ್ಲಿ ವಿವಿಧ ಮಠಗಳು ಮತ್ತು ದೇವಾಲಯಗಳಿಗೆ ಮುಖ್ಯಮಂತ್ರಿಗಳ ವಿಶೇಷ ಸಹಾಯ ಧನ ರೂ. 85 ಕೋಟಿ, ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ ಆರೋಗ್ಯ ಮೂಲಸೌಕರ್ಯ ಅಭಿಯಾನ ಕೇಂದ್ರ ಮತ್ತು ರಾಜ್ಯದ ಪಾಲು ರೂ. 71.38 ಕೋಟಿ, ವಿವಿಧ ಸಮುದಾಯಗಳ ಅಭಿವೃದ್ಧಿಗೆ ರೂ. 70 ಕೋಟಿ;

**ಸಭಾಪತಿಯವರು:-** ಇದು money bill.

**ಶ್ರೀ ಸಿದ್ದರಾಮಯ್ಯ:-** ಸಾಂಸ್ಕೃತಿಕ ಸೇವೆಗಳಿಗೆ ರೂ. 56.23 ಕೋಟಿ, ಅಲ್ಪಸಂಖ್ಯಾತರ ಯೋಜನೆಗಳನ್ನು ಅನುಷ್ಠಾನಗೊಳಿಸಲು ರೂ. 52.05 ಕೋಟಿ, ರಾಷ್ಟ್ರೀಯ ಶಿಕ್ಷಣ ಅಭಿಯಾನದ ರಾಜ್ಯದ ಪಾಲಿನ ಅನುದಾನ ರೂ. 36.45 ಕೋಟಿ, ಹುಬ್ಬಳ್ಳಿ-ಧಾರವಾಡ ಸ್ಮಾರ್ಟ್ ಸಿಟಿ CITIIS (City Investments to Innovate, Integrate and Sustain) challenge - ಅದಕ್ಕೆ ರೂ. 35.68 ಕೋಟಿ. ಒಟ್ಟು ರೂ. 5052 ಕೋಟಿ 09 ಲಕ್ಷ. ಇನ್ನಿತರ ಉದ್ದೇಶಗಳಿಗೆ ರೂ. 3,551.63 ಲಕ್ಷ, ಒಟ್ಟು ಪೂರಕ ಅಂದಾಜುಗಳು ರೂ. 8,573.72 ಕೋಟಿ ಇದನ್ನು 'ಸಂವಿಧಾನ'ದಲ್ಲಿ ಅನುಚ್ಛೇದ 205 ಕ್ಲಾಸ್ (1)(ಎ)ರಲ್ಲಿ ಅವಕಾಶ ಮಾಡಿಕೊಡಲಾಗಿದೆ. ಒಟ್ಟು ಬಜೆಟ್ ಗಾತ್ರದ ಶೇಕಡ 2.25 ರಷ್ಟು ಬರುತ್ತದೆ. ಇದನ್ನು ಸದನವು ಅನುಮೋದಿಸಿಕೊಡಬೇಕೆಂದು ತಮ್ಮ ಮೂಲಕ ಮನವಿ ಮಾಡಿಕೊಳ್ಳುತ್ತೇನೆ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಒಂದು ನಿಮಿಷ. ನಾವು ಯಾವುದೇ ಬಿಲ್‌ಗೆ ವಿರೋಧ ಇಲ್ಲ (ಗೊಂದಲ)

**ಶ್ರೀ ಸಿದ್ದರಾಮಯ್ಯ:-** ಶ್ರೀ ಬಿ.ಎಸ್. ಯಡಿಯೂರಪ್ಪ, ಶ್ರೀ ಹೆಚ್.ಡಿ. ಕುಮಾರಸ್ವಾಮಿ, ಶ್ರೀ ಬಸವರಾಜ ಬೊಮ್ಮಾಯಿ (ಗೊಂದಲ)

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಕದಡಿದ ನೀರಿನಲ್ಲಿ ಮೀನು ಹಿಡಿಯುವುದಕ್ಕೆ ಅವಕಾಶ ಕೊಡುವುದು. ಇದು ಆಗಬಾರದಾಗಿತ್ತು. ನಾವೇನು ವಿರೋಧ ಇದ್ದೇವೇ? ನಮಗೆ ಚರ್ಚೆಗೆ ಅವಕಾಶ ಕೊಡದೇ ಕದಡಿದ ನೀರಿನಲ್ಲಿ ಮೀನು ಹಿಡಿಯುವ ಕೆಲಸವನ್ನು ಮಾಡಿಸುತ್ತಿದ್ದೀರಿ. ಇದು ಸರಿಯಾದ ಕ್ರಮವಲ್ಲ. ಸದನವು ಆರ್ಡರ್‌ನಲ್ಲಿಲ್ಲ.

(ಮುಂದು)

(687) 25-07-2024 11-50 KH/VK (ಸಭಾಪತಿಯವರ ಉಪಸ್ಥಿತಿ)

**(ಗೊಂದಲ)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ಮುಂದು):**

ಆದರೂ, ನೀವು ಈ ರೀತಿ ಮಾಡಬಾರದಿತ್ತು. ದಯವಿಟ್ಟು, ಮುಖ್ಯಮಂತ್ರಿಗಳಿಗೆ ಹೇಳಿ. ಕದಡಿದ ನೀರಿನಲ್ಲಿ ಮೀನು ಹಿಡಿಯುವಂತಹ ಕೆಲಸವನ್ನು ಮಾಡಬಾರದು. ನಾವು ಬಿಲ್‌ಗೆ ವಿರೋಧ ಇದ್ದೇವೆಯೇನು?

**(ಗೊಂದಲ)**

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಬಿಜೆಪಿ ಮತ್ತು ಜೆಡಿ(ಎಸ್) ಪಕ್ಷದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

> "ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ಮತ್ತು 3**

**ಸಭಾಪತಿಯವರು:-** "ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ಮತ್ತು 3 ಅನ್ನು ವಿಧೇಯಕಕ್ಕೆ ಸೇರಿಸಲಾಯಿತು)

**(ಗೊಂದಲ)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**(ಗೊಂದಲ)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಕದಡಿದ ನೀರಿನಲ್ಲಿ ಮೀನು ಹಿಡಿಯುವಂತಹ ಕೆಲಸವನ್ನು ಸರ್ಕಾರ ಮಾಡುತ್ತಿದೆ. ನೀವು ಅವಕಾಶ ಕೊಡುತ್ತಿದ್ದೀರಾ. ಇದು ಅಕ್ಷಮ್ಯ. ಈ ರೀತಿ ಮಾಡಬಾರದಿತ್ತು. ನಾನು ವಿಧೇಯಕಗಳಿಗೆ ವಿರೋಧ ಇರಲಿಲ್ಲ. ಅದರ ಚರ್ಚೆಗೆ ಸರ್ಕಾರ ಸಿದ್ಧ ಇಲ್ಲ. ಫಲಾಯನ ಮಾಡುವಂತಹ ಸರ್ಕಾರ ಇದು. ಇವತ್ತು ಚರ್ಚೆಯಾಗಿದ್ದರೆ ಅದರ ಇತಿಹಾಸ ಏನೆಂಬುದು ಜನರಿಗೆ ಅರ್ಥವಾಗುತ್ತಿತ್ತು. ಇದರ ಬಗ್ಗೆ ಗೊತ್ತಾಗಬೇಕು. ತಮ್ಮದೇ ಜಮೀನು ಎಂದು ಇದ್ದರೂ, ಇವರು ನಿವೇಶನಗಳನ್ನು ಹೇಗೆ ಪಡೆದರು?

**ಪ್ರಸ್ತಾವದ ಅಂಗೀಕಾರ**

**ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಧನವಿನಿಯೋಗ (ಸಂಖ್ಯೆ-4) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**(ಗೊಂದಲ)**

**ಆ) ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಸಂತೋಷ್ ಎಸ್.ಲಾಡ್ (ಕಾರ್ಮಿಕ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಸಭಾಪತಿಯವರು:-** ಮಾನ್ಯ ಸಚಿವರೇ, ಈ ವಿಧೇಯಕದ ಬಗ್ಗೆ ಏನಾದರೂ ಹೇಳುವುದು ಇದೆಯೇ?

**ಶ್ರೀ ಸಂತೋಷ್ ಎಸ್.ಲಾಡ್ (ಕಾರ್ಮಿಕ ಸಚಿವರು):-** ಮಾನ್ಯ ಸಭಾಪತಿಯವರೇ, ನಮ್ಮ ಕನ್ನಡ ಫಿಲ್ಮ್ ಇಂಡಸ್ಟ್ರಿ ಪ್ರಾರಂಭವಾಗಿ 100 ವರ್ಷಗಳಾಗುವುದಕ್ಕೆ ಬಂದಿದೆ. ಕನ್ನಡ ಫಿಲ್ಮ್ ಇಂಡಸ್ಟ್ರಿ ಎಂದು ನಾವು ಏನು ಹೇಳುತ್ತೇವೆ, ಈ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಕ್ಷೇಮಾಭಿವೃದ್ಧಿಗಾಗಿ ನಾವು ಈ ವಿಧೇಯಕವನ್ನು ತಂದಿದ್ದೇವೆ. ಇದರಿಂದಾಗಿ ಸುಮಾರು ನೂರಾರು ವರ್ಷಗಳಿಂದ ಅವರ ಕ್ಷೇಮಾಭಿವೃದ್ಧಿಗೆ ಅವಕಾಶ ಇಲ್ಲದಿರುವಂತಹ ಎಲ್ಲಾ ಹಸಿವು ಇರುವಂತಹ ಕಾರ್ಮಿಕರ ಕುಟುಂಬಕ್ಕೆ ಅನುಕೂಲವಾಗುವಂತಹ ದೃಷ್ಟಿಯಿಂದ ಈ ವಿಧೇಯಕವನ್ನು ತರಲಾಗಿದ್ದು, ಇದು ವಿಶೇಷವಾಗಿ . . .

(**ಗೊಂದಲ**)

**ಶ್ರೀ ಸಂತೋಷ್ ಎಸ್.ಲಾಡ್:-** ಮಾನ್ಯ ಸಭಾಪತಿಯವರೇ, ಈ ಒಂದು ಫಂಡ್ ಅನ್ನು ಬೋರ್ಡ್ ಮುಖಾಂತರ ನೀಡಲಾಗುತ್ತಿದ್ದು, ಇದರಿಂದ ಸುಮಾರು 50,000 ಕ್ಕೂ ಹೆಚ್ಚು ಕಾರ್ಮಿಕರಿಗೆ ಅನುಕೂಲವಾಗಲಿದೆ. ಈ ಒಂದು ಇಂಡಸ್ಟ್ರಿಯಲ್ಲಿರುವಂತಹ ಎಲ್ಲಾ ಕಾರ್ಮಿಕರಿಗೆ ಹಾಗೂ ಇದರಲ್ಲಿ ವಿಶೇಷವಾಗಿ ಕರ್ನಾಟಕ ನಾಟಕ

ಅಕಾಡೆಮಿಯವರು, ಕರ್ನಾಟಕ ಸಂಗೀತ-ನೃತ್ಯ ಅಕಾಡೆಮಿಯವರು, ಕರ್ನಾಟಕ ಜಾನಪದ ಅಕಾಡೆಮಿಯವರು, ಕರ್ನಾಟಕ ಲಲಿತಕಲಾ ಅಕಾಡೆಮಿಯವರು, ಕರ್ನಾಟಕ ಯಕ್ಷಗಾನ ಅಕಾಡೆಮಿಯವರು ಮತ್ತು ಕರ್ನಾಟಕ ಬಯಲಾಟ ಅಕಾಡೆಮಿಯವರು ಬರುತ್ತಾರೆ. ಜೊತೆಗೆ ಇನ್ನು ಬೇರೆ ಬೇರೆಯವರು ಸಹ ಸೇರುತ್ತಾರೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 23 ರವರೆಗೆ**

**ಸಭಾಪತಿಯವರು:-** "ಖಂಡ 2 ರಿಂದ 23 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 23 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಸಂತೋಷ್ ಎಸ್.ಲಾಡ್ (ಕಾರ್ಮಿಕ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ವಿಧೇಯಕವನ್ನು ಅಂಗೀಕರಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**ಇ) ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ಈ ತಿದ್ದುಪಡಿಯನ್ನು ಕೇಂದ್ರ ಸರ್ಕಾರ ಮಾಡಿದೆ. ಅದನ್ನು ನಾವು ಅನುಸರಿಸುತ್ತಿದ್ದೇವೆ.

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 4 ರವರೆಗೆ**

**ಸಭಾಪತಿಯವರು:–** "ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಶ್ರೀ ಬಿ.ಝಡ್. ಜಮೀರ್ ಅಹ್ಮದ್ ಖಾನ್ (ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು):–** ಮಾನ್ಯ ಸಭಾಪತಿಯವರೇ, ಇವರಿಗೆ ಡಾ॥ ಬಿ.ಆರ್.ಅಂಬೇಡ್ಕರ್‌ರವರ ಬಗ್ಗೆ ಎಷ್ಟು ಕಾಳಜಿ ಇದೆ? ಕೇಂದ್ರದ ಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಮಾನ್ಯ ಆಟಲ್ ಬಿಹಾರಿ ವಾಜಪೇಯಿರವರು ನಾವು ಬಂದಿರುವುದೇ (ಗೊಂದಲ) ಎಂದು ಹೇಳಿದ್ದಾರೆ. ಈಗ ನೀವು ಡಾ॥ ಬಿ.ಆರ್.ಅಂಬೇಡ್ಕರ್‌ರವರ ಬಗ್ಗೆ ಮಾತನಾಡುತ್ತೀರಾ?

**(ಗೊಂದಲ)**

**ಖಂಡ 1 ಇತ್ಯಾದಿ**

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**“ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು”**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**6. ಚುನಾವಣಾ ಪ್ರಸ್ತಾವಗಳು**

**“ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ, ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಹಾಗೂ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶಿಸಲು ಅಧಿಕಾರ ನೀಡುವ ಪ್ರಸ್ತಾವ”**

– – –

**ಶ್ರೀ ಎನ್.ಎಸ್. ಬೋಸರಾಜು (ಸಭಾನಾಯಕರು):-** ಮಾನ್ಯ ಸಭಾಪತಿಯವರೇ,

“ವಿಧಾನ ಮಂಡಲದ/ವಿಧಾನ ಪರಿಷತ್ತಿನ ವಿವಿಧ ಸಮಿತಿಗಳಿಗೆ, ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮನಿರ್ದೇಶಿಸಲು ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸೆನೆಟ್‌ಗೆ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿಗೆ ಚುನಾವಣೆ ನಡೆಸುವ ಬದಲು ಮಾನ್ಯ

ಸದಸ್ಯರುಗಳನ್ನು ನಾಮನಿರ್ದೇಶಿಸಲು ಹಾಗೂ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶನ ಮಾಡಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಈ ಸದನದಲ್ಲಿ ಮಂಡಿಸುತ್ತಿದ್ದೇನೆ".

**ಸಭಾಪತಿಯವರು:-** ಮಾನ್ಯ ಸಭಾನಾಯಕರು ಮಂಡಿಸಿರುವಂತಹ ಪ್ರಸ್ತಾವನೆಗೆ ಸದನದ ಸಹಮತಿ ಇದೆ ಎಂದು ಭಾವಿಸುತ್ತೇನೆ.

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**7. ವರದಿಗಳನ್ನೊಪ್ಪಿಸುವುದು**

**ಅ) ಶ್ರೀ ರಾಜೇಂದ್ರ ರಾಜಣ್ಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)(ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ):-** ಮಾನ್ಯ ಸಭಾಪತಿಯವರೇ, 2023-24ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಆ) ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರ)-** ಮಾನ್ಯ ಸಭಾಪತಿಗಳೇ, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಮಿತಿ ಸದಸ್ಯನಾದ ನಾನು 2023-24ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೇ ವರದಿಯನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಸಭಾಪತಿಯವರು:-** ವರದಿಗಳನ್ನೊಪ್ಪಿಸಲಾಯಿತು.

(ಮುಂದು)

(688)25.7.2024 12.00 ಪಿಕೆ:ವಿಕೆ (ಸಭಾಪತಿಗಳ ಉಪಸ್ಥಿತಿ)

**8. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಈ) ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಡಿ.ಕೆ.ಶಿವಕುಮಾರ್(ಉಪ ಮುಖ್ಯಮಂತ್ರಿಗಳು):- ಮಾನ್ಯ ಸಭಾಪತಿಯವರೇ, ಕರ್ನಾಟಕ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.**

**ಪ್ರಸ್ತಾವವನ್ನು ಮಂಡಿಸಲಾಯಿತು**

**(ಗೊಂದಲ)**

**ಶ್ರೀ ಡಿ.ಕೆ.ಶಿವಕುಮಾರ್(ಉಪ ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಗಳೇ, ಕರ್ನಾಟಕ ರಾಜ್ಯದಲ್ಲಿ 1964ರಲ್ಲಿ ಈ ಒಂದು ವಿಧೇಯಕವನ್ನು ತರಲಾಗಿತ್ತು. ಅದಾದ ಮೇಲೆ ಇದರ 65ನೇ ಅಧಿನಿಯಮವನ್ನು ಮತ್ತಷ್ಟು ತಿದ್ದುಪಡಿ ಮಾಡಿ ಈ ವಿಧೇಯಕವನ್ನು ತಂದಿದ್ದೇವೆ. **(ಗೊಂದಲ)** ಕಾನೂನುಬಾಹಿರವಾಗಿ ನೀರಿನ ಕೊಳವೆಗಳನ್ನು ಹಾಕುವುದನ್ನು ತಡೆಯಲು ಮತ್ತು ತದನುಸಾರವಾಗಿ ಕೊನೆಯ ಫಲಾನುಭವಿಗಳಿಗೆ ನೀರು ತಲುಪುವಂತೆ ನೋಡಿಕೊಳ್ಳಬೇಕು ಮತ್ತು ರೈತರ ಹಿತದೃಷ್ಟಿಯನ್ನು ಕಾಪಾಡಬೇಕು ಎನ್ನುವುದು ಇದರ ಉದ್ದೇಶವಾಗಿದೆ. ನಮ್ಮ ಅಧಿಕಾರಿಗಳು ರೆವಿನ್ಯೂ ತರಹ ಕೇಸ್‌ಗಳನ್ನು ತೆಗೆದುಕೊಂಡು ತಪ್ಪಿತಸ್ಥರಿಗೆ ಶಿಕ್ಷೆ ಕೊಡುವಂತಹ **(ಗೊಂದಲ)** ಕಾರ್ಯಕ್ರಮವನ್ನು ರೂಪಿಸಿದ್ದೇವೆ. ನಾಲೆಯ ಮಧ್ಯರೇಖೆಯಿಂದ ಐದು ನೂರು ಮೀಟರ್‌ಗಳ ಒಳಗೆ ಯಾರು ತೆಗೆಸುತ್ತಾರೋ ಅವರು ಅನುಮತಿ ತೆಗೆದುಕೊಳ್ಳಬೇಕಾಗುತ್ತದೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 17 ರವರೆಗೆ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ, "ಖಂಡ 2 ರಿಂದ 17ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 17 ರವರೆಗೆ ಈ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಪ್ರಸ್ತಾವದ ಅಂಗೀಕಾರ**

**ಶ್ರೀ ಡಿ.ಕೆ.ಶಿವಕುಮಾರ್ (ಉಪ ಮುಖ್ಯಮಂತ್ರಿಗಳು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

**ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**9. ಸರ್ಕಾರಿ ನಿರ್ಣಯಗಳು**

**ಅ) ವಿಷಯ: ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮತ್ತು ರಾಜ್ಯದ ವಿಧಾನಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿನ್ನಾಧಾರಿಸಿ ನಿರ್ಧರಿಸುವ ಬಗ್ಗೆ.**

**ಶ್ರೀ ಸಿದ್ದರಾಮಯ್ಯ(ಮುಖ್ಯ ಮಂತ್ರಿಗಳು):-** ಮಾನ್ಯ ಸಭಾಪತಿಗಳೇ, ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ.

**"1971ರ ಜನಗಣತಿ ಆಧಾರದ ಮೇಲೆ ಡೀಲಿಮಿಟೇಷನ್ ಮಾಡಬೇಕು ಎನ್ನುವುದು ಸರ್ವಾನುಮತದ ನಿರ್ಣಯವಾಗಬೇಕು"** ಕರ್ನಾಟಕ ವಿಧಾನ ಸಭೆಯು 2026ರಲ್ಲಿನ ಅಥವಾ ಅದರ ನಂತರ ನಡೆಸುವ ಹೊಸ ಜನಗಣತಿಯ ಆಧಾರದ ಮೇಲೆ ಕ್ಷೇತ್ರ ಪುನರ್ ವಿಂಗಡಣಾ ಪ್ರಕ್ರಿಯೆಯನ್ನು ನಡೆಸಬಾರದೆಂದು ಜನಸಂಖ್ಯೆಯನ್ನು ಆಧಾರಿಸಿ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸುವ ಸಂದರ್ಭದಲ್ಲಿ, ಪ್ರತಿ ರಾಜ್ಯಕ್ಕೆ ಹಂಚಿಕೆ ಮಾಡಬೇಕಾದ ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮತ್ತು ಪ್ರತಿ ರಾಜ್ಯದ ವಿಧಾನಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿಯನ್ನಾಧರಿಸಿ ನಿರ್ಧರಿಸಬೇಕೆಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸುವ ನಿರ್ಣಯವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**<u>ನಿರ್ಣಯವನ್ನು ಮಂಡಿಸಲಾಯಿತು</u>**

**ಸಭಾಪತಿಯವರು:- ಪ್ರಸ್ತಾವ ಏನೆಂದರೆ,**

"ಲೋಕಸಭಾ ಸ್ಥಾನಗಳ ಸಂಖ್ಯೆಯನ್ನು ಮತ್ತು ರಾಜ್ಯದ ವಿಧಾನಸಭೆಗೆ ನಿಗದಿಪಡಿಸಬೇಕಾದ ಸ್ಥಾನಗಳ ಒಟ್ಟು ಸಂಖ್ಯೆಯನ್ನು 1971ರ ಜನಗಣತಿಯನ್ನಾಧಾರಿಸಿ ನಿರ್ಧರಿಸುವ ಬಗೆಗಿನ ನಿರ್ಣಯವನ್ನು ಅಂಗೀಕರಿಸುವುದು"

**<u>ನಿರ್ಣಯ ಅಂಗೀಕೃತವಾಯಿತು ಮತ್ತು ನಿರ್ಣಯಕ್ಕೆ ಸದನದ ಅನುಮೋದನೆ ದೊರೆಯಿತು</u>**

**ಆ) ವಿಷಯ: ಕೇಂದ್ರದ "ಒಂದು ರಾಷ್ಟ್ರ, ಒಂದು ಚುನಾವಣೆ" ನೀತಿಯನ್ನು ಅನುಷ್ಠಾನ ಮಾಡಬಾರದು ಎನ್ನುವ ಬಗ್ಗೆ.**

\- - - -

**ಶ್ರೀ ಸಿದ್ದರಾಮಯ್ಯ(ಮುಖ್ಯ ಮಂತ್ರಿಗಳು):-** ಮಾನ್ಯ ಸಭಾಪತಿಗಳೇ, ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ:

"ಒಂದು ರಾಷ್ಟ್ರ, ಒಂದು ಚುನಾವಣೆ" ಎಂದು ಕೇಂದ್ರ ಸರ್ಕಾರ ಮಾಜಿ ರಾಷ್ಟ್ರಪತಿಗಳ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ಮಾಡಿ, ಅದರ ವರದಿಯ ಆಧಾರದ ಮೇಲೆ ಕಾರ್ಯಗತ ಮಾಡುವುದಕ್ಕೆ ಹೊರಟ್ಟಿದ್ದಾರೆ. ಹಾಗಾಗಿ ನಾನು ಈ ಒಂದು ನಿರ್ಣಯವನ್ನು ಮಂಡಿಸುತ್ತಿದ್ದೇನೆ. ಯಾವುದೇ ಕಾರಣಕ್ಕೂ "ಒಂದು ರಾಷ್ಟ್ರ, ಒಂದು ಚುನಾವಣೆ" ಆಗಬಾರದು, ಹಾಗಾದರೆ ಬಹಳ ಅನ್ಯಾಯವಾಗುತ್ತದೆ. ಅದು ಪ್ರಜಾಪ್ರಭುತ್ವಕ್ಕೆ ಮಾರಕವಾಗುತ್ತದೆ.

"ಭಾರತವು ವಿಶ್ವದ ಅತಿದೊಡ್ಡ ಒಕ್ಕೂಟ ಪ್ರಜಾಪ್ರಭುತ್ವವಾಗಿದೆ. ಭಾರತ ಸಂವಿಧಾನದ ಭಾಗ XV ರಲ್ಲಿ ಪ್ರತಿಪಾದಿಸಿರುವ ಮುಕ್ತ ಮತ್ತು ನ್ಯಾಯ ಸಮ್ಮತ ಚುನಾವಣೆಯ ತತ್ವವು ಈ ಪ್ರಜಾಪ್ರಭುತ್ವದ ಆತ್ಮವಾಗಿದೆ. 'ಒಂದು ರಾಷ್ಟ್ರ, ಒಂದು ಚುನಾವಣೆ' ಪ್ರಸ್ತಾವವು ಭಾರತದ ಪ್ರಜಾಸತ್ತಾತ್ಮಕ ಮತ್ತು ಒಕ್ಕೂಟ ವ್ಯವಸ್ಥೆಗೆ ಅಪಾಯವನ್ನುಂಟು ಮಾಡುತ್ತದೆ. ಬೇರೆ ಬೇರೆ ರಾಜ್ಯಗಳ ವಿಧಾನಸಭೆಗಳು ಅವುಗಳದ್ದೇ ಆದ ಅಧಿಕಾರ ಅವಧಿಗಳನ್ನು ಹೊಂದಿರುತ್ತವೆ ಮತ್ತು ಏಕರೂಪ ಚುನಾವಣಾ ವೇಳಾಪಟ್ಟಿಯು ರಾಷ್ಟ್ರೀಯ ವಿಷಯಗಳ ಮೇಲೆ ಹೆಚ್ಚಾಗಿ ಗಮನಹರಿಸುವ ಮತ್ತು ಸ್ಥಳೀಯ ಕಾಳಜಿಗಳನ್ನು ನಿರ್ಲಕ್ಷಿಸುವ ಮೂಲಕ ರಾಜ್ಯಗಳ ಸ್ವಾಯತ್ತತೆಯನ್ನು ದುರ್ಬಲಗೊಳಸಬಹುದು. ಸಾಕಷ್ಟು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು, ಚುನಾವಣಾ ಸಿಬ್ಬಂದಿಯನ್ನು ನಿರ್ವಹಿಸುವುದು, ಮತದಾರರ ಬೇಸರ, ಕಡಿಮೆಗೊಂಡ ಸರ್ಕಾರದ ಉತ್ತರದಾಯಿತ್ವ ಹಾಗೂ ಆರ್ಥಿಕ ಮತ್ತು ಸಾಮಾಜಿಕ ಅಡೆತಡೆಗಳು ಏಕಕಾಲಿಕ ಚುನಾವಣೆಗಳಿಗೆ ಸಂಬಂಧಿಸಿದ ಗುರುತರ ಗಂಡಾಂತರಗಳಾಗಿವೆ. ಹಾಗಾಗಿ ಭಾರತದ ಪ್ರಜಾಸ್ತಾತ್ಮಕ ಪ್ರಕ್ರಿಯೆಗಳು ಮತ್ತು ಒಕ್ಕೂಟ ಸಮಗ್ರತೆಯನ್ನು ರಕ್ಷಿಸಲು ಈ ಕಠೋರ ನೀತಿಯನ್ನು ಅನುಷ್ಠಾನಗೊಳಸಬಾರದೆಂದು ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ"

<u>**ನಿರ್ಣಯವನ್ನು ಮಂಡಿಸಲಾಯಿತು**</u>

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

**"ಕೇಂದ್ರದ "ಒಂದು ರಾಷ್ಟ್ರ, ಒಂದು ಚುನಾವಣೆ" ನೀತಿಯನ್ನು ಅನುಷ್ಠಾನ ಮಾಡಬಾರದು ಎನ್ನುವ ನಿರ್ಣಯವನ್ನು ಅಂಗೀಕರಿಸುವುದು"**

<u>**ನಿರ್ಣಯ ಅಂಗೀಕೃತವಾಯಿತು ಮತ್ತು ನಿರ್ಣಯಕ್ಕೆ ಸದನದ ಅನುಮೋದನೆ ದೊರೆಯಿತು**</u>

**ಇ) ವಿಷಯ: "ನೀಟ್" ಪರೀಕ್ಷೆಯಿಂದ ರಾಜ್ಯಕ್ಕೆ ವಿನಾಯಿತಿ ನೀಡಿ "ಸಿಇಟಿ" ಅಂಕಗಳನ್ನು ಆಧರಿಸಿ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶಾತಿ ನೀಡುವ ಬಗ್ಗೆ.**

– – – –

**ಶ್ರೀ ಡಿ.ಕೆ.ಶಿವಕುಮಾರ್(ಉಪ ಮುಖ್ಯಮಂತ್ರಿಗಳು)(ಮುಖ್ಯ ಮಂತ್ರಿಗಳ ಪರವಾಗಿ)** ಮಾನ್ಯ ಸಭಾಪತಿಗಳೇ, ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ.

**"ನೀಟ್"** (NEET) ಪರೀಕ್ಷಾ ವ್ಯವಸ್ಥೆಯು, ಗ್ರಾಮೀಣ ಬಡ ಮಕ್ಕಳ ವೈದ್ಯಕೀಯ ಶಿಕ್ಷಣಾವಕಾಶಗಳ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು ಹಾಗೂ ಶಾಲಾ ಶಿಕ್ಷಣ ವ್ಯವಸ್ಥೆಯನ್ನು ನಿರರ್ಥಕಗೊಳಿಸುವುದು ಮಾತ್ರವಲ್ಲದೆ, ರಾಜ್ಯ ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ರಾಜ್ಯ ಸರ್ಕಾರದ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದು, ಅದನ್ನು ರದ್ದುಪಡಿಸಬೇಕೆಂದು ಕೋರಲಾಗಿದೆ.

ಈ ಪರೀಕ್ಷೆಯಿಂದ ಕರ್ನಾಟಕಕ್ಕೆ ವಿನಾಯಿತಿ ನೀಡಬೇಕೆಂದು ಹಾಗೂ ಶಾಲಾ ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ (ಸಿಇಟಿ) ಅಂಕಗಳನ್ನಾಧರಿಸಿ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶಾತಿ ನೀಡಬೇಕೆಂದು ಮತ್ತು ನೀಟ್ ಪರೀಕ್ಷೆಗಳಲ್ಲಿ ಆಗುತ್ತಿರುವ ಪುನರಾವರ್ತಿತ ಅಕ್ರಮಗಳನ್ನು ಪರಿಗಣಿಸಿ ರಾಷ್ಟ್ರೀಯ ಮಟ್ಟದಲ್ಲಿ ನೀಟ್ ವ್ಯವಸ್ಥೆಯನ್ನು ರದ್ದುಪಡಿಸುವ, ಹಾಗೆ ಕೇಂದ್ರ ಸರ್ಕಾರವು ರಾಷ್ಟ್ರೀಯ ವೈದ್ಯಕೀಯ ಆಯೋಗ ಅಧಿನಿಯಮ, 2019 (2019ರ ಕೇಂದ್ರ ಅಧಿನಿಯಮ 30)ರಲ್ಲಿ ಅಗತ್ಯ ತಿದ್ದುಪಡಿಗಳನ್ನೂ ಸಹ ಮಾಡುವಂತೆ ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ"

**ನಿರ್ಣಯವನ್ನು ಮಂಡಿಸಲಾಯಿತು**

**ಸಭಾಪತಿಯವರು:–** ಪ್ರಸ್ತಾವವೇನೆಂದರೆ;

**""ನೀಟ್" ಪರೀಕ್ಷೆಯಿಂದ ರಾಜ್ಯಕ್ಕೆ ವಿನಾಯಿತಿ ನೀಡಿ "ಸಿಇಟಿ" ಅಂಕಗಳನ್ನು ಆಧರಿಸಿ ವೈದ್ಯ ಕಾಲೇಜುಗಳಿಗೆ ಪ್ರವೇಶಾತಿ ನೀಡುವ ನಿರ್ಣಯದ ಅಂಗೀಕಾರ"**

**<u>ನಿರ್ಣಯ ಅಂಗೀಕೃತವಾಯಿತು ಮತ್ತು ನಿರ್ಣಯಕ್ಕೆ ಸದನದ ಅನುಮೋದನೆ ದೊರೆಯಿತು</u>**

**ಈ) ವಿಷಯ: ಅರಣ್ಯವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ(ಅರಣ್ಯ ಹಕ್ಕುಗಳ ಮಾನ್ಯತೆ ಅಧಿನಿಯಮ, 2006 (2007 ಕೇಂದ್ರ ಅಧಿನಿಯಮ 02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವ ಬಗ್ಗೆ.**

- - - - -

**ಶ್ರೀ ಎಸ್.ಎನ್.ಬೋಸರಾಜು(ಸಭಾನಾಯಕರು)(ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಪರವಾಗಿ):-** ಮಾನ್ಯ ಸಭಾಪತಿಗಳೇ, ಈ ಕೆಳಕಂಡ ನಿರ್ಣಯವನ್ನು ತಮ್ಮ ಅನುಮತಿ ಕೋರಿ ಸಭೆಯ ಮುಂದೆ ಮಂಡಿಸುತ್ತೇನೆ.

"ಅರಣ್ಯವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ(ಅರಣ್ಯ ಹಕ್ಕುಗಳ ಮಾನ್ಯತೆ ಅಧಿನಿಯಮ, 2006 (2007 ಕೇಂದ್ರ ಅಧಿನಿಯಮ 02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವ ಬಗ್ಗೆ."

**ನಿರ್ಣಯವನ್ನು ಮಂಡಿಸಲಾಯಿತು**

**ಸಭಾಪತಿಯವರು:-** ಪ್ರಸ್ತಾವವೇನೆಂದರೆ;

"ಅರಣ್ಯವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ(ಅರಣ್ಯ ಹಕ್ಕುಗಳ ಮಾನ್ಯತೆ ಅಧಿನಿಯಮ, 2006 (2007 ಕೇಂದ್ರ ಅಧಿನಿಯಮ 02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವ ನಿರ್ಣಯವನ್ನು ಅಂಗೀಕರಿಸುವುದು"

**<u>ನಿರ್ಣಯ ಅಂಗೀಕೃತವಾಯಿತು ಮತ್ತು ನಿರ್ಣಯಕ್ಕೆ ಸದನದ ಅನುಮೋದನೆ ದೊರೆಯಿತು</u>**

(ಮುಂದು)

(689) 25-7-2024 12.10 ಡಿಎಸ್-ಬಿಎನ್‌ಎಸ್ (ಸಭಾಪತಿಯವರ ಉಪಸ್ಥಿತಿ)

**(ಈ ಹಂತದಲ್ಲಿ ವಿರೋಧ ಪಕ್ಷಗಳ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**10. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಉ) ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ಇದು ಸಣ್ಣದಾಗಿರುವಂತಹ ಮಹತ್ವದ ತಿದ್ದುಪಡಿಯಾಗಿದೆ. ಈ ತಿದ್ದುಪಡಿಯ ಮೂಲಕ ಶಾಸಕರುಗಳನ್ನು ಬೇರೆ ಬೇರೆ ಹುದ್ದೆಗಳಿಗೆ ಅದರಲ್ಲೂ ವಿಶೇಷವಾಗಿ ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಯಾಗಿ, ಆರ್ಥಿಕ ಸಲಹೆಗಾರರಾಗಿ ನೇಮಿಸುತ್ತೇವೆ ಅವರಿಗೆ ಯಾವುದೇ ರೀತಿಯಾಗಿ ಕಾನೂನಿನ ಅನರ್ಹತೆ ಬರಬಾರದು, ಅವರು ಅವರ ಪ್ರತಿನಿಧಿಗಳಾಗಿರುತ್ತಾರೆ. ಆ ಅನರ್ಹತೆಯನ್ನು ನಿವಾರಣೆ ಮಾಡುವುದರ ಸಲುವಾಗಿ ಈ ತಿದ್ದುಪಡಿಯನ್ನು ತಂದಿದ್ದೇವೆ. ಈ ತಿದ್ದುಪಡಿ ನಮ್ಮ ಶಾಸಕರ ಸ್ಥಾನಮಾನಗಳನ್ನು ರಕ್ಷಿಸುವುದರ ಜೊತೆಗೆ ನಾವು ಕಾನೂನು ಬದ್ಧವಾಗಿ ಮಾಡುವುದಕ್ಕೆ ಸಾಧ್ಯ ಮಾಡಿಕೊಡುತ್ತಾರೆ. ಆದ್ದರಿಂದ ಈ ತಿದ್ದುಪಡಿಯನ್ನು ಒಪ್ಪಿ ವಿಧೇಯಕವನ್ನು ಪಾಸ್ ಮಾಡಿಕೊಡಬೇಕೆಂದು ನಾನು ತಮ್ಮಲ್ಲಿ ಅರಿಕೆ ಮಾಡಿಕೊಳ್ಳುತ್ತೇನೆ.

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2**

**ಸಭಾಪತಿಯವರು:-** "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ವಿಧಾನಮಂಡಲ (ಅನರ್ಹತಾ ನಿವಾರಣಾ)(ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**(ಈ ಹಂತದಲ್ಲಿ ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಊ) ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)(ನಗರಾಭಿವೃದ್ಧಿ ಮತ್ತು ನಗರ ಯೋಜನೆ ಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕಾರ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ಈ ವಿಧೇಯಕದಲ್ಲಿ ಕೆಲವು ಅತ್ಯಂತ ಮುಖ್ಯವಾದ ಹಾಗೂ ನಮ್ಮ ಆಡಳಿತ ವ್ಯವಸ್ಥೆಯಲ್ಲಿ ಸುಧಾರಣೆಯನ್ನು ತರುವ ಪ್ರಸ್ತಾವನೆಯಾಗಿದೆ. "ಖಾಲಿ ಭೂಮಿಗಳು" ಎಂಬ ಪದಗಳ ಬದಲಾಗಿ "ಖಾಲಿ ಕಟ್ಟಡ ನಿವೇಶನಗಳು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಧಿನಿಯಮ, 2020 (2020ರ ಕರ್ನಾಟಕ ಅಧಿನಿಯಮ 53)ರಲ್ಲಿ ಉಪಬಂಧಿಸಲಾದಂತೆ ಸರ್ಕಾರಿ ಭೂಮಿಯ ಹೊರತಾಗಿ ಅನಧಿಕೃತ ವಸತಿ ಪ್ರದೇಶಗಳಲ್ಲಿನ ಆವರಣಗಳು ಮತ್ತು ಕಟ್ಟಡಗಳಿಗೆ ಹಾಗೂ ಅಧಿಕೃತ ವಸತಿ ಪ್ರದೇಶಗಳಲ್ಲಿನ ಅನಧಿಕೃತ ಕಟ್ಟಡಗಳಿಗೆ ಸ್ವತ್ತು ತೆರಿಗೆಯ ಉಪಬಂಧಗಳನ್ನು ವಿಸ್ತರಿಸಲು; ಇ-ಆಸ್ತಿ ತಂತ್ರಾಂಶದ ಕುರಿತು ಅವಶ್ಯಕ ಉಪಬಂಧಗಳನ್ನು ಕಲ್ಪಿಸಲು, ಇತ್ಯಾದಿ ಕಾರ್ಯಕ್ರಮಗಳಿಗಾಗಿ ಇದೊಂದು ಅತ್ಯಂತ ಉಪಯುಕ್ತವಾಗಿರುವಂತಹ ತಿದ್ದುಪಡಿಯಾಗಿದೆ. ಈ ವಿಧೇಯಕವನ್ನು ಪಾಸ್ ಮಾಡಿಕೊಡಬೇಕೆಂದು ತಮ್ಮಲ್ಲಿ ಅರಿಕೆ ಮಾಡಿಕೊಳ್ಳುತ್ತೇನೆ.

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕಾರ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 4 ರವರೆಗೆ**

**ಸಭಾಪತಿಯವರು:-** "ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು)(ನಗರಾಭಿವೃದ್ಧಿ ಮತ್ತು ನಗರ ಯೋಜನೆ ಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕಾರ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕಾರ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**(ಈ ಹಂತದಲ್ಲಿ ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ವಿಧೇಯಕಗಳನ್ನು ತೆಗೆದುಕೊಂಡಾಯಿತು, ಈಗ ಮುಂದೆ ಏನು ಮಾಡುವುದು?

**ಶ್ರೀ ಛಲವಾದಿ ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಯಾವುದೇ ವಿಧೇಯಕಗಳಿಗೆ ನಮ್ಮ ವಿರೋಧ ಇರಲಿಲ್ಲ. ವಿರೋಧ ಮಾಡಬೇಕೆನ್ನುವ ಉದ್ದೇಶ ಇರಲಿಲ್ಲ. ….. **(ಗೊಂದಲ)**

**(ಈ ಹಂತದಲ್ಲಿ ವಿರೋಧ ಪಕ್ಷದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಸದನವನ್ನು 2.30 ಗಂಟೆಯವರೆಗೆ ಮುಂದೂಡಲಾಗಿದೆ.

**(ಸದನವು ಮಧ್ಯಾಹ್ನ 12 ಗಂಟೆ 20 ನಿಮಿಷಗಳಿಗೆ ಮುಂದೂಡಲ್ಪಟ್ಟು, ಪುನಃ ಮಧ್ಯಾಹ್ನ 2 ಗಂಟೆ 30 ನಿಮಿಷಕ್ಕೆ ಸೇರಲು ನಿಶ್ಚಯಿಸಿತು)**

(690) 25.07.2024 03.20 LL-AK

**(ಭೋಜನ ವಿರಾಮಕ್ಕಾಗಿ ಮಧ್ಯಾಹ್ನ 12 ಗಂಟೆ 20 ನಿಮಿಷಕ್ಕೆ ಮುಂದೂಡಲ್ಪಟ್ಟ ಸದನವು ಪುನಃ ಮಧ್ಯಾಹ್ನ 3 ಗಂಟೆ 27 ನಿಮಿಷಕ್ಕೆ ಪ್ರಾರಂಭವಾಯಿತು)**

**(ಮಾನ್ಯ ಸಭಾಪತಿಯವರು ಪೀಠವನ್ನು ಅಲಂಕರಿಸಿದರು)**

**(ಸದನ ಪ್ರಾರಂಭವಾಗುತ್ತಿದ್ದಂತೆಯೇ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿಯವರು ಮತ್ತು ಶ್ರೀ ಸಿ.ಟಿ. ರವಿಯವರನ್ನು ಹೊರತುಪಡಿಸಿ, ಭಾರತೀಯ ಜನತಾ ಪಕ್ಷದ ಇನ್ನುಳಿದ ಮಾನ್ಯ ಸದಸ್ಯರುಗಳು ಹಾಗೂ ಶ್ರೀ ಎಸ್.ಎಲ್. ಭೋಜೇಗೌಡರನ್ನು ಹೊರತುಪಡಿಸಿ, ಜೆ.ಡಿ.(ಎಸ್.) ಪಕ್ಷದ ಇನ್ನುಳಿದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**11. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರದ ಕುರಿತ ವಿಷಯದಲ್ಲಿ ವಿರೋಧಪಕ್ಷದ ಸದಸ್ಯರುಗಳಿಂದ ಮುಂದುವರೆದ ಗದ್ದಲ ಹಾಗೂ ಧರಣಿ.**

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):–** ಮಾನ್ಯ ಸಭಾಪತಿಯವರೇ, ಸದನ ಆರ್ಡರ್‌ನಲ್ಲಿ ಇಲ್ಲದೇ ಇದ್ದಾಗ, ತಾವು ಬೇರೆ ಅಜೆಂಡಾ ಮಾಡುವುದು ಹೇಗೆ?

**(ಗೊಂದಲ)**

**ಶ್ರೀ ಎಂ. ನಾಗರಾಜು:–** ಮಾನ್ಯ ಸಭಾಪತಿಯವರೇ, ಆರ್ಡರ್ ಇಲ್ಲವೆಂದು ಹೇಳಿದರೆ..., ಹಾದಿ ತಪ್ಪಿರುವುದು ಇವರೇ.

**(ಗೊಂದಲ)**

**ಶ್ರೀ ಐವನ್ ಡಿ ಸೋಜಾ:–** ಮಾನ್ಯ ಸಭಾಪತಿಯವರೇ, ...ಆರ್ಡರ್ ಎಲ್ಲಿಂದ ಮಾಡುವುದು.

**(ಗೊಂದಲ)**

**ಸಭಾಪತಿಯವರು:–** ಆಯಿತು, ಎಲ್ಲರೂ ಕುಳಿತುಕೊಳ್ಳಿ. ಒಂದು ನಿಮಿಷ ನಾನು ಹೇಳುವುದನ್ನು ಕೇಳಿ.

**(ಗೊಂದಲ)**

**ಶ್ರೀ ಎಸ್.ಎಲ್. ಭೋಜೇಗೌಡ:–** ಮಾನ್ಯ ಸಭಾಪತಿಯವರೇ, ನಮ್ಮನ್ನು ಈ ಸದನದಿಂದ ಹೊರಗೆ ಹಾಕಿಸಲು ಇವರು ತಮ್ಮಿಂದ ಆದೇಶ ಕೊಡಿಸಲಿ. ನಾವು ಅದಕ್ಕೂ ತಯಾರಿದ್ದೇವೆ.

**(ಗೊಂದಲ)**

**ಶ್ರೀ ಸಿ.ಟಿ. ರವಿ (ವಿಧಾನಸಭಾ ಕ್ಷೇತ್ರ):–** ಮಾನ್ಯ ಸಭಾಪತಿಯವರೇ, ಈ ಸದನದಲ್ಲಿ ವಿರೋಧ ಪಕ್ಷದವರು ಇರುವುದು ಬೇಡವೆಂದು ನಮ್ಮ ಮೇಲೆ ತುರ್ತು ಪರಿಸ್ಥಿತಿ ಹೇರಲಿ.

**(ಗೊಂದಲ)**

**ಶ್ರೀ ಎಸ್.ಎಲ್. ಭೋಜೇಗೌಡ:–** ಮಾನ್ಯ ಸಭಾಪತಿಯವರೇ, ನಮ್ಮನ್ನು ಹೊರಗೆ ಹಾಕಿಸಲಿ. ನಮಗೆ ಯಾವುದೇ ಬೇಜಾರಿಲ್ಲ.

**(ಗೊಂದಲ)**

**ಸಭಾಪತಿಯವರು:–** ಒಂದು ನಿಮಿಷ ಎಲ್ಲರೂ ನನ್ನ ಮಾತನ್ನು ಕೇಳಿ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):–** ಮಾನ್ಯ ಸಭಾಪತಿಯವರೇ, the House is not in order.

**(ಗೊಂದಲ)**

**ಶ್ರೀ ಸಿ.ಟಿ. ರವಿ:–** ಮಾನ್ಯ ಸಭಾಪತಿಯವರೇ, ವಿರೋಧ ಪಕ್ಷದವರೆಲ್ಲರನ್ನೂ ಜೈಲಿಗೆ ಹಾಕಿಸಲಿ. ಈ ರೀತಿ ಜೈಲಿಗೆ ಹಾಕಿಸಿ ರಾಜ್ಯಭಾರ ಮಾಡುವುದರಲ್ಲಿ ಅವರು ಕುಖ್ಯಾತರು.

**(ಗೊಂದಲ)**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:–** ಮಾನ್ಯ ಸಭಾಪತಿಯವರೇ, ಹಾಗಿದ್ದರೂ ಸಹ ತಾವು ಸಮಸ್ಯೆಯನ್ನು ಪರಿಹರಿಸದೇ, ಕದಡಿದ ನೀರಿನಲ್ಲಿ ಮೀನು ಹಿಡಿಯುವುದಕ್ಕೆ ಬಿಟ್ಟಿದ್ದೀರಲ್ಲಾ, ಇದು ಸರಿಯೇ?

**(ಗೊಂದಲ)**

**ಶ್ರೀ ಸಿ.ಟಿ. ರವಿ:–** ಮಾನ್ಯ ಸಭಾಪತಿಯವರೇ, ಹೇಗಿದ್ದರೂ ಮುಂದಿನ ವರ್ಷಕ್ಕೆ 50 ವರ್ಷ ಆಗುತ್ತದೆ.

**ಸಭಾಪತಿಯವರು:–** ಆಡಳಿತ ಪಕ್ಷದವರಾದ ತಾವೆಲ್ಲರೂ ಏತಕ್ಕೆ ಮಾತನಾಡುತ್ತೀರಿ? ಮಾತನಾಡುವುದಕ್ಕೆ ನಾನು ಇಲ್ಲಿ ಇಲ್ಲವೇ?

**(ಗೊಂದಲ)**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:–** ಮಾನ್ಯ ಸಭಾಪತಿಯವರೇ, ಸರ್ಕಾರಕ್ಕೆ ಚರ್ಚೆ ಬೇಕಾಗಿಲ್ಲ.

**ಶ್ರೀ ಸಿ.ಟಿ. ರವಿ:–** ಮಾನ್ಯ ಸಭಾಪತಿಯವರೇ, ಮಾನ್ಯ ಸಿದ್ದರಾಮಯ್ಯನವರ ಸರ್ಕಾರದ ಅವಧಿಯಲ್ಲಿ ವಿರೋಧ ಪಕ್ಷದವರೆಲ್ಲರನ್ನೂ ಜೈಲಿಗೆ ಕಳುಹಿಸಿದ್ದಾರೆಂಬ ಕುಖ್ಯಾತಿ ಬರಲಿ.

**ಸಭಾಪತಿಯವರು:–** ಮಾನ್ಯ ಸಿ.ಟಿ. ರವಿಯವರೇ, ಈಗ ತಾವೇ ಮಾತನಾಡುತ್ತಿರುತ್ತೀರೋ ಅಥವಾ ನನಗೆ ಮಾತನಾಡಲು ಬಿಡುತ್ತೀರೋ?

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:–** ಮಾನ್ಯ ಸಭಾಪತಿಯವರೇ, ಈಗ ತಾವು...

**ಶ್ರೀ ಎಂ. ನಾಗರಾಜು(ವಿಧಾನಸಭಾ ಕ್ಷೇತ್ರ):–** ಮಾನ್ಯ ಸಭಾಪತಿಯವರೇ, ಈಗ ತಾವೇ ಮಾತನಾಡಿ.

**ಸಭಾಪತಿಯವರು:–** ಪರವಾಗಿಲ್ಲ. ತಮ್ಮೆಲ್ಲರದ್ದೂ ಮಾತು ಮುಗಿಯಲಿ. ಈಗ ಯಾರ್ಯಾರು ಮಾತನಾಡುತ್ತೀರೋ, ಅವರು ಮಾತನಾಡಿ.

**ಶ್ರೀ ಎಸ್.ಎಲ್. ಭೋಜೇಗೌಡ:–** ಮಾನ್ಯ ಸಭಾಪತಿಯವರೇ, ಈಗ ಸದನ ಆರ್ಡರ್‌ನಲ್ಲಿ ಇಲ್ಲ. ವಿರೋಧ ಪಕ್ಷದ ಸದಸ್ಯರು ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದಾರೆ. ಈ ಸಂದರ್ಭದಲ್ಲಿ ತಾವು ವಿಧೇಯಕಗಳ ಮೇಲಿನ ತಿದ್ದುಪಡಿ ವಿಚಾರವನ್ನು ಚರ್ಚೆಗೆ ತಂದಿದ್ದೀರಿ. ಈ ವಿಚಾರದಲ್ಲಿ, in the interest of society, ನಮಗೂ ಪೂರ್ಣ ಪ್ರಮಾಣದಲ್ಲಿ ಜವಾಬ್ದಾರಿ ಇದ್ದು, ಎಲ್ಲಾ ವಿಧೇಯಕಗಳ ಮೇಲಿನ ತಿದ್ದುಪಡಿಯನ್ನು ಅಂಗೀಕರಿಸಿಕೊಡುವುದಕ್ಕೆ ಮೊದಲಿನಿಂದಲೂ ಸಹಕಾರ ನೀಡಿದ್ದು, ಈಗಲೂ ನೀಡುತ್ತೇವೆ. ಆದರೆ, ಸದನ ಈ ರೀತಿ ಆರ್ಡರ್‌ನಲ್ಲಿ ಇಲ್ಲದೇ ಇದ್ದಾಗ ತಾವು ಈ ರೀತಿ ವಿಧೇಯಕಗಳ ಮೇಲಿನ ತಿದ್ದುಪಡಿ ವಿಚಾರವನ್ನು ತಂದಿರುವುದು ಎಲ್ಲಿಯೋ ಒಂದು ಕಡೆ ವ್ಯತಿರಿಕ್ತವಾಗಿ ಕಾಣುತ್ತದೆ.

**ಶ್ರೀ ಸಲೀಂ ಅಹಮದ್ (ಸರ್ಕಾರದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಯವರೇ, disorder ಮಾಡಿದ್ದು ಯಾರು? ಇವರೇ ಮಾಡಿದ್ದು ಅಲ್ಲವೇ?

**ಶ್ರೀ ಎಸ್.ಎಲ್. ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ನಾನು ತಮ್ಮ ಪೀಠಕ್ಕೆ ಹೇಳುತ್ತಿದ್ದೇನೆ.

**ಸಭಾಪತಿಯವರು:-** ಮಾನ್ಯ ಸಲೀಂ ಅಹಮದ್‌ರವರೇ, ತಾವು ಒಂದು ನಿಮಿಷ ದಯಮಾಡಿ ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಸಲೀಂ ಅಹಮದ್:-** ಮಾನ್ಯ ಸಭಾಪತಿಯವರೇ, ಅದು one side ಹೋಗುತ್ತದೆ.

**(ಗೊಂದಲ)**

**ಶ್ರೀ ಸಿ.ಟಿ. ರವಿ:-** ಮಾನ್ಯ ಸಭಾಪತಿಯವರೇ, ಇವರು ತುರ್ತು ಪರಿಸ್ಥಿತಿ ತರಲಿ.

**(ಗೊಂದಲ)**

**ಸಭಾಪತಿಯವರು:-** ಒಬ್ಬೊಬ್ಬರು ಮಾತನಾಡಿದರೆ ನಾನು ಎಲ್ಲರಿಗೂ ಅವಕಾಶ ನೀಡುತ್ತೇನೆ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ನಿಯಮದಲ್ಲಿ ಇದಕ್ಕೆ ಅವಕಾಶವಿಲ್ಲ. ಸದನ ಆರ್ಡರ್‌ನಲ್ಲಿದ್ದಾಗ ತಾವು ಹೇಳುವುದು ಸರಿಯಾಗಿದೆ.

**ಸಭಾಪತಿಯವರು:-** ಆ ಬಗ್ಗೆ ನಾನು ಹೇಳುತ್ತೇನೆ. ಮಾನ್ಯ ವಿರೋಧ ಪಕ್ಷದ ಎಲ್ಲಾ ಮಾನ್ಯ ಸದಸ್ಯರಲ್ಲಿ ವಿನಂತಿ ಮಾಡುವುದೇನೆಂದರೆ, ದಯಮಾಡಿ ಎಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹೋಗಿ ಕುಳಿತುಕೊಳ್ಳಿ. ತಿದ್ದುಪಡಿ ವಿಧೇಯಕಗಳ ಮೇಲಿನ ಚರ್ಚೆ ಬಾಕಿ ಇದೆ. ರಾಜ್ಯದ ಎಲ್ಲಾ ಜನರು ಇದನ್ನು ನೋಡುತ್ತಿರುತ್ತಾರೆ. ಹಾಗಾಗಿ, ತಿದ್ದುಪಡಿ ವಿಧೇಯಕಗಳ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ, ಎಲ್ಲರೂ ಕೂಡ ಚರ್ಚೆ ಮಾಡಿ...

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಆ ನಂತರ ಸದನದ ಬಾವಿಗೆ ಬರಬೇಕೆಂದು ತಾವು ಹೇಳುತ್ತಿದ್ದೀರಾ?

**ಸಭಾಪತಿಯವರು:-** ಆ ನಂತರ ತಾವು ಸದನದ ಬಾವಿಗೆ ಬರುವುದು ಅಥವಾ ಬಿಡುವುದು ತಮಗೆ ಬಿಟ್ಟಂತಹ ವಿಚಾರ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಈಗ ಹೋಗಿ ಕುಳಿತುಕೊಳ್ಳಿ. ನಮ್ಮ ಕೆಲಸ ಎಲ್ಲಾ ಮುಗಿಯುತ್ತದೆ. ಆ ನಂತರ ತಾವು ಸದನದ ಬಾವಿಗೆ ಬರಬೇಕೆಂದು ಹೇಳುತ್ತಿದ್ದೀರಾ?

**ಸಭಾಪತಿಯವರು:-** ನಾನು ಆ ರೀತಿ ಹೇಳುವುದಿಲ್ಲ. **(ಗೊಂದಲ)** ಸದನದ ಬಾವಿಯಲ್ಲಿ ನಿಂತು ಮಾತನಾಡಿದರೆ ಕಡತಕ್ಕೆ ಹೋಗುವುದಿಲ್ಲ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಇವರೆಲ್ಲರೂ ಸದನದ ಬಾವಿಗೆ ಏತಕ್ಕೆ ಬಂದಿದ್ದಾರೆ, ಅವರ ಸಮಸ್ಯೆಯನ್ನು ಮೊದಲು ಪರಿಹಾರ ಮಾಡಿ.

**ಸಭಾಪತಿಯವರು:-** ಒಂದು ನಿಮಿಷ ನಾನು ಹೇಳುವುದನ್ನು ತಾವು ಕೇಳಿ. ತಾವೆಲ್ಲರೂ ಇಂತಹ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳಿ ಎಂದು ಹೇಳಿದಿರಿ. ಅದಕ್ಕೆ ಸರ್ಕಾರ ಒಪ್ಪಲಿಲ್ಲ. ನಮಗೆ ಉತ್ತರ ಬಂದಿರುವುದಿಲ್ಲ. ಕೇವಲ ನಿಮಗೆ ಚರ್ಚೆಗೆ ಅವಕಾಶ ಕೊಟ್ಟು ನಾನು ಏನು ಮಾಡಲಿ? ಸಂಬಂಧಪಟ್ಟ ಮಂತ್ರಿಗಳು ಉತ್ತರ ನೀಡಬೇಕಲ್ಲವೇ? ತಮ್ಮ ಪ್ರಶ್ನೆಗೆ ಉತ್ತರ ಕೊಡುವವರು ಯಾರು?

(ಮುಂದು)

(691)25.7.2024/3.30/ಎಂ.ಎಂ-ಎ.ಕೆ (ಸಭಾಪತಿಯವರ ಉಪಸ್ಥಿತಿ)

**(ಈ ಹಂತದಲ್ಲಿ ವಿರೋಧ ಪಕ್ಷದ ನಾಯಕರಾದ ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿಯವರು ಮತ್ತು ಭಾರತೀಯ ಜನತಾ ಪಕ್ಷದ ಶ್ರೀ ಸಿ.ಟಿ. ರವಿಯವರು ಹಾಗೂ ಜೆ.ಡಿ.(ಎಸ್.) ಪಕ್ಷದ ಶ್ರೀ ಎಸ್.ಎಲ್. ಭೋಜೇಗೌಡರನ್ನು ಹೊರತುಪಡಿಸಿ ಇನ್ನುಳಿದ ಮಾನ್ಯ ಸದಸ್ಯರುಗಳು ಸದನದ ಬಾವಿಯಲ್ಲಿ ಧರಣಿ ನಿರತರಾಗಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು)**:- ಮಾನ್ಯ ಸಭಾಪತಿಯವರೇ, ನೀವು ಉತ್ತರ ಕೊಡುವುದು ಬೇರೆ. ನಮ್ಮ ಬೇಡಿಕೆ ಇದ್ದದ್ದು ಏನು? ಸರ್ಕಾರ ಚರ್ಚೆಗೆ ಸಿದ್ಧವಿರುವುದಿಲ್ಲ. ಆದರೆ ತಾವು ಅವಕಾಶ ಕೊಡಬೇಕಾಗಿತ್ತು. ಇಲ್ಲಿ ದೊಡ್ಡ ಒಂದು ಹಗರಣವಾಗಿದೆ.

**ಶ್ರೀ ಯು.ಬಿ. ವೆಂಕಟೇಶ್:-** ಮಾನ್ಯ ಸಭಾಪತಿಯವರೇ, ನಮಗೂ ಅದೇ ರೀತಿ ಅವಕಾಶ....

**(ಗೊಂದಲ)**

**ಸಭಾಪತಿಯವರು:-** ನಾನು ಹೇಳುತ್ತೇನೆ ಕೇಳಿ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** 1935ನೇ ಇಸವಿಯಿಂದ ದಲಿತರ ಭೂಮಿಗೆ ಮುಖ್ಯಮಂತ್ರಿಯವರ...

**ಸಭಾಪತಿಯವರು:-** ನೀವು ಹೀಗೆ ಮಾತನಾಡತೊಡಗಿದರೆ ನಾನು ಅಲೋ ಮಾಡುವುದಿಲ್ಲ. ನಾನು ಹೇಳುವುದನ್ನು ಕೇಳಿ. ನಾನು ಸರ್ಕಾರಕ್ಕೆ ಅವರು ಈ ರೀತಿ ಬೇಡಿಕೆ ಇಟ್ಟಿದ್ದಾರೆ ಉತ್ತರ ಕೊಡುವುದಕ್ಕೆ ನೀವ್ಯಾರು ತಯಾರಿದ್ದೀರಿ, ಉತ್ತರ ಕೊಡಿ ಎಂದು ಹೇಳಿದ್ದೇನೆ. ನೋಟಿಸ್ ಕೊಟ್ಟಿರುವುದನ್ನು ಕಳುಹಿಸಿದ್ದೇನೆ. ಇದು ಅಜೆಂಡಾದಲ್ಲಿ ಇಲ್ಲ. ಉತ್ತರ ಕೊಡುವುದಕ್ಕೆ ಆಗುವುದಿಲ್ಲ ಎಂದು ಹೇಳಿದರು. ಆಗುವುದಿಲ್ಲ ಎಂದಾಗ ನಾನು ಸದನವನ್ನು ನಡೆಸಬೇಕಾಗುತ್ತದೆ. ಉಳಿದ ವಿಷಯವನ್ನು ತೆಗೆದುಕೊಳ್ಳಬೇಕಾಗುತ್ತದೆ ಎಂದು ಹೇಳಿದ್ದೇನೆ. ಉಳಿದ ವಿಷಯವನ್ನು ತೆಗೆದುಕೊಳ್ಳುವುದಕ್ಕೆ ನಿಮ್ಮ ಜೊತೆ ಮಾತನಾಡಿದರೆ, ಇಲ್ಲ ನಾವು ಇದಕ್ಕೇ stick on ಆಗಿದ್ದೇವೆ ಎಂದು ಹೇಳಿದಿರಿ. ಇದು ಪ್ರಜಾಪ್ರಭುತ್ವ, ನೀವು ಬಾವಿಗೆ ಹೋಗುವುದಕ್ಕೆ ಅಧಿಕಾರವಿದೆ. ಎಷ್ಟೋ ಸಲ ಹಿಂದಿನ

ಸರ್ಕಾರ ಇದ್ದಾಗ ಇವರು ಬಾವಿಯಲ್ಲಿದ್ದಾಗಲೂ ನಾನು ಬಿಲ್ ಪಾಸ್ ಮಾಡಿದ್ದೇನೆ. ಏನು ಮಾಡುವುದಕ್ಕಾಗುತ್ತದೆ? ಬಿಲ್ ಪಾಸ್ ಮಾಡಲೇಬೇಕಾಗುತ್ತದೆ. ಅದಕ್ಕೆ ನಿಮ್ಮ ಸಹಕಾರ ಕೇಳುತ್ತೇನೆ. ನೀವು ಇದರಲ್ಲಿ ಭಾಗವಹಿಸಿ ಬಿಲ್ ಮೇಲೆ ಚರ್ಚೆ ಮಾಡಿ. ಚರ್ಚೆ ಮಾಡಿ ಇದನ್ನು defeat ಮಾಡುತ್ತೀರೋ ಅಥವಾ ಪಾಸ್ ಮಾಡುತ್ತೀರೋ ಏನು ಮಾಡುತ್ತೀರೋ ಮಾಡಿ. ಸದನವನ್ನು ನಡೆಸೋಣ, ದಯಮಾಡಿ ನಿಮ್ಮ ನಿಮ್ಮ ಸ್ಥಳಗಳಿಗೆ ಹೋಗಿ ಎಂದು ನಾನು ನಿಮ್ಮಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಅಜೆಂಡಾದಲ್ಲಿ ಹಾಕಬೇಕಾಗಿರುವುದು ಯಾರು ಸ್ವಾಮಿ ನಾವಾ? ಅಜೆಂಡಾದಲ್ಲಿ ಇರಲಿಲ್ಲ ಎಂದರೆ ಅಜೆಂಡಾದಲ್ಲಿ ಹಾಕಬೇಕಾದವರು ನಾವಾ? ನಾವಲ್ಲ.

**ಸಭಾಪತಿಯವರು:-** ಬಿಲ್‌ಗಳನ್ನು ಹಾಕಿದ್ದೇವೆ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಅದಕ್ಕೆ ತಾವು ಸರ್ಕಾರಕ್ಕೆ ಎಚ್ಚರಿಕೆ ಕೊಡಬೇಕು. ಇದು ದೊಡ್ಡ ಹಗರಣವಾಗಿದೆ. ರಾಜ್ಯದಲ್ಲಿ ಆಗಿರುವಂತಹ ಹಗರಣಗಳಲ್ಲಿ ಇದೊಂದು ದೊಡ್ಡ ಹಗರಣ.

**Sri C.T. RAVI:** Don't forget... ಮುಖ್ಯಮಂತ್ರಿಗಳು 14 ಸೈಟ್ (**ಗೊಂದಲ**) ಯಾರಿಗೆ ಅಂತ?

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಅದು ಮಾತ್ರ ಅಲ್ಲ. ಸೈಟ್ ಯಾರಿಗೆ ಕೊಡಬೇಕು? ಭೂಮಿ ದಲಿತರದ್ದು. ಸೈಟ್ ಯಾರಿಗೆ?

**ಶ್ರೀ ಸಿ.ಟಿ. ರವಿ:-** (**ಗೊಂದಲ**) ಮರೆವಿನ ಕಾಯಿಲೆ ಜಾಸ್ತಿ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಸೈಟುಗಳು ದಲಿತರಿಗೆ ಹೋಗಬೇಕಾಗಿತ್ತು. ಅವರಿಗೆ ಹೋಗಿಲ್ಲ. ಅವರ ಹೆಸರಿನಲ್ಲಿ ಮುಖ್ಯಮಂತ್ರಿಗಳ ಕುಟುಂಬಕ್ಕೆ 14 ಸೈಟ್‌ಗಳು ಹೋಗಿವೆ. ಇದು ಲೂಟಿಯಲ್ಲವೇ? ಇದು ದಲಿತರಿಗೆ ಮಾಡಿದ ಅನ್ಯಾಯವಲ್ಲವೇ?

**(ಗೊಂದಲ)**

**ಶ್ರೀ ಸಿ.ಟಿ. ರವಿ:-** ಮಾನ್ಯ ಸಭಾಪತಿಯವರೇ, ದಿನಕ್ಕೊಂದು ಹಗರಣ ಮಾಡುತ್ತಿರುವುದರಿಂದ ಯಾವ ಹಗರಣ ಎಂದು ನಿಮಗೆ ನೆನಪು ಮಾಡಬೇಕು. ನಾವೀಗ ಬಾವಿಗಿಳಿದಿರುವುದು 'ಮುಡಾ' ಹಗರಣಕ್ಕೆ ಸಂಬಂಧಪಟ್ಟಂತೆ ಮುಖ್ಯಮಂತ್ರಿಗಳು ಮತ್ತು ಅವರ ಕುಟುಂಬದವರು 14 ಸೈಟ್‌ಗಳನ್ನು ಅಕ್ರಮವಾಗಿ ಕಬಳಿಸಿರುವ ವಿರುದ್ಧ ಇವತ್ತು ಪ್ರತಿಪಕ್ಷಗಳು ಧರಣಿಗೆ ಕುಳಿತಿದ್ದೇವೆ.

**ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು**)**:-** ವಿರೋಧಪಕ್ಷದ ನಾಯಕರು ಅಜೆಂಡಾ ಬಗ್ಗೆ ಪ್ರಸ್ತಾಪ ಮಾಡಿದರು.

**ಶ್ರೀ ಎಸ್.ಎಲ್. ಭೋಜೇಗೌಡ:-** ಮಾನ್ಯ ಸಭಾಪತಿಯವರೇ, ತಾವು ಚರ್ಚೆಗೆ ಅವಕಾಶ ಮಾಡಿಕೊಡಬೇಕು.

**ಶ್ರೀ ಹೆಚ್.ಕೆ. ಪಾಟೀಲ್:-** ಈಗಾಗಲೇ ಸಾಕಷ್ಟು ವಿಚಾರಗಳು ಈ ದಿಸೆಯೊಳಗೆ ಚರ್ಚೆಯಾಗಿದೆ.

**ಶ್ರೀ ಸಿ.ಟಿ. ರವಿ:-** ಬಹಳ ಜನರನ್ನು ಇಲ್ಲಿ ಕೆಲಸ ಮಾಡಿಸಿ ಆಮೇಲೆ ನಿಮ್ಮ ಪಕ್ಷಕ್ಕೆ ಕರೆದುಕೊಂಡಿದ್ದೀರಿ.

**(ಈ ಹಂತದಲ್ಲಿ ಮಾನ್ಯ ಉಪ ಸಭಾಪತಿಯವರು ಪೀಠವನ್ನಲಂಕರಿಸಿದರು)**

**ಶ್ರೀ ಹೆಚ್.ಕೆ. ಪಾಟೀಲ್:-** ನಾನು ತಮಗೆ ವಿನಂತಿ ಮಾಡಿಕೊಳ್ಳುತ್ತೇನೆ, ನೀವು ಯಾವ ವಿಷಯವನ್ನು ಎತ್ತಿಕೊಳ್ಳಬೇಕೆನ್ನುತ್ತೀರಿ ಆ ವಿಚಾರವಾಗಿ ಸಾಕಷ್ಟು ನಿಮ್ಮ slogan ಮುಖಾಂತರ, ನಿನ್ನೆ ರಾತ್ರಿ ನಡೆದಂತಹ protest ಮುಖಾಂತರ ಹೇಳಿದ್ದೀರಿ. ನೀವು ಏತಕ್ಕಾಗಿ ಇದನ್ನು ಮಿಸ್ ಮಾಡಿಕೊಳ್ಳುತ್ತಿದ್ದೀರೋ ಗೊತ್ತಿಲ್ಲ. ನಮ್ಮ ರಾಜ್ಯದೊಳಗೆ ಯಾವುದೇ ಆಪಾದನೆ ತನ್ನ ಮೇಲೆಯೂ ಅಥವಾ ತನ್ನ ಕುಟುಂಬದ ಮೇಲೆ ಯಾರಾದರೂ ಮಾಡಿದರು ಎಂದರೆ ಅದಕ್ಕೆ ಪ್ರತಿಸ್ಪಂದಿಸಿ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ Judicial Inquiry Commission ಅನ್ನು ಮಾಡಿರುವಂತಹ ಮುಖ್ಯಮಂತ್ರಿ ಯಾರಾದರೂ ಇದ್ದರೆ ಅದು ಸನ್ಮಾನ್ಯ ಸಿದ್ಧರಾಮಯ್ಯನವರು ಮಾತ್ರ.

**(ಈ ಹಂತದಲ್ಲಿ ಆಡಳಿತ ಪಕ್ಷದ ಮಾನ್ಯ ಸದಸ್ಯರುಗಳು ಮೇಜು ತಟ್ಟುವ ಮೂಲಕ ಹರ್ಷಿಸಿದರು)**

**ಶ್ರೀ ಸಿ.ಟಿ. ರವಿ:-** ಮಾನ್ಯ ಸಭಾಪತಿಯವರೇ, . . .

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ನಾನು ಒಂದು ಮಾತನ್ನು ಹೇಳಬಯಸುತ್ತೇನೆ. ಇದು ಹೊರಗಡೆ ಬೇಕಾದಷ್ಟು ಚರ್ಚೆಯಾಗಲಿ. ಹೊರಗಡೆಯಾಗುವ ಚರ್ಚೆಗೆ ಇಲ್ಲಿ ಚರ್ಚೆ ಮಾಡಬಾರದು ಎಂದಿದೆಯೇ? ಹೊರಗಡೆ ಬೇಕಾದಷ್ಟು ಬೇರೆ ವಿಚಾರಗಳು ಚರ್ಚೆಯಾಗಬಹುದು. ಆದರೆ ಅದು ಇಲ್ಲಿ ಚರ್ಚೆಯಾಗಬಾರದು ಎಂದು ಕಾನೂನಿನಲ್ಲಿದೆಯೇ?

**ಶ್ರೀ ಹೆಚ್.ಕೆ. ಪಾಟೀಲ್:-** ಸನ್ಮಾನ್ಯ ಯಡಿಯೂರಪ್ಪನವರು ಮತ್ತು ಅವರ ಕುಟುಂಬದವರ ಮೇಲೆ ಆಪಾದನೆ ಬಂತು ಅವರು Inquiry Commission ಮಾಡಿದ್ದರಾ?

(**ಗೊಂದಲ**)

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ನಾವು ನೋಡಿದ್ದೇವೆ. Redo ನಲ್ಲಿ ಏನಾಯಿತು?

(**ಗೊಂದಲ**)

**ಶ್ರೀ ಹೆಚ್.ಕೆ. ಪಾಟೀಲ್:-** ಶ್ರೀ ಹೆಚ್.ಡಿ. ಕುಮಾರಸ್ವಾಮಿಯವರ ಮೇಲೆ ಆಪಾದನೆ ಬಂತು ಕುಮಾರಸ್ವಾಮಿಯವರು Inquiry Commission ಮಾಡಿದ್ದರಾ? (**ಗೊಂದಲ**) ಮಾಜಿ ಮುಖ್ಯಮಂತ್ರಿಗಳಾದ ಶ್ರೀ ಸದಾನಂದಗೌಡರ ಮೇಲೆ ಬಂತು, ಶ್ರೀ ಜಗದೀಶ್ ಶೆಟ್ಟರ್‌ರವರ ಮೇಲೆ ಆಪಾದನೆ ಬಂತು. ಮಾಜಿ

ಮುಖ್ಯಮಂತ್ರಿ ಶ್ರೀ ಬಸವರಾಜ ಬೊಮ್ಮಾಯಿಯವರ ಮೇಲೆ ಆಪಾದನೆ ಬಂತು. ಶ್ರೀ ಬಸವರಾಜ ಬೊಮ್ಮಾಯಿಯವರು Inquiry Commission ಮಾಡಿದ್ದರಾ? ದಿಟ್ಟತನದಿಂದ ಧೈರ್ಯವಾಗಿ ತಾವು ಪ್ರಾಮಾಣಿಕ ಎಂದು ಯಾರಾದರೂ Inquiry Commission ಮಾಡಿದ್ದರೆ ಅದು ಸನ್ಮಾನ್ಯ ಸಿದ್ಧರಾಮಯ್ಯನವರು ಮಾತ್ರ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ನಾವೂ ನೋಡಿದ್ದೇವೆ. Redo ನಲ್ಲಿ ಏನಾಯಿತು? ನೀವು ಅಲ್ಲಿ ಕೂಡ ಆಯೋಗ ಮಾಡಿದ್ದಿರಿ. ಆಯೋಗದ ವರದಿ ಎಲ್ಲಿ? ನೀವು ಮುಚ್ಚಿಹಾಕಲಿಲ್ಲವೇ? ಆದ್ದರಿಂದ ಈ ವಿಚಾರಣೆಯೂ ಅಷ್ಟೇ ಆಗುತ್ತದೆ. ಆದ್ದರಿಂದ ಇದು ಸದನದಲ್ಲಿ ಚರ್ಚೆಯಾಗಬೇಕು. ಇದನ್ನು ಚರ್ಚೆಗೆ ಇಡಿ. ನೀವು ಏನು ಹೇಳಬೇಕೋ ಹೇಳಿ. ನಾವು ಕೂಡ ಹೇಳುತ್ತೇವೆ, ಚರ್ಚೆಯಾಗಲಿ.

**ಶ್ರೀ ಹೆಚ್.ಕೆ. ಪಾಟೀಲ್:-** ಅಷ್ಟಾಗಿಯೂ ತಾವು ಈ ರೀತಿ ಹೋರಾಟ ಮಾಡುತ್ತಿದ್ದೀರಿ. ರಾಜಕೀಯ ಮಾಡುವುದಕ್ಕೇ ಮಾಡುತ್ತಿದ್ದೀರಿ. ತಾವೇನು ಸದನದ ಕಲಾಪಕ್ಕೆ ಅಡಚಣೆ ಉಂಟು ಮಾಡುತ್ತಿದ್ದೀರಿ ಇದು ಸರಿಯಾದುದಲ್ಲ.

**ಶ್ರೀ ಸಿ.ಟಿ. ರವಿ:-** ಕುರಿ ಕಾಯುವುದಕ್ಕೆ ತೋಳ.

**ಶ್ರೀ ಹೆಚ್.ಕೆ. ಪಾಟೀಲ್:-** ದಯಮಾಡಿ ನಾನು ತಮ್ಮಲ್ಲಿ ವಿನಂತಿ ಮಾಡುತ್ತೇನೆ, ನಾವು ಬಿಲ್ಲುಗಳನ್ನು ತೆಗೆದುಕೊಳ್ಳಬೇಕು. ಅವುಗಳನ್ನು ಚರ್ಚೆ ಮಾಡುವುದಕ್ಕೆ ಅವರಲ್ಲಿ ವಿನಂತಿ ಮಾಡುತ್ತೇನೆ. ತಾವೆಲ್ಲಾ ಬಹಳ ಹಿರಿಯರಿದ್ದೀರಿ ದಯಮಾಡಿ ತಮ್ಮ ಸ್ಥಾನಗಳಿಗೆ ಬನ್ನಿ. ತಮ್ಮ ಸಲಹೆ ಸೂಚನೆಗಳನ್ನು ಕೊಡಬೇಕೆಂದು ವಿನಂತಿ ಮಾಡುತ್ತಿದ್ದೇನೆ.

**(ಗೊಂದಲ)**

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ನಾನು ನಿಮಗೆ ಒಂದು ವಿಚಾರವನ್ನು ಹೇಳುವುದಕ್ಕೆ ಇಷ್ಟಪಡುತ್ತೇನೆ. ಕಾಂಗ್ರೆಸ್ ಪಕ್ಷವನ್ನು, ಮುಖ್ಯಮಂತ್ರಿ ಸಿದ್ಧರಾಮಯ್ಯನವರನ್ನು ದಲಿತ ಸಮುದಾಯದವರು ಬಹಳ ಗೌರವದಿಂದ ಕಂಡಿದ್ದರು (**ಗೊಂದಲ**)

**ಶ್ರೀ ಹೆಚ್.ಕೆ. ಪಾಟೀಲ್:-** ಶ್ರೀ ಬಿ.ಎಸ್. ಯಡಿಯೂರಪ್ಪನವರು ಏತಕ್ಕೆ Inquiry Commission ಮಾಡಲಿಲ್ಲ? ಶ್ರೀ ಹೆಚ್.ಡಿ. ಕುಮಾರಸ್ವಾಮಿ ಏತಕ್ಕೆ ಮಾಡಲಿಲ್ಲ? ಶ್ರೀ ಜಗದೀಶ್ ಶೆಟ್ಟರ್‌ರವರು ಏತಕ್ಕೆ ಮಾಡಲಿಲ್ಲ? (ಗೊಂದಲ) ಏತಕ್ಕೆ ಮಾಡಿಲ್ಲ? ನಮ್ಮ ಮುಖ್ಯಮಂತ್ರಿಯವರು Inquiry Commission ಮಾಡಿದರು (**ಗೊಂದಲ**)

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ದಲಿತರು ಅವರನ್ನು ನಂಬಿದ್ದರು. ಆ ನಂಬಿಕೆಗೆ ಈ ಸರ್ಕಾರ ದ್ರೋಹ ಮಾಡಿದೆ. ದಲಿತರ ಚರ್ಮ ಸುಲಿದು ಚಪ್ಪಲಿ ಮಾಡಿ ಹಾಕಿಕೊಂಡು (**ಗೊಂದಲ**) ದಲಿತರು ನಂಬಿದ್ದಕ್ಕೆ ಅವರ ಚರ್ಮ ಸುಲಿದು ಚಪ್ಪಲಿ ಮಾಡಿ ಹಾಕಿಕೊಂಡಿದ್ದಾರೆ.

**ಉಪ ಸಭಾಪತಿಯವರು:-** ದಯವಿಟ್ಟು ಸಹಕಾರ ಮಾಡಿ.

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ:-** ಆದ್ದರಿಂದ ನಾವು ಕೇಳುತ್ತಿರುವುದು ಇದು ಸದನದಲ್ಲಿ ಚರ್ಚೆಯಾಗಲೇಬೇಕು. ಚರ್ಚೆಯಾಗಲಿಲ್ಲವೆಂದರೆ, ನಾವು ಯಾವುದೇ ಕಾರಣಕ್ಕೂ ಒಪ್ಪುವುದಕ್ಕೆ ಸಾಧ್ಯವಿಲ್ಲ.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿನಿರತರಾಗಿದ್ದ ಮಾನ್ಯ ಸದಸ್ಯರುಗಳು ಮಾನ್ಯ ಮುಖ್ಯಮಂತ್ರಿಗಳ ಹಾಗೂ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**12. ಪ್ರಕಟಣೆ**

**ಉಪ ಸಭಾಪತಿಯವರು:-** ಮಾನ್ಯ ಸಭಾಧ್ಯಕ್ಷರಿಂದ ಈ ಮುಂದಿನ ಸಂದೇಶ ಬಂದಿರುತ್ತದೆ. ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮಗಳ 104ನೆಯ ನಿಯಮದ ಮೇರೆಗೆ ವಿಧಾನ ಸಭೆಯು ದಿನಾಂಕ 25.7.2024ರಂದು ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024ನ್ನು ತಿದ್ದುಪಡಿಯೊಂದಿಗೆ ಹಾಗೂ ಈ ಕೆಳಕಂಡ ವಿಧೇಯಕಗಳನ್ನು ಅಂಗೀಕರಿಸಿರುತ್ತದೆಂದು ಹಾಗೂ ಸದರಿ ವಿಧೇಯಕಗಳಿಗೆ ವಿಧಾನ ಪರಿಷತ್ತಿನ ಸಹಮತಿ ನೀಡಬೇಕೆಂದು ಕೋರಿರುತ್ತಾರೆ.

1. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2024
2. ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024
3. ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024.
4. ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
5. ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2024.

**ಶ್ರೀ ಎಸ್.ಎಲ್. ಭೋಜೇಗೌಡ:-** ಮಾನ್ಯ ಸಭಾಪತಿಯವರೇ, the House is not in order. ಸಭೆಯ ಯಾವುದೇ ಪತ್ರಗಳನ್ನಿಟ್ಟು ಇವತ್ತು ಅಜೆಂಡಾ ನಡೆಸುವ ಹಾಗಿಲ್ಲ. ದಯಮಾಡಿ ಸಭೆಯನ್ನು ತಹಬದಿಗೆ ತನ್ನಿ. ಆಮೇಲೆ ನೀವು ಏನು ಬೇಕಾದರೂ ಮಾಡಿ. ಇದು ತಪ್ಪಲ್ಲವೇ?

**ಉಪ ಸಭಾಪತಿಯವರು:-** ನೀವು ಸದನ ಆರ್ಡರ್‌ಗೆ ಬಂದರೆ ಆಗ ನಾವು ಮಾತನಾಡುವ ಕೆಲಸ ಮಾಡಬಹುದು. House order ನಲ್ಲಿ ಇಲ್ಲದಿದ್ದಾಗ ಏನೂ ಮಾಡುವುದಕ್ಕಾಗುವುದಿಲ್ಲ. I am very sorry.

**(ಈ ಹಂತದಲ್ಲಿ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದ ವಿರೋಧ ಪಕ್ಷಗಳ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**13. ಸಭೆಯ ಮುಂದಿಡಲಾದ ಕಾಗದ ಪತ್ರಗಳು**

**ಕಾರ್ಯದರ್ಶಿ, ಕ.ವಿ.ಪ:-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024ನ್ನು ತಿದ್ದುಪಡಿಯೊಂದಿಗೆ ಹಾಗೂ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

1. ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024.

2. ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024

3. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2024
4. ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024
5. ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕ, 2024.

**ಉಪ ಸಭಾಪತಿಯವರು:-** ಮಂಡಿಸಲಾಯಿತು. ಈಗ ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024 ಮೇಲಿನ ಪ್ರಸ್ತಾವನೆಯನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

**14. ಶಾಸನ ರಚನೆ**

**ವಿಧೇಯಕಗಳ ಪರ್ಯಾಲೋಚನೆ ಹಾಗೂ ಅಂಗೀಕಾರ**

**ಋ) ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, 2024ರ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ಇದೊಂದು ಅತ್ಯಂತ ಸರಳವಾದ ಹಾಗೂ ಸಣ್ಣ ತಿದ್ದುಪಡಿಯಾಗಿದೆ. ಈ ತಿದ್ದುಪಡಿ ಮುಖಾಂತರ ಕಂಪನಿಯ ಅಥವಾ ಫರ್ಮ್ ಅಥವಾ ಸೀಮಿತ ಹೊಣೆಗಾರಿಕೆ ಸಹಭಾಗಿತ್ವ ಅಂದರೆ ಎಲ್.ಎಲ್.ಪಿ ಸಂಸ್ಥೆ ಅಥವಾ ಪಾಲುದಾರಿಕೆ ಫರ್ಮ್, ಆಸಕ್ತಿಯುಳ್ಳ ಸೊಸೈಟಿಗಳು ಅಥವಾ ಸಹಕಾರ ಸಂಘಗಳು, ಟ್ರಸ್ಟ್‌ಗಳು ಅಥವಾ ಸರ್ಕಾರೇತರ ಸಂಸ್ಥೆಗಳು ಅಥವಾ ಆಸಕ್ತಿಯುಳ್ಳ ವ್ಯಕ್ತಿಗಳನ್ನು ಸ್ಮಾರಕ ಮಿತ್ರರು ಎನ್ನುವ ಪಟ್ಟಿಯಲ್ಲಿ ಸೇರಿಸುವುದಕ್ಕೆ ಅರ್ಹರಾಗಿಸುವುದು ಮತ್ತು ಸ್ಮಾರಕ ದತ್ತಿ ಯೋಜನೆಗೆ ಅನುಕೂಲವಾಗುವಂತಹ ವಿಶೇಷವಾದ ತಿದ್ದುಪಡಿಯಾಗಿದೆ.

(ಮುಂದು)

(692) 25-07-2024 3-40 KH/VK (ಉಪ ಸಭಾಪತಿಯವರ ಉಪಸ್ಥಿತಿ)

**ಶ್ರೀ ಹೆಚ್.ಕೆ.ಪಾಟೀಲ್ (ಮುಂದು):**

ಇದರ ಜೊತೆಗೆ ಈ ಒಂದು ಅಧಿನಿಯಮದ ಮೂಲಕ ಯಾರು ಪ್ರಾಚೀನ ಸ್ಮಾರಕಗಳಿಗೆ ತೊಂದರೆ ಮಾಡುತ್ತಾರೆ, ಅದರ ಅವಶೇಷಗಳಿಗೆ ಧಕ್ಕೆ ತರುತ್ತಾರೆ. ಅಂತಹ ಒಂದು ಉಲ್ಲಂಘನೆಗಾಗಿ ದಂಡನೆ ಮತ್ತು ಶಿಕ್ಷೆಯನ್ನು ಪರಿಷ್ಕರಿಸುವುದಕ್ಕೆ ಈ ಒಂದು ತಿದ್ದುಪಡಿ ಅನುಕೂಲವಾಗುತ್ತದೆ. ಇದರೊಳಗೆ ದತ್ತು ಸ್ಮಾರಕ ಯೋಜನೆಗೆ ಒಂದು ಬಲ ನೀಡುತ್ತದೆ. ಆದ್ದರಿಂದ, ಈ ಬಿಲ್ ಅನ್ನು ಪಾಸ್ ಮಾಡಿಕೊಡಬೇಕೆಂದು ತಮ್ಮ ಮೂಲಕ ಈ ಸದನವನ್ನು ಪ್ರಾರ್ಥಿಸುತ್ತೇನೆ.

**ಉಪ ಸಭಾಪತಿಯವರು:- ಪ್ರಸ್ತಾವ ಏನೆಂದರೆ;**

"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು**

**ಖಂಡ 2 ರಿಂದ 5ರವರೆಗೆ**

**ಉಪ ಸಭಾಪತಿಯವರು:-** "ಖಂಡ 2 ರಿಂದ 5 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ರಿಂದ 5 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳ ಮತ್ತು ಅವಶೇಷಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**ಎ) ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು) (ಸಮಾಜ ಕಲ್ಯಾಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಬಿಜೆಪಿ ಮತ್ತು ಜೆಡಿ(ಎಸ್) ಪಕ್ಷದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಹೆಚ್.ಕೆ.ಪಾಟೀಲ್ (ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು) (ಸಮಾಜ ಕಲ್ಯಾಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಈ ಕಾನೂನು ಸಣ್ಣದಾಗಿದ್ದರೂ ಸಹ ಬಹಳ ದೂರದ ಪರಿಣಾಮವನ್ನು ಬೀರುವಂತಹ ಒಂದು ಕಾನೂನು ಆಗಿದೆ. ಇದರಿಂದ ಮಾನ್ಯ ವಿರೋಧ ಪಕ್ಷದ ನಾಯಕರಿಗೆ ಸಮಾಧಾನವಾಗುತ್ತದೆ ಎಂದು ನಾನು ತಿಳಿದುಕೊಂಡಿದ್ದೇನೆ. ಕಳೆದ ಸುಮಾರು 15 ವರ್ಷಗಳಿಂದ ಹೊರಗುತ್ತಿಗೆಯಲ್ಲಿ ಯಾವುದೇ ಮೀಸಲಾತಿ ಇರಲಿಲ್ಲ. ಸರ್ಕಾರ ಸಂವಿಧಾನವನ್ನು ಉಲ್ಲಂಘನೆ ಮಾಡಿತು. ಯಾವುದೇ ಸಾಮಾಜಿಕ ನ್ಯಾಯ ಲಭ್ಯವಾಗಲಿಲ್ಲ. ಮೆರಿಟ್‌ಗೂ ಸಹಿತ ಯಾವುದೇ ಗೌರವ ಸಿಗಲಿಲ್ಲ. ಇದು ಭ್ರಷ್ಟಚಾರಕ್ಕೆ ಕಾರಣವಾಗಿದೆ. ಅಂತಹ ಒಂದು 'outsource employment' ನಲ್ಲಿ ಸುಧಾರಣೆಯಾಗಬೇಕು. ಸಾಮಾಜಿಕ ನ್ಯಾಯವನ್ನು ಒದಗಿಸಬೇಕು. ಸಂವಿಧಾನವನ್ನು ಕಾಪಾಡಬೇಕು. ಸಂವಿಧಾನದ ಆಶಯಗಳನ್ನು ಪೂರೈಸಬೇಕೆನ್ನುವ ಉದ್ದೇಶದಿಂದ ಈ ವಿಧೇಯಕದಲ್ಲಿ ತಿದ್ದುಪಡಿಯನ್ನು ತಂದಿದ್ದೇವೆ. ಈ ತಿದ್ದುಪಡಿಯ ಮೂಲಕ ಹೊರಗುತ್ತಿಗೆಯಲ್ಲಿ ಆಗುವಂತಹ ಎಲ್ಲಾ employment ಗೆ ಅನುಕೂಲವಾಗಬೇಕು. ಅದು ಎಸ್‌ಸಿ., ಇರಲಿ, ಎಸ್‌ಟಿ., ಇರಲಿ, backward classes ಇರಲಿ, ಅವರೆಲ್ಲರಿಗೂ ಮೀಸಲಾತಿ ಕೊಡುವಂತಹ ಮೆರಿಟ್‌ಗೆ ವಿಶೇಷವಾದ ಸ್ಥಾನ ಸಿಗುವ ಹಾಗೆ ಮಾಡುವುದಕ್ಕೆ ಈ ಒಂದು ಕಾನೂನಿನಿಂದ ಅನುಕೂಲವಾಗುತ್ತದೆ. ದಯಮಾಡಿ ಈ ವಿಧೇಯಕವನ್ನು ಪಾಸ್ ಮಾಡಿಕೊಡಬೇಕೆಂದು ತಮ್ಮಲ್ಲಿ ವಿನಂತಿ ಮಾಡುತ್ತೇನೆ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಒಂದು ನಿಮಿಷ. ನೋಡಿ. ಮಾನ್ಯ ಸಚಿವರೇ, ತಾವು ಮೀಸಲಾತಿಯನ್ನು ತರುತ್ತೀರಿ ಎಂದು ಹೇಳಿದ್ದೀರಿ. ಆದರೆ, 20 ಹುದ್ದೆಗಳನ್ನು ನೀಡಿದ್ದರೆ ಮಾತ್ರ ಮೀಸಲಾತಿ ಹೇಗೆ ಸಾಧ್ಯ?

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಹೇಳಿ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ನಮ್ಮ ಕಳೆದ ಸರ್ಕಾರದಲ್ಲಿ ನಾವು ಗುತ್ತಿಗೆ ಆಧಾರದಲ್ಲಿಯೂ ಕೂಡ . . .

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಬಿಜೆಪಿ ಮತ್ತು ಜೆಡಿ(ಎಸ್) ಪಕ್ಷದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರು ಇದರ ಬಗ್ಗೆ ಮಾತನಾಡುತ್ತಿದ್ದಾರೆ. ದಯವಿಟ್ಟು ನೀವು ಕೂಗಿದರೆ ಅರ್ಥವಾಗುವುದಿಲ್ಲ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸದಸ್ಯರುಗಳೇ, ಒಂದು ನಿಮಿಷ. ಕಳೆದ ಸರ್ಕಾರದಲ್ಲಿ ನಾವೇ ಹೋರಾಟ ಮಾಡಿದ್ದೇವೆ. ನಾವು ಹೋರಾಟವನ್ನು ಮಾಡಿ, ನೀವು ಗುತ್ತಿಗೆ ಆಧಾರದಲ್ಲಿಯೂ ತೆಗೆದುಕೊಳ್ಳುವಾಗ ಮೀಸಲಾತಿಯನ್ನು ಅಲ್ಲಿಯೂ ಕೂಡ ಮುಂದುವರೆಸಬೇಕೆಂದು ಹೇಳಿದ್ದೇವೆ. ಆವತ್ತು ಸರ್ಕಾರ ಇದೇ ಆದೇಶವನ್ನು ಮಾಡಿತ್ತು. ಇವತ್ತು ಈ ಸರ್ಕಾರ ಮುಂದುವರೆಸುವಂತಹ ಕೆಲಸವನ್ನು ಮಾಡಿದೆ. ಆದರೆ, ಏನಾಯಿತೆಂದರೆ, 20 ಹುದ್ದೆಗಳನ್ನು ತೆಗೆದುಕೊಂಡರೆ ಮಾತ್ರ ಮೀಸಲಾತಿ. ಇಲ್ಲದಿದ್ದರೆ ಇಲ್ಲ ಎಂದು ಹೇಳಿದರು. ಇದು ಯಾವ ನ್ಯಾಯ? ಇದು ಮೀಸಲಾತಿ ಆಗುತ್ತದೆಯೇ? ಒಂದು ಸಮಯದಲ್ಲಿ 30 ಹುದ್ದೆಗಳನ್ನು ತೆಗೆದುಕೊಳ್ಳಬೇಕೆಂದಿದ್ದರೆ ಅಲ್ಲಿ ಏನಾಗುತ್ತದೆ?

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ಚರ್ಚೆಗೆ ಅವಕಾಶ ಕೊಡಿ.

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೇ, ಅವರೆಲ್ಲಾ ಪ್ರತಿಭಟನೆ ಮಾಡುತ್ತಿದ್ದಾರೆ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಪ್ರಕಾಶ್ ಕೆ.ರಾಥೋಡ್‌ರವರೇ, ಅವರು ಪ್ರತಿಭಟನೆ ಮಾಡಲಿ ಬಿಡಿ. ನಾನು ಮಾತನಾಡುತ್ತಿದ್ದೇನಲ್ಲವೇ? ನೀವು ಕುಳಿತುಕೊಳ್ಳಿ.

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಮಾತನಾಡಿ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ನಾನು ಮಾತನಾಡುತ್ತಿದ್ದೇನೆ.

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಬಿಲ್ ಇದೆ.

**ಡಾ॥ ಯತೀಂದ್ರ.ಎಸ್ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, ನಿಮ್ಮ ಸದಸ್ಯರೇ, ಪ್ರತಿಭಟನೆ ಮಾಡುತ್ತಿದ್ದಾರೆ. ತಾವು ಚರ್ಚೆ ಹೇಗೆ ಮಾಡುತ್ತೀರಿ?

**(ಗೊಂದಲ)**

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ:-** ಮಾನ್ಯ ಸಭಾಪತಿಯವರೇ, ಅದರಲ್ಲಿಯೂ ಕೂಡ ವಂಚನೆ ಮಾಡುತ್ತಿದೆ. ಇದಕ್ಕೆ ಸರ್ಕಾರ ಉತ್ತರ ಕೊಡಬೇಕು. ಅದು ತಿದ್ದುಪಡಿಯಾಗಬೇಕೆನ್ನುವುದು ಒಂದು. ಎರಡನೆಯದಾಗಿ

ನಾನು ಹೇಳುವುದೇನೆಂದರೆ, ದಲಿತ ಸಮುದಾಯ, ಮುಖ್ಯಮಂತ್ರಿಗಳನ್ನು ಮತ್ತು ಸರ್ಕಾರವನ್ನು ನಂಬಿತ್ತು. ಅದಕ್ಕಾಗಿ, ನೀವು ಇವತ್ತು ಸರ್ಕಾರದಲ್ಲಿ ಇದ್ದೀರಿ. ಆದರೆ, ಅವರ ನಂಬಿಕೆಗೆ ನೀವು ಯಾವ ರೀತಿ ದ್ರೋಹ ಬಗೆಯುತ್ತಿದ್ದೀರಿ ಎಂದರೆ, ದಲಿತರ ಚರ್ಮ ಸುಲಿದು ಅವರನ್ನು ಚಪ್ಪಲಿಯಾಗಿ ಮಾಡಿಕೊಂಡು ಇವತ್ತು ಮಜಾ ಮಾಡುತ್ತಿದ್ದೀರಿಯೇ? ಅದಕ್ಕೆ ಇವತ್ತು ತಿದ್ದುಪಡಿ ಮಾಡುವಾಗ . . .

**(ಗೊಂದಲ)**

**ಶ್ರೀ ಕೃಷ್ಣಭೈರೆಗೌಡ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರು ಏನು ಮಾತನಾಡುತ್ತಿದ್ದಾರೆ. ಈ ಬಿಲ್‌ಗೂ, ಅವರು ಮಾತನಾಡುತ್ತಿರುವುದಕ್ಕೂ ಏನು ಸಂಬಂಧ ಇದೆ. ಅವರು ಬಿಲ್ ಬಗ್ಗೆ ಮಾತನಾಡುತ್ತಿಲ್ಲ. ಅವರು ರಾಜಕೀಯ ಭಾಷಣ ಮಾಡುತ್ತಿದ್ದಾರೆ.

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ತಾವು ಬಿಲ್ ಬಗ್ಗೆ ಏನಾದರೂ ಇದ್ದರೆ . . .

**(ಗೊಂದಲ)**

**ಶ್ರೀ ಕೃಷ್ಣಭೈರೆಗೌಡ:-** ಮಾನ್ಯ ಸಭಾಪತಿಯವರೇ, . . .

**ಉಪ ಸಭಾಪತಿಯವರು:-** ಮಾನ್ಯ ಸಚಿವರೇ, ನಾನು ಮಾತನಾಡುತ್ತೇನೆ ಕುಳಿತುಕೊಳ್ಳಿ. **(ಗೊಂದಲ)** ಮಾನ್ಯ ಕೃಷ್ಣಭೈರೆಗೌಡರವರೇ, ನೀವು ಸರ್ಕಾರ. ಸರ್ಕಾರದಿಂದ ಉತ್ತರವನ್ನು ಕೊಟ್ಟಿದ್ದೀರಿ. ಏನಾದರೂ ಸ್ಪಷ್ಟೀಕರಣ ಇದ್ದರೆ ಮಾತನಾಡುತ್ತಾರೆ. ಅದಕ್ಕೆ ಏನು ಮಾಡುವುದಕ್ಕೆ ಆಗುವುದಿಲ್ಲ.

**(ಗೊಂದಲ)**

**ಶ್ರೀ ಕೃಷ್ಣಭೈರೆಗೌಡ:-** ಮಾನ್ಯ ಸಭಾಪತಿಯವರೇ, ಇವರು ಯಾವಾಗ ಸ್ಪಷ್ಟೀಕರಣವನ್ನು ಕೇಳುವುದು. ಇವರಿಗೆ ಇಷ್ಟ ಬಂದಾಗ ಸ್ಪಷ್ಟೀಕರಣ ಕೇಳುವುದೇ, ಯಾವುದಾದರೂ ಒಂದು stand ತೆಗೆದುಕೊಳ್ಳಲಿ. ಇವರಿಗೆ ಬೇಕಾದಾಗ ಸ್ಪಷ್ಟೀಕರಣ, ಬೇಡದೇ ಇದ್ದಾಗ . . . ಹಾಗಾದರೆ ಎಲ್ಲಾ ಕಲಾಪಗಳು ನಡೆಯುವುದಕ್ಕೆ ಅವಕಾಶ ಮಾಡಿಕೊಡಲಿ. Pick and choose ಮಾಡುವುದಕ್ಕೆ ಆಗುವುದಿಲ್ಲ. ಇದಕ್ಕೆ ಒಂದು stand ತೆಗೆದುಕೊಳ್ಳಲಿ.

**ಉಪ ಸಭಾಪತಿಯವರು:-** ಮಾನ್ಯ ಕೃಷ್ಣಭೈರೆಗೌಡರವರೇ, ಈ ವ್ಯವಸ್ಥೆಯೊಳಗೆ . . . ನೀವು ಬಹಳ ತಿಳುವಳಿಕೆ ಇರುವವರು. ಇದಕ್ಕೆ ಮಾನ್ಯ ಹೆಚ್.ಕೆ.ಪಾಟೀಲ್‌ರವರು ಮಾತನಾಡುತ್ತಿದ್ದಾರೆ. ಇರಲಿ. ಮಾನ್ಯ ವಿರೋಧ ಪಕ್ಷದ ನಾಯಕರು . . .

**(ಗೊಂದಲ)**

**ಶ್ರೀ ಐವನ್ ಡಿ'ಸೋಜಾ (ವಿಧಾನಸಭಾ ಕ್ಷೇತ್ರ):-** ಮಾನ್ಯ ಸಭಾಪತಿಯವರೇ, . . .

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೇ, . . .

**ಉಪ ಸಭಾಪತಿಯವರು:-** ಮಾನ್ಯ ಸದಸ್ಯರುಗಳೇ, ನಾನು ಮಾತನಾಡುತ್ತಿದ್ದೇನೆ. ನೀವು ಕೇಳುವುದಿಲ್ಲವೆಂದರೆ ಹೇಗೆ? ನೀವು ಕೇಳಸಿಕೊಳ್ಳಿ. ಮಾನ್ಯ ಕೃಷ್ಣಭೈರೆಗೌಡರವರೇ, ದಯವಿಟ್ಟು ಕುಳಿತುಕೊಳ್ಳಿ.

**ಶ್ರೀ ಕೃಷ್ಣಭೈರೆಗೌಡ:-** ಮಾನ್ಯ ಸಭಾಪತಿಯವರೇ, ಅವರು ಸ್ಪಷ್ಟೀಕರಣ ಕೇಳುವುದಕ್ಕೆ ಅವರಿಗೆ ಅಧಿಕಾರ ಇದೆ. ನಾವು ಅದನ್ನು deny ಮಾಡುವುದಿಲ್ಲ. ಆದರೆ, ಯಾವುದಾದರೂ ಒಂದು stand ಅವರು ತೆಗೆದುಕೊಳ್ಳಲಿ.

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶಿತರು):-** ಮಾನ್ಯ ಸಭಾಪತಿಯವರೇ, . . .

**ಉಪ ಸಭಾಪತಿಯವರು:-** ಮಾನ್ಯ ಕೃಷ್ಣಭೈರೆಗೌಡರವರೇ, ದಯವಿಟ್ಟು ಕುಳಿತುಕೊಳ್ಳಿ. ಮಾನ್ಯ ಭಾರತಿ ಶೆಟ್ಟಿಯವರೇ, ಕುಳಿತುಕೊಳ್ಳಿ.

**(ಗೊಂದಲ)**

**ಶ್ರೀ ಕೃಷ್ಣಭೈರೆಗೌಡ:-** ಮಾನ್ಯ ಸಭಾಪತಿಯವರೇ, ಅವರಿಗೆ ಇಷ್ಟಬಂದ ಹಾಗೆ ಮಾತನಾಡುವುದಕ್ಕೆ ಅವಕಾಶ ಕೊಡಬಾರದೆಂದು ತಮ್ಮಲ್ಲಿ ಮನವಿ ಮಾಡುತ್ತಿದ್ದೇನೆ. ಯಾವುದಾದರೂ ಒಂದು stand ತೆಗೆದುಕೊಳ್ಳಲಿ.

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಮಾನ್ಯ ಸಚಿವರು ಬಿಲ್‌ನ ಬಗ್ಗೆ ಹೇಳಿದ್ದಾರೆ. ಅದನ್ನು ತಾವು divert ಮಾಡುವುದು ಬೇಡ.

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು):-** ಮಾನ್ಯ ಸಭಾಪತಿಯವರೇ, ಅವರು divert ಅಲ್ಲ. ಅವರು ರಾಜಕೀಯ ಭಾಷಣ ಮಾಡಿದರು. ಅದನ್ನು ಒಪ್ಪುತ್ತೀರಾ ಇನ್ನೇನು?

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೇ, ಬಿಲ್‌ಗೆ ಏನಾದರೂ ಸಂಬಂಧಪಟ್ಟ ಹಾಗೆ ಇದ್ದರೆ ಹೇಳಿ. ಬೇರೆ divert ಮಾಡಬೇಡಿ.

**(ಗೊಂದಲ)**

**ಶ್ರೀ ಎನ್.ಎಸ್.ಬೋಸರಾಜು:-** ಮಾನ್ಯ ಸಭಾಪತಿಯವರೇ, ಮಾನ್ಯ ವಿರೋಧ ಪಕ್ಷದ ನಾಯಕರು ಬಿಲ್ ಅನ್ನು ಬಿಟ್ಟು ರಾಜಕೀಯ ಭಾಷಣ ಮಾಡುತ್ತಿದ್ದಾರೆ. (ಗೊಂದಲ) ಬಿಲ್ ಬಗ್ಗೆ ಮಾತನಾಡುವುದಿದ್ದರೆ ಮಾತನಾಡಲಿ. ಅವರು ರಾಜಕೀಯ ಭಾಷಣ ಮಾಡಬಾರದು.

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ಸಚಿವರೇ, . . .

**(ಈ ಹಂತದಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರನ್ನು ಹೊರತುಪಡಿಸಿ, ಬಿಜೆಪಿ ಮತ್ತು ಜೆಡಿ(ಎಸ್.) ಪಕ್ಷದ ಮಾನ್ಯ ಸದಸ್ಯರುಗಳು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಯಲ್ಲಿ ಧರಣಿ ನಿರತರಾಗಿದ್ದರು)**

**ಶ್ರೀ ಹೆಚ್.ಕೆ.ಪಾಟೀಲ್:-** ಮಾನ್ಯ ವಿರೋಧ ಪಕ್ಷದ ನಾಯಕರೇ, 20 ಹುದ್ದೆಗಳು ಇದ್ದರೆ reservation ಎಂದು ನಿಮಗೆ ಯಾರು ಹೇಳಿದರು?

**(ಗೊಂದಲ)**

(ಮುಂದು)

(693) 25.7.2024 3.50 ಪಿಕೆ:ವಿಕೆ (ಉಪ ಸಭಾಪತಿಗಳ ಉಪಸ್ಥಿತಿ)

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರು ಏನು 20 ಹುದ್ದೆಗಳಿದ್ದರೆ ಮಾತ್ರ ಮೀಸಲಾತಿ ಕೊಡುತ್ತಾರೆ ಎಂದು ಕೇಳಿದರೋ ಆ ಕುರಿತು ಮಾನ್ಯ ಸಚಿವರು ಉತ್ತರ ಕೊಡುತ್ತಿದ್ದಾರೆ. ಬಾವಿಯೊಳಗಿರುವ ಸದಸ್ಯರು ಸುಮ್ಮನೆ ಇರಬೇಕು.

ಮಾನ್ಯ ಕೃಷ್ಣ ಬೈರೇಗೌಡರವರೇ, ವಿಚಾರಾಧಾರಿತವಾಗಿ ಮಾತನಾಡುವ ಮಂತ್ರಿಗಳ ಪೈಕಿ ನೀವೂ ಒಬ್ಬರು ಆಗಿದ್ದೀರಿ. ನೀವೇ ಮಧ್ಯದಲ್ಲಿ ನಿಂತು ಮಾತನಾಡಿದರೆ ಹೇಗೆ?

**(ಗೊಂದಲ)**

**ಶ್ರೀ ಕೃಷ್ಣ ಬೈರೇಗೌಡ:-** ಮಾನ್ಯ ಮಂತ್ರಿಗಳು ಉತ್ತರ ಕೊಡುವುದನ್ನು ಅವರು ಕೇಳಿಸಿಕೊಳ್ಳಬೇಕು ಎನ್ನುವ ಉದ್ದೇಶದಿಂದ ಎದ್ದು ನಿಂತು ಮಾತನಾಡುತ್ತಿದ್ದೇನೆ ಅಷ್ಟೆ.

**ಉಪ ಸಭಾಪತಿಯವರು:-** ದಯವಿಟ್ಟು ಕುಳಿತುಕೊಳ್ಳಿ.

**ಶ್ರೀ ಹೆಚ್.ಕೆ.ಪಾಟೀಲ್:-** ಮಾನ್ಯ ಸಭಾಪತಿಗಳೇ, ವಿರೋಧ ಪಕ್ಷದ ನಾಯಕರು 20 ಹುದ್ದೆಗಳನ್ನು ತೆಗೆದುಕೊಂಡಾಗ ಮಾತ್ರ . . . .

**(ಗೊಂದಲ)**

**ಉಪ ಸಭಾಪತಿಯವರು:-** ವಿರೋಧ ಪಕ್ಷದ ನಾಯಕರು ಕೇಳಿರುವ ಪ್ರಶ್ನೆಗೆ ಮಾನ್ಯ ಸಚಿವರು ಉತ್ತರ ಕೊಡುವುದಕ್ಕೆ ಹೊರಟಿದ್ದಾರೆ. ನೀವು ಅದನ್ನೂ ಸಹ ಕೇಳುವುದಿಲ್ಲವೆಂದರೆ ನಾನು ಮುಂದಿನ ಹಂತಕ್ಕೆ ಹೋಗುತ್ತೇನೆ.

**(ಗೊಂದಲ)**

**ಶ್ರೀ ಹೆಚ್.ಕೆ.ಪಾಟೀಲ್:-** ಮಾನ್ಯ ಸಭಾಪತಿಗಳೇ, ಇದು ಯಾವುದೇ ಹುದ್ದೆಗಳ ಸಂಖ್ಯೆಗೆ ಸೀಮಿತಗೊಳ್ಳುವುದಿಲ್ಲ. ಈ ತಿದ್ದುಪಡಿ ಮುಖಾಂತರ ಸಂವಿಧಾನದ ಆಶಯ ಈಡೇರುತ್ತಿದೆ. ನಮ್ಮ ರೋಸ್ಟರ್ ಪ್ರಕಾರ ಈ ಮೀಸಲಾತಿ ಸಾಮಾಜಿಕ ನ್ಯಾಯವನ್ನು ಕೊಡುತ್ತದೆ. . . .

**(ಗೊಂದಲ)**

**ಉಪ ಸಭಾಪತಿಯವರು:- ಪ್ರಸ್ತಾವ ಏನೆಂದರೆ,**

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ)(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 12 ರವರೆಗೆ**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ, "ಖಂಡ 2 ರಿಂದ 12ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 12 ರವರೆಗೆ ಈ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಉಪ ಸಭಾಪತಿಯವರು:- ಪ್ರಸ್ತಾವ ಏನೆಂದರೆ,**

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಸಚಿವರು) (ಸಮಾಜ ಕಲ್ಯಾಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ)(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

**"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ)(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**ಶ್ರೀ ಸಲೀಂ ಅಹಮದ್ (ಸರ್ಕಾರದ ಮುಖ್ಯ ಸಚೇತಕರು):-** ಮಾನ್ಯ ಸಭಾಪತಿಗಳೇ, ಬಾವಿಯೊಳಗಿರುವ ಸದಸ್ಯರು ಫಲಕಗಳನ್ನು ಇಟ್ಟುಕೊಂಡು ಪ್ರದರ್ಶನ ಮಾಡುತ್ತಿದ್ದಾರೆ. ಫಲಕಗಳನ್ನು ಇಟ್ಟುಕೊಳ್ಳಬಾರದು ಎಂದು ಅವರಿಗೆ ಹೇಳಿ ಇಲ್ಲಾ ಎಂದರೆ ಮಾರ್ಷಲ್‌ಗಳ ಮೂಲಕ ಅವುಗಳನ್ನು ಆಚೆಗೆ ತೆಗೆದುಕೊಂಡು ಹೋಗುವ ವ್ಯವಸ್ಥೆ ಮಾಡಿ.

**(ಗೊಂದಲ)**

**ಉಪ ಸಭಾಪತಿಯವರು:-** ಮಾನ್ಯ ವಿರೋಧ ಪಕ್ಷದ ನಾಯಕರೆ, ಸದಸ್ಯರುಗಳು ಬಾವಿಯೊಳಗೆ ಇರುವಾಗ ಈ ರೀತಿ ಫಲಕಗಳನ್ನು ಇಟ್ಟುಕೊಳ್ಳುವುದು ನಿಯಮಬಾಹಿರವಾಗುತ್ತದೆ. ನೀವು ಆ ಫಲಕಗಳನ್ನು ಹಿಂತೆಗೆದುಕೊಳ್ಳುವಂತಹ ಕೆಲಸವನ್ನು ಮಾಡಬೇಕಾಗುತ್ತದೆ. ಗೌರವಾನ್ವಿತ ಸದಸ್ಯರು ತಾವು ಪ್ರದರ್ಶಿಸುತ್ತಿರುವ ಫಲಕಗಳನ್ನು ಕೆಳಗಡೆ ಇಡಬೇಕು. ನಿಯಮಗಳನ್ನು ಪಾಲನೆ ಮಾಡಿ. ನೀವೇ ನಿಯಮಗಳನ್ನು ಪಾಲನೆ ಮಾಡದೇ ಇದ್ದರೆ 'ಬೇಲಿಯೇ ಎದ್ದು ಹೊಲ ಮೇಯ್ದಂತೆ' ಆಗುತ್ತದೆ. ಹೇಳಬೇಕಾದ ವಿಚಾರಗಳನ್ನು ತಮ್ಮ ಗಮನಕ್ಕೆ

ತರುವಂತಹ ಕೆಲಸವನ್ನು ಪೀಠ ಮಾಡಿದೆ. ಇದನ್ನು ಅರ್ಥ ಮಾಡಿಕೊಂಡರೆ ಒಳ್ಳೆಯದು. ದಯವಿಟ್ಟು ಎಲ್ಲರೂ ಪ್ರದರ್ಶಿಸುತ್ತಿರುವ ಫಲಕಗಳನ್ನು ಕೆಳಗಡೆ ಇಡಬೇಕು.

**(ಗೊಂದಲ)**

**ಏ) ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಕೃಷ್ಣ ಭೈರೇಗೌಡ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಸಾಲಿನ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಕೃಷ್ಣ ಭೈರೇಗೌಡ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೇ**,** ಬಹಳ ವರ್ಷಗಳಿಂದ ಆಡಳಿತ ಸುಧಾರಣಾ ಆಯೋಗಗಳು ಕಂದಾಯ ಇಲಾಖೆಯಲ್ಲಿ "ಕಂದಾಯ ಆಯುಕ್ತಾಲಯ" "Revenue Commissionerate" ಇರಬೇಕೆಂದು ಸುಮಾರು ಸಲ ಶಿಫಾರಸ್ಸುಗಳನ್ನು ಕೊಟ್ಟಿದ್ದಾರೆ. ಕಂದಾಯ ಇಲಾಖೆಯಲ್ಲಿ ಹೆಚ್ಚು ಕೆಲಸ ಇರುವಂತಹ ಇಲಾಖೆ. ಒಂದು ರೀತಿಯಲ್ಲಿ ಇದು ಸರ್ಕಾರದ ಬೆನ್ನೆಲುಬು ಎಂತಲೂ ಹೇಳಬಹುದು. ಇಂತಹ ಕಡೆ ಈಗ ಮೇಲ್ಮಟ್ಟದಲ್ಲಿ ಒಬ್ಬ ಕಾರ್ಯದರ್ಶಿ ಹಂತದ ವ್ಯವಸ್ಥೆ ಇದೆ. ಆಯುಕ್ತಾಲಯ ಅಥವಾ ಆಯುಕ್ತರೂ ಇಲ್ಲ. ಇಷ್ಟೊಂದು ಕೆಲಸ ಕಾರ್ಯಗಳು ಇರುವ ಕಡೆ ಆಯುಕ್ತಾಲಯ ಇರಬೇಕು. ಏಕೆಂದರೆ ಅಲ್ಲಿ ನಾನಾ ಕಡತಗಳು, ಪ್ರಸ್ತಾವನೆಗಳು ದಿನನಿತ್ಯ ಬರುತ್ತಲೇ ಇರುತ್ತವೆ. ಇವುಗಳು ಸೂಕ್ತ ಪರಿಶೀಲನೆಗೆ ಒಳಪಡಬೇಕು ಎನ್ನುವ ಉದ್ದೇಶದಿಂದ ಆಯುಕ್ತಾಲಯ ಬೇಕು ಎನ್ನುವ ಉದ್ದೇಶದಿಂದ ಅನೇಕ ಆಯೋಗಗಳು ಶಿಫಾರಸ್ಸು ಮಾಡಿದ ಹಿನ್ನೆಲೆಯಲ್ಲಿ ... **(ಗೊಂದಲ)** ಕರ್ನಾಟಕ ಭೂ ಕಂದಾಯ ಕಾನೂನಿನಲ್ಲಿ ಆಯುಕ್ತಾಲಯದ ಉಲ್ಲೇಖವಿಲ್ಲ. **(ಗೊಂದಲ)** ಕಂದಾಯ ಇಲಾಖೆಯೂ ಉತ್ತಮ ರೀತಿಯಲ್ಲಿ ಕಾರ್ಯ ಮಾಡಬೇಕಾದರೆ ನಮ್ಮ ಮೂಲ ಕಾನೂನಿನಲ್ಲೂ ಆಯುಕ್ತಾಲಯ ಇರಬೇಕು, ಅದು ಕಾನೂನಿನ ಅಡಿಯಲ್ಲಿ ಕೆಲಸ ಮಾಡಬೇಕು ಎನ್ನುವುದು ನಮ್ಮ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ನಾವು ಈ ವಿಧೇಯಕದಲ್ಲಿ ಪ್ರಸ್ತಾವನೆ ತೆಗೆದುಕೊಂಡು ಬಂದಿದ್ದೇವೆ. ಆಯುಕ್ತಾಲಯ ರಚನೆ ಮಾಡುವುದಕ್ಕೆ ಕಾನೂನಿನಲ್ಲಿ .... **(ಗೊಂದಲ)** ಕೆಲಸವನ್ನು ಮಾಡುತ್ತಿದ್ದೇವೆ. ಒಳ್ಳೆಯ ಆಡಳಿತ ಕೊಡಬೇಕು. ಆಡಳಿತ ಸುಧಾರಣೆ ಆಗಬೇಕು. ಸಾರ್ವಜನಿಕರ ಕೆಲಸ ಸರಾಗವಾಗಿ ಆಗಬೇಕು, ತ್ವರಿತವಾಗಿ

ಆಗಬೇಕು ಎನ್ನುವ ಉದ್ದೇಶದಿಂದ ಆಯುಕ್ತಾಲಯ ರಚಿಸುವ ಸಲುವಾಗಿ ಮೂಲ ಕಾನೂನಿನಲ್ಲಿ ತಿದ್ದುಪಡಿ ಮಾಡಲಾಗಿದ್ದು ಇದನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ರಿಂದ 11 ರವರೆಗೆ**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ, "ಖಂಡ 2 ರಿಂದ 11ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 11ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಪ್ರಸ್ತಾವದ ಅಂಗೀಕಾರ**

**ಶ್ರೀ ಕೃಷ್ಣ ಭೈರೇಗೌಡ (ಕಂದಾಯ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."**

<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು **ಮಸೂದೆಗೆ ಒಪ್ಪಿಗೆ** ನೀಡಲಾಯಿತು</u>

(ಮುಂದು)

(694) 25-7-2024 4.00 ಡಿಎಸ್-ಬಿಎನ್ಎಸ್ (ಉಪ ಸಭಾಪತಿಯವರ ಉಪಸ್ಥಿತಿ)

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಉಪ ಸಭಾಪತಿಯವರು:-** ದಯವಿಟ್ಟು ಸದನದ ಬಾವಿಯೊಳಗೆ placard ಗಳನ್ನು ಪ್ರದರ್ಶಿಸಬೇಡಿ. Placard ಗಳನ್ನು ಪ್ರದರ್ಶಿಸುವುದು ಸದನಕ್ಕೆ ಗೌರವ, ಘನತೆ ತರುವಂತಹ ವಿಚಾರಗಳಲ್ಲ. ಮಾನ್ಯ ವಿರೋಧ ಪಕ್ಷದ ನಾಯಕರೇ, ತಮ್ಮ ಸದಸ್ಯರುಗಳಿಗೆ ಹೇಳಿ.

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿರೋಧ ಪಕ್ಷದ ನಾಯಕರು):-** ಮಾನ್ಯ ಸಭಾಪತಿಯವರೇ, ಈ ಸದನದಲ್ಲಿ ವಿರೋಧ ಪಕ್ಷದವರು ಮಾತ್ರ ಪ್ರದರ್ಶನ ಮಾಡಿದ್ದನ್ನು ತಾವು ನೋಡಿದ್ದೀರಿ. ವಿರೋಧ ಪಕ್ಷದವರು ಸೇರಿ ಎಲ್ಲರೂ ಪ್ರದರ್ಶನ ಮಾಡಿರುವುದನ್ನು ತಾವು ನೋಡಿದ್ದೀರಿ.

**(ಗೊಂದಲ)**

**ಐ) ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2024**

<u>**ಪರ್ಯಾಲೋಚನಾ ಪ್ರಸ್ತಾವ**</u>

**ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಮತ್ತು ಮುಜರಾಯಿ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

<u>**ಪ್ರಸ್ತಾವವನ್ನು ಮಂಡಿಸಲಾಯಿತು**</u>

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಮತ್ತು ಮುಜರಾಯಿ ಸಚಿವರು):–** ಮಾನ್ಯ ಸಭಾಪತಿಯವರೇ, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನಲ್ಲಿರುವ ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಸುಮಾರು ೮೮ ಎಕರೆ ಪ್ರದೇಶದಲ್ಲಿದೆ. ಈ ದೇವಸ್ಥಾನಕ್ಕೆ ಪ್ರತಿ ವರ್ಷ ಸುಮಾರು ೮೦ ಲಕ್ಷದಿಂದ 1 ಕೋಟಿವರೆಗೂ ಭಕ್ತಾದಿಗಳು ಬರುತ್ತಾರೆ. ಅದರಲ್ಲೂ ವಿಶೇಷವಾಗಿ ಈ ದೇವಸ್ಥಾನಕ್ಕೆ ಮಹಾರಾಷ್ಟ್ರ, ಗೋವಾ, ಆಂಧ್ರಪ್ರದೇಶ, ತೆಲಂಗಾಣ ಮತ್ತು ನಮ್ಮ ಕರ್ನಾಟಕದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದಾರೆ. ಆದರೆ ಅವರಿಗೆ ರಸ್ತೆಗಳು, ವಸತಿ, ವಿದ್ಯುಚ್ಛಕ್ತಿ, ನೀರಿನ ವ್ಯವಸ್ಥೆ ಸಮರ್ಪಕವಾಗಿ ಆಗುತ್ತಿಲ್ಲ. ಆದ್ದರಿಂದ ಈ ದೇವಸ್ಥಾನವನ್ನು ಅಭಿವೃದ್ಧಿಗೊಳಿಸಲು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಈ ವಿಧೇಯಕವನ್ನು ತಂದಿದ್ದೇವೆ. ಈ ಪ್ರಾಧಿಕಾರಕ್ಕೆ ಹಿಂದು ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಸಚಿವರು ಅಧ್ಯಕ್ಷರಾಗಿರುತ್ತಾರೆ. ಜಿಲ್ಲೆಯ ಜಿಲ್ಲಾ ಉಸ್ತುವಾರಿ ಮಂತ್ರಿಗಳು ಉಪಾಧ್ಯಕ್ಷರು ಆಗಿರುತ್ತಾರೆ ಮತ್ತು ಬೇರೆ ಬೇರೆ ಇಲಾಖೆಯವರು ಸದಸ್ಯರುಗಳಾಗಿರುತ್ತಾರೆ. ಅದರ ಜೊತೆಗೆ ಜಿಲ್ಲಾ ಮಟ್ಟದ ಮತ್ತು ರಾಜ್ಯ ಮಟ್ಟದ ಮೇಲ್ವಿಚಾರಣಾ ಸಮಿತಿ ಇರುತ್ತದೆ. ಇದೆಲ್ಲಾ ರಚನೆಯಾದರೆ ಈ ದೇವಸ್ಥಾನದ ಅಭಿವೃದ್ಧಿಯಾಗುತ್ತದೆ ಎನ್ನುವ ವಿಶ್ವಾಸದಿಂದ ಈ ವಿಧೇಯಕವನ್ನು ತಂದಿದ್ದೇನೆ. ಈ ವಿಧೇಯಕವನ್ನು ಅನುಮೋದನೆ ಮಾಡಿಕೊಡಬೇಕೆಂದು ನಾನು ತಮ್ಮಲ್ಲಿ ಕೇಳಿಕೊಳ್ಳುತ್ತೇನೆ.

**ಸಭಾಪತಿಯವರು:–** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಪರ್ಯಾಲೋಚಿಸುವುದು"

**<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>**

**<u>ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು</u>**

**<u>ಖಂಡ 2 ರಿಂದ 42 ರವರೆಗೆ</u>**

**ಸಭಾಪತಿಯವರು:–** "ಖಂಡ 2 ರಿಂದ 42 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ರಿಂದ 42 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಮತ್ತು ಮುಜರಾಯಿ ಸಚಿವರು)** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಶ್ರೀ ರೇಣುಕಾಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರ ವಿಧೇಯಕವನ್ನು ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಒ) ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ)(ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು) (ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಸಚಿವರ ಪರವಾಗಿ):-** ಮಾನ್ಯ

ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು) (ಗಣಿ, ಭೂವಿಜ್ಞಾನ ಮತ್ತು ತೋಟಗಾರಿಕೆ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಇದೊಂದು ಅತ್ಯಂತ ಸಣ್ಣದಾಗಿರುವಂತಹ ವಿಧೇಯಕವಾಗಿದೆ. ಉದ್ಯಾನವನಗಳ ಸಂರಕ್ಷಣೆ ಅಧಿನಿಯಮದ ಅಡಿಯೊಳಗೆ ನಂದಿಬೆಟ್ಟದಲ್ಲಿ ರೋಪ್‌ವೇ ಮಾಡತಕ್ಕಂಥ ಕೆಲಸವನ್ನು ಇವತ್ತು ನಮ್ಮ ಪ್ರವಾಸೋದ್ಯಮ ಇಲಾಖೆ ಕೈಗೆತ್ತಿಕೊಂಡಿದೆ. ಆ ರೋಪ್‌ವೇ ಮಾಡತಕ್ಕಂಥ ಸಂದರ್ಭದಲ್ಲಿ ನಂದಿಬೆಟ್ಟದ ಮೇಲೆ ಎರಡು ಎಕರೆಯಷ್ಟು ಭೂಮಿಯನ್ನು ಅದಕ್ಕೆ ಕೊಡಬೇಕಾಗುತ್ತದೆ. ಆ ಹಿನ್ನೆಲೆಯೊಳಗೆ ಈ ಕಾನೂನನ್ನು ತರಲಾಗಿದೆ. ನಾನು ತಮ್ಮನ್ನು ಅರಿಕೆ ಮಾಡಿಕೊಳ್ಳುತ್ತೇನೆ. ಅಭಿವೃದ್ಧಿ ಮಾಡುವ ದಿಕ್ಕಿನಲ್ಲಿ ಉತ್ತಮವಾದ ಹೆಜ್ಜೆ ಇಡುವುದಕ್ಕೆ ಈ ಕಾನೂನಿನ ತಿದ್ದುಪಡಿ ಅನುಕೂಲ ಮಾಡುತ್ತದೆ. ಈ ವಿಧೇಯಕವನ್ನು ದಯಮಾಡಿ ಅನುಮೋದನೆ ಮಾಡಿಕೊಡಬೇಕೆಂದು ನಾನು ಕೇಳಿಕೊಳ್ಳುತ್ತಿದ್ದೇನೆ.

**(ಈ ಹಂತದಲ್ಲಿ ವಿರೋಧ ಪಕ್ಷದ ಸದಸ್ಯರುಗಳು ಸದನದ ಬಾವಿಯಲ್ಲಿ ನಿಂತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದರು)**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡ ಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2**

**ಸಭಾಪತಿಯವರು:-** "ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಖಂಡ 2 ನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಖಂಡ 1 ಇತ್ಯಾದಿ**

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಪ್ರಸ್ತಾವದ ಅಂಗೀಕಾರ**

**ಶ್ರೀ ಹೆಚ್.ಕೆ.ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ರ ಕರ್ನಾಟಕ ಸರ್ಕಾರಿ ಉದ್ಯಾನವನಗಳ(ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಸಭಾಪತಿಯವರು:-** ಪ್ರಸ್ತಾವ ಏನೆಂದರೆ;

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

(ಮುಂದು)

(695) 25/07/2024 4:10/ಎಸ್‌ಪಿಆರ್/ಬಿಎನ್‌ಎಸ್ (ಉಪ ಸಭಾಪತಿಯವರ ಉಪಸ್ಥಿತಿ)

**(ಗೊಂದಲ)**

**(ಈ ಹಂತದಲ್ಲಿ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಶ್ರೀ ಎಸ್.ಎಲ್.ಭೋಜೇಗೌಡ ಮತ್ತು ಶ್ರೀ ಸಿ.ಟಿ. ರವಿ ಇವರುಗಳನ್ನು ಹೊರತುಪಡಿಸಿ, ವಿರೋಧ ಪಕ್ಷದ ಸದ್ಯರುಗಳೆಲ್ಲರೂ ಸದನದ ಬಾವಿಯಲ್ಲಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ, ಧರಣಿ ನಿರತರಾಗಿದ್ದರು)**

**ಓ) ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024**

**ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ದಿನೇಶ್ ಗುಂಡೂರಾವ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದುಪಡಿ) ವಿಧೇಯಕ, 2024 ಇದನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವವನ್ನು ಮಂಡಿಸಲಾಯಿತು**

**ಶ್ರೀ ದಿನೇಶ್ ಗುಂಡೂರಾವ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-** ಮಾನ್ಯ ಸಭಾಪತಿಯವರೇ, ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕ, 2024 ಇದನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ತಿದ್ದುಪಡಿ ವಿಧೇಯಕದ ಮುಖ್ಯ ಉದ್ದೇಶಗಳನ್ನು ಹೇಳುವುದಕ್ಕೆ ಬಯಸುತ್ತೇನೆ. ವೈದ್ಯಕೀಯ ಪರಿಷತ್ತಿನಲ್ಲಿ ಕೆಲವು ಮಾರ್ಪಾಟುಗಳನ್ನು ಹಾಗೂ ತಿದ್ದುಪಡಿಗಳನ್ನು ಮಾಡುವುದಕ್ಕಾಗಿ ವಿಧೇಯಕವನ್ನು ತಂದಿದ್ದೇವೆ. ಪರಿಷತ್ತಿಗೆ ಹೊಸ ಸದಸ್ಯರನ್ನು ಚುನಾಯಿಸುವ ಚುನಾವಣೆ ಪ್ರಕ್ರಿಯೆಯ ಬಗ್ಗೆ ಕೆಲವು ಅಂಶಗಳನ್ನು ವಿಧೇಯಕದಲ್ಲಿ ಸೇರಿಸಲಾಗಿದೆ. ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಪದವಿಯ ಅವಧಿಯು ಎರಡು ಅವಧಿಗಳಿಗಿಂತ ಹೆಚ್ಚಾಗಿ ಇರಬಾರದೆಂದು ನಾವು ಹೇಳಿದ್ದೇವೆ. ಎರಡು ಅವಧಿಗಳ ಕಾಲವಾದ ನಂತರ ಮತ್ತೆ ಚುನಾವಣೆಗೆ ಸ್ಪರ್ಧಿಸುವುದಕ್ಕೆ ಅರ್ಹರಿರುವುದಿಲ್ಲ. ಇಂತಹ ತಿದ್ದುಪಡಿಯನ್ನು ನಾವು ಮಾಡುತ್ತಿದ್ದೇವೆ. ಅದೇ ರೀತಿಯಾಗಿ ಚುನಾವಣೆಗಳನ್ನು ನಡೆಸುವ ರೀತಿಯ ವಿಧಾನಗಳ ಬಗ್ಗೆಯೂ ಸಹ ಸಣ್ಣಪುಟ್ಟ ಮಾರ್ಪಾಡುಗಳನ್ನು ಮಾಡಿದ್ದೇವೆ. ಹಾಲಿ ಇರುವ ರಿಜಿಸ್ಟ್ರಾರ್ ಜೊತೆಗೆ ಒಬ್ಬ ಉಪ ರಿಜಿಸ್ಟ್ರಾರ್ ರವರನ್ನೂ ಕೂಡ ನೇಮಕ ಮಾಡಬೇಕೆಂಬುದನ್ನು ತಿದ್ದುಪಡಿಯಲ್ಲಿ ತಿಳಿಸಲಾಗಿದೆ.

ಇಲ್ಲಿನ ಬಹಳ ವಿಶೇಷವಾದ ಅಂಶವೇನೆಂದರೆ, ನಕಲಿ ವೈದ್ಯಕೀಯ ವೃತ್ತಿಗೆ ಇರುವ ದಂಡನೆ, ಇದರ ಬಗ್ಗೆಯೂ ಸಹ ಕೆಲವು ಮಾರ್ಪಾಡುಗಳನ್ನು ಮಾಡಿದ್ದೇವೆ. ಯಾರು ಈ ಅಪರಾಧಗಳಲ್ಲಿ ಸಿಕ್ಕಿಹಾಕಿಕೊಳ್ಳುತ್ತಾರೆಯೋ, ಅಂತಹವರಿಗೆ ಹತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಮತ್ತು ತರುವಾಯದ ಅಪರಾಧ ನಿರ್ಣೀತನಾದ ಸಂದರ್ಭದಲ್ಲಿ ಒಂದು ಲಕ್ಷ ರೂಪಾಯಿಗಳಿಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ದಂಡಿತನಾಗತಕ್ಕದ್ದು ಎಂಬ ಅಂಶವನ್ನು ಪ್ರಸ್ತುತ ಮಂಡಿಸಿರುವ ವಿಧೇಯಕದಲ್ಲಿ ಸೇರಿಸಲಾಗಿದೆ. ಇದು ನಕಲಿ ವೈದ್ಯರು ಅಂದರೆ 'quacks' ಇವರ ಬಗ್ಗೆ ಮಾಡಿರುವಂತಹ ಒಂದು ಬದಲಾವಣೆಯಾಗಿದೆ.

ವೈದ್ಯಕೀಯ ಸಿಬ್ಬಂದಿಗಳಿಗೆ ಅದರಲ್ಲೂ ವೈದ್ಯರಿಗೆ ಎಲ್ಲಾ ರೀತಿಯ ರಕ್ಷಣೆಯನ್ನು ನೀಡುವಂತಹದ್ದಾಗಿದೆ. ಇವತ್ತಿನ ದಿವಸ ಅನೇಕ ಸೂಕ್ಷ್ಮ ಸಂದರ್ಭಗಳಲ್ಲಿ ವೈದ್ಯರ ಮೇಲೆ ಮತ್ತು ವೈದ್ಯಕೀಯ ಆಸ್ಪತ್ರೆಗಳ ಸಿಬ್ಬಂದಿಗಳ ಮೇಲೆ ಹಲ್ಲೆ ಮಾಡುವಂತಹ ಸಂದರ್ಭದಲ್ಲಿ ಮತ್ತು ಅವರನ್ನು ಅವಮಾನ ಮಾಡುವಂತಹ ಅನೇಕ ಘಟನೆಗಳಾಗುತ್ತವೆ. ಈ ರೀತಿಯ ಉದ್ದೇಶಪೂರ್ವಕವಾಗಿ ಅವರನ್ನು ಅವಮಾನಿಸಿದಾಗ ಅಥವಾ ಅವರಿಗೆ ಅಗೌರವವಾಗಿ ನಡೆದುಕೊಂಡಾಗ ಅವರನ್ನು ನೇರವಾಗಿ ಕೆಟ್ಟದಾಗಿ ಉದ್ದೇಶಿಸಿ ಮಾತನಾಡುತ್ತಾರೆ. ಸಾಮಾಜಿಕ ಮಾಧ್ಯಮಗಳ ಮುಖಾಂತರ ಅನಧಿಕೃತವಾಗಿ ಆಡಿಯೋ ಮತ್ತು ವಿಡಿಯೋ ರೆಕಾರ್ಡ್ ಮಾಡಿ, ಇವರಿಗೆ ಇನ್ನೂ ಒಂದು ರೀತಿಯ ಅಗೌರವ ಮತ್ತು ನಿಂದಿಸುವ ಕೆಲಸವನ್ನು ಮಾಡುವ ಘಟನೆಗಳಾಗುತ್ತಿರುವುದನ್ನು ನಾವು ನೋಡುತ್ತಿದ್ದೇವೆ. ಇಂತಹ ದೌರ್ಜನ್ಯಗಳನ್ನು ಮಾಡುವ ಉದ್ದೇಶವಿರುವ ಜನರ ಮೇಲೆ, ಕಟ್ಟುನಿಟ್ಟಿನ ಕ್ರಮಗಳಾಗಬೇಕು ಎನ್ನುವ ಉದ್ದೇಶದಿಂದ ಈ ತಿದ್ದುಪಡಿ ವಿಧೇಯಕವನ್ನು ಮಂಡಿಸಿದ್ದೇವೆ. ಕೇವಲ ವೈದ್ಯರು ಒಬ್ಬರೇ ಅಲ್ಲ, ಅಲ್ಲಿರುವ ಭದ್ರತಾ ಸಿಬ್ಬಂದಿ, ಸಹಾಯಕರು ಅಥವಾ ಆಂಬ್ಯುಲೆನ್ಸ್ ಚಾಲಕರು ಯಾರೇ ಇರಬಹುದು; ಇವರಿಗೆಲ್ಲರಿಗೂ ರಕ್ಷಣೆ ಸಿಗಬೇಕು ಎನ್ನುವ ಉದ್ದೇಶದಿಂದ ತಿದ್ದುಪಡಿಯನ್ನು ತಂದಿದ್ದೇವೆ. ಈ ತಿದ್ದುಪಡಿಯ ಮುಖಾಂತರ ಅವರಿಗೆ ಮೂರು ವರ್ಷಗಳವರೆಗೆ ಕಡಿಮೆ ಇಲ್ಲದಂತೆ ಆದರೆ ಏಳು ವರ್ಷಗಳಿಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸ ಮತ್ತು ದಂಡನೆಯನ್ನು ನೀಡುವಂತಹದ್ದನ್ನು ಈ ವಿಧೇಯಕದಲ್ಲಿ ಅಳವಡಿಸಲಾಗಿದೆ. **(ಗೊಂದಲ)** ಅವರಿಗೂ ಸಹ ಇದೇ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಹೇಳಿದ್ದೇವೆ. ಇಷ್ಟೊಂದು ವಿಷಯಗಳನ್ನು ಪ್ರಗತಿಪರವಾದ ಮತ್ತು ಸುಧಾರಣೆ ತರುವಂತಹ ಕಾರಣಕ್ಕಾಗಿ ನಾವು ಪ್ರಸ್ತುತ ವಿಧೇಯಕವನ್ನು ಮಂಡಿಸಿದ್ದೇವೆ. ತಾವೆಲ್ಲರೂ ಇದನ್ನು ಪರ್ಯಾಲೋಚಿಸಿ, ಅನುಮೋದನೆ ನೀಡಬೇಕೆಂದು ನಾನು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ರ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

**ಪ್ರಸ್ತಾವವನ್ನು ಅಂಗೀಕರಿಸಲ್ಪಟ್ಟಿತು**

**ವಿಧೇಯಕವನ್ನು ಖಂಡಖಂಡವಾಗಿ ಪರ್ಯಾಲೋಚಿಸುವುದು**

**ಖಂಡ 2 ಮತ್ತು 3**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ, "ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ"

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಖಂಡ 2 ಮತ್ತು 3 ನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಖಂಡ 1 ಇತ್ಯಾದಿ**

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

**(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)**

**ಪ್ರಸ್ತಾವದ ಅಂಗೀಕಾರ**

**ಶ್ರೀ ದಿನೇಶ್ ಗುಂಡೂರಾವ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):-** ಮಾನ್ಯ ಸಭಾಪತಿಯವರೇ, ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024 ರ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಉಪ ಸಭಾಪತಿಯವರು:-** ಪ್ರಸ್ತಾವ ಏನೆಂದರೆ,

**"ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2024 ರ ಕರ್ನಾಟಕ ವೈದ್ಯಕೀಯ ನೋಂದಣಿ ಮತ್ತು ಇತರ ಕೆಲವು ಕಾನೂನು (ತಿದ್ದುಪಡಿ) ವಿಧೇಯಕಯನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು**

**ಉಪ ಸಭಾಪತಿಯವರು:-** ಈಗ ನಾನು ಪ್ರಶ್ನೋತ್ತರ ಕಲಾಪವನ್ನು ತೆಗೆದುಕೊಳ್ಳುತ್ತೇನೆ. ಹೀಗಾಗಿ ದಯಮಾಡಿ ಸದನದ ಬಾವಿಯಲ್ಲಿರುವ ಸದಸ್ಯರುಗಳು ತಮ್ಮ ತಮ್ಮ ಸ್ಥಾನಗಳಿಗೆ ತೆರಳಬೇಕೆಂದು ವಿನಂತಿಸುತ್ತೇನೆ. ಈಗ ಪ್ರಶ್ನೋತ್ತರ ಕಲಾಪ.

**(ಗೊಂದಲ)**

**15. ಪ್ರಶ್ನೋತ್ತರಗಳ ಮಂಡನೆ**

**ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಹಾಗೂ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳ ಮಂಡನೆ**

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು):-** ಮಾನ್ಯ ಸಭಾಪತಿಯವರೆ, ದಿನಾಂಕ 25 ನೇ ಜುಲೈ, 2024, ಸಮೂಹ-4 ರ ಸದನದಲ್ಲಿ ಉತ್ತರಿಸುವ ಒಟ್ಟು 15 ಪ್ರಶ್ನೆಗಳ ಪೈಕಿ 12 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ ಒಟ್ಟು 118 ಪ್ರಶ್ನೆಗಳ ಪೈಕಿ 41 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**ಉಪ ಸಭಾಪತಿಯವರು:-** ಮಂಡಿಸಲಾಯಿತು.

**(ಉತ್ತರಗಳನ್ನು ಲಗತ್ತಿಸಲಾಗಿದೆ)**

**16. ಸಭಾಪತಿಯವರ ಅನುಮತಿ ಮೇರೆಗೆ ಪ್ರಸ್ತಾಪಿಸಲಾಗಿದ್ದ ವಿಷಯಗಳಿಗೆ ಸಂಬಂಧಿಸಿದಂತೆ ಸಚಿವರ ಹೇಳಿಕೆಗಳು**

**ಅ) ವಿಷಯ:- ಅಂಗವಿಕಲರ ಕಲ್ಯಾಣ ಇಲಾಖೆ ವತಿಯಿಂದ ವಿಶೇಷ ಚೇತನರಿಗಾಗಿ ನೀಡಲಾಗುವ ದ್ವಿಚಕ್ರ ವಾಹನಗಳು ಪ್ರಾದೇಶಿಕ ಸಾರಿಗೆ ಕಛೇರಿಯಲ್ಲಿ ನೋಂದಣಿ ಮಾಡಿಸಲು ಸಾಧ್ಯವಾಗದೇ ವಿತರಣೆಯಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ.**

**-------**

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು ರವರು ದಿನಾಂಕ: 16/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**(ಉತ್ತರವನ್ನು ಲಗತ್ತಿಸಲಾಗಿದೆ)**

**ಆ) ವಿಷಯ:- ಆರು ತಿಂಗಳ ಹಿಂದೆ ಮೃತಪಟ್ಟ ಸೇಡಂ ಪುರಸಭೆಯಲ್ಲಿ ಕಿರಿಯ ಇಂಜಿನಿಯರ್ ಆಗಿದ್ದ ಅಶೋಕ ಪುಟಪಾಕ್ ಅವರನ್ನು ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯಲ್ಲಿ ಖಾಲಿ ಇರುವ ಕಿರಿಯ ಇಂಜಿನಿಯರ್ ಹುದ್ದೆಗೆ ವರ್ಗಾವಣೆ ಮಾಡಿರುವ ಬಗ್ಗೆ.**

- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಪೌರಾಡಳಿತ ಮತ್ತು ಹಜ್ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಎನ್.ರವಿಕುಮಾರ್‌ರವರು ದಿನಾಂಕ: 16/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಇ) ವಿಷಯ:- ಮುಖ್ಯ ಶಿಕ್ಷಕರ ಬಡ್ತಿ, ಪ್ರೌಢಶಾಲಾ ಶಿಕ್ಷಕರ ಬಡ್ತಿ, ಸೇವಾ ಜೇಷ್ಠತೆಯಂತಹ ಸಮಸ್ಯೆಗಳಿಗೆ ಪರಿಹಾರ ದೊರಕಿಸಿಕೊಡುವ ಬಗ್ಗೆ.**

- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಸಿ.ಟಿ.ರವಿರವರು ದಿನಾಂಕ: 18/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಈ) ವಿಷಯ:- ವಿಜಯಪುರ ಜಿಲ್ಲೆ ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಜಿಲ್ಲೆಯಲ್ಲಿಯೇ 2ನೇ ಅತಿದೊಡ್ಡದಾದ ಅರೇಶಂಕರ ಕೆರೆಯ ಜೀರ್ಣೋದ್ಧಾರದ ಅಭಿವೃದ್ಧಿಗೆ ಯೋಜನೆ ರೂಪಿಸುವ ಬಗ್ಗೆ.**

\- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರು):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಪ್ರಕಾಶ್ ಕೆ.ರಾಥೋಡ್ ರವರು ದಿನಾಂಕ: 19/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಉ) ವಿಷಯ:- ರಾಜ್ಯದಲ್ಲಿ ರೈತರಿಗೆ ಬೇಕಾದ ರಸಗೊಬ್ಬರ ಸರಿಯಾದ ಸಮಯದಲ್ಲಿ ಪೂರೈಕೆಯಾಗುತ್ತಿಲ್ಲದಿರುವ ಬಗ್ಗೆ.**

– – –

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಕೃಷಿ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಕೆ.ಎಸ್.ನವೀನ್‌ರವರು ದಿನಾಂಕ:19/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಊ) ವಿಷಯ:- ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ ಸಂಸ್ಥೆಯ ಅರ್ಚಕರಿಗೆ ವೇತನ ನಿಗದಿಪಡಿಸಿ ಪ್ರತೀ ತಿಂಗಳು ಕಾಲಮಿತಿಯೊಳಗೆ ವೇತನ ಪಾವತಿಸುವ ಬಗ್ಗೆ.**

\- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಾರಿಗೆ ಮತ್ತು ಮುಜರಾಯಿ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಸಿ.ಟಿ.ರವಿರವರು ದಿನಾಂಕ: 22/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಖ) ವಿಷಯ:- 2022-23 ನೇ ಸಾಲಿನ ರಾಜ್ಯದ ಸರ್ಕಾರಿ ಕಾನೂನು ಕಾಲೇಜಿನ ವಿದ್ಯಾರ್ಥಿಗಳ ಹಾಗೂ ಚಿಕ್ಕಮಗಳೂರು ಶಾರದಾ ಕಾನೂನು ಕಾಲೇಜು ವಿದ್ಯಾರ್ಥಿಗಳ ಫಲಿತಾಂಶವನ್ನು ಕೂಡಲೇ ನೀಡುವ ಬಗ್ಗೆ.**

– – –

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಾರಿಗೆ ಮತ್ತು ಮುಜರಾಯಿ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಎಂ.ಎಲ್.ಅನಿಲ್ ಕುಮಾರ್‌ರವರು ದಿನಾಂಕ:22/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಎ) ವಿಷಯ:- ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರನ್ನಾಗಿ ನಿವೃತ್ತ ಅಧಿಕಾರಿ ಕೆ.ಎಂ.ಆಶಾ ರವರನ್ನು ನೇಮಿಸಿರುವುದನ್ನು ವಿರೋಧಿಸಿರುವ ಬಗ್ಗೆ.**

**- - -**

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಸಹಕಾರ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್‌ರವರು ದಿನಾಂಕ:22/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಏ) ವಿಷಯ:- ಪತ್ರಿಕೋದ್ಯಮ ವಿಷಯದಲ್ಲಿ ರೆಗ್ಯೂಲರ್ ಆಗಿ ಸ್ನಾತಕೋತ್ತರ ಪದವಿ ಪಡೆದು ಸ್ಥಳೀಯ ಜಿಲ್ಲಾ ಮಟ್ಟದ ಕನ್ನಡ ದಿನಪತ್ರಿಕೆ ಆರಂಭಿಸಿರುವ ಸಂಪಾದಕರಿಗೆ ಪ್ರತಿ ತಿಂಗಳು ಎರಡು ಪುಟ ಜಾಹೀರಾತು ವ್ಯವಸ್ಥೆ ಮಾಡುವ ಬಗ್ಗೆ.**

\- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಮುಖ್ಯಮಂತ್ರಿಗಳ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಪಿ.ಹೆಚ್.ಪೂಜಾರ್ ರವರು ದಿನಾಂಕ: 23/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಐ) ವಿಷಯ:- ಸರ್ಕಾರದ ನಿರ್ಲಕ್ಷ್ಯಕ್ಕೊಳಗಾಗಿರುವ ರೇಷ್ಮೆ ಇಲಾಖೆಗೆ ಮರುಜೀವ ನೀಡುವ ಬಗ್ಗೆ.**

– – –

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಡಿ.ಎಸ್.ಅರುಣ್‌ರವರು ದಿನಾಂಕ: 23/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಒ) ವಿಷಯ:- ದರ್ವೇಶ್ ಗ್ರೂಪ್ ಆಫ್ ಕಂಪನಿ ಎಂಬ ಸಂಸ್ಥೆ ಹೂಡಿಕೆದಾರರಿಗೆ ಅಧಿಕ ಬಡ್ಡಿ ನೀಡುವುದಾಗಿ ಹೇಳಿ ಅವರಿಂದ ಡಿಪಾಸಿಟ್ ರೂಪದಲ್ಲಿ ಹಣ ಪಡೆದು, ವಂಚಿಸಿರುವ ಬಗ್ಗೆ.**

---

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಗೃಹ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಎನ್.ರವಿಕುಮಾರ್‌ರವರು ದಿನಾಂಕ: 23/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

**(ಉತ್ತರವನ್ನು ಲಗತ್ತಿಸಲಾಗಿದೆ)**

**ಓ) ವಿಷಯ:- 2024-25 ನೇ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ವಿಷಯಗಳ ಉಪನ್ಯಾಸಕರನ್ನು ಹೆಚ್ಚುವರಿ ಎಂದು ಗುರ್ತಿಸಿ ತಾತ್ಕಾಲಿಕ ಪಟ್ಟಿ ಮಾಡಿರುವುದನ್ನು ರದ್ದುಪಡಿಸುವ ಬಗ್ಗೆ.**

**- - -**

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು) (ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣರವರು ದಿನಾಂಕ: 24/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

**ಔ) ವಿಷಯ:- ಅಡಿಕೆ ಕೃಷಿಕರಿಗೆ ಈ ಬಾರಿ ಮತ್ತೆ ಕೊಳೆರೋಗ ಮತ್ತು ಮಳೆಯಿಂದ ಶಿಲೀಂದ್ರ ರೋಗ ಕಾಣಿಸಿಕೊಂಡಿರುವ ಬಗ್ಗೆ.**

- - -

**ಶ್ರೀ ಎನ್.ಎಸ್.ಬೋಸರಾಜು (ಸಭಾನಾಯಕರು)** (ಗಣಿ ಮತ್ತು ಭೂ ವಿಜ್ಞಾನ, **ತೋಟಗಾರಿಕೆ ಸಚಿವರ ಪರವಾಗಿ):-** ಮಾನ್ಯ ಸಭಾಪತಿಯವರೇ, ಮಾನ್ಯ ಸದಸ್ಯರಾದ ಶ್ರೀ ಐವನ್ ಡಿ'ಸೋಜಾರವರು ದಿನಾಂಕ 24/07/2024 ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ್ದ ವಿಷಯಕ್ಕೆ ಸಂಬಂಧಿಸಿದ ಉತ್ತರವನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ

**(ಉತ್ತರವನ್ನು ಲಗತ್ತಿಸಲಾಗಿದೆ)**

(ಮುಂದು)

(696)25-07-2024/4-20/bkp-bns (ಉಪ ಸಭಾಪತಿಯವರ ಉಪಸ್ಥಿತಿ)

**17. ಸಾರಾಂಶ**

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ 153ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:15.07.2024 ರಿಂದ ದಿನಾಂಕ 25.07.2024 ರವರೆಗೆ ಒಟ್ಟು 08 ದಿನಗಳು ಅಂದರೆ, 37 ಗಂಟೆಗಳು 30 ನಿಮಿಷ ನಡೆಸಲಾಗಿರುತ್ತದೆ.

ಪ್ರತಿ ಅಧಿವೇಶನದ ಪ್ರಾರಂಭದಲ್ಲಿ ಸಂವಿಧಾನದ ಪೀಠಿಕೆಯನ್ನು ಎಲ್ಲಾ ಮಾನ್ಯ ಶಾಸಕರುಗಳು ಓದಬೇಕೆಂದು ನಿರ್ಣಯಿಸಲಾಗಿರುವ ರೀತ್ಯಾ, ಪ್ರಸ್ತುತ ಅಧಿವೇಶನದ ಮೊದಲ ದಿನದ ಉಪವೇಶನದಲ್ಲಿ ಎಲ್ಲಾ ಮಾನ್ಯ ಶಾಸಕರುಗಳಿಂದ ಸಂವಿಧಾನದ ಪೀಠಿಕೆಯನ್ನು ಪಠಣ ಮಾಡಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 15 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು. ICC Men's T20 World Cup ನಲ್ಲಿ ವಿಜೇತರಾದ ಭಾರತೀಯ ಕ್ರಿಕೆಟ್ ತಂಡಕ್ಕೆ ಗೌರವ ಸಮರ್ಪಿಸಲು ಅಭಿನಂದನಾ ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಛಲವಾದಿ ಟಿ ನಾರಾಯಣಸ್ವಾಮಿ ಅವರನ್ನು ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕರನ್ನಾಗಿ ಮಾನ್ಯತೆ ನೀಡಲಾಯಿತು.

2024-25ನೇ ಸಾಲಿನ ಪೂರಕ ಅಂದಾಜು (ಮೊದಲನೇ ಕಂತು) ಗಳ ಬೇಡಿಕೆಗಳನ್ನು ಹಾಗೂ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03 ಹಾಗೂ 04ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಮಾರ್ಚ್ 2023ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಲೆಕ್ಕಪರಿಶೋಧನಾ ವರದಿ (2024ರ ವರದಿ ಸಂಖ್ಯೆ:1), ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ, 2016ರ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆಗೆ ಸಂಬಂಧಿಸಿದ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ವರದಿ (2024ರ ವರದಿ ಸಂಖ್ಯೆ:2), ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆ ನೀಡಿರುವ ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಕಾಯ್ದೆಯ ಅನುಷ್ಠಾನದ ಮೇಲಿನ ಕಾರ್ಯನಿರ್ವಾಹಣಾ ಲೆಕ್ಕಪರಿಶೋಧನಾ ವರದಿಯನ್ನು

(2024ರ ವರದಿ ಸಂಖ್ಯೆ:2), ಮಾರ್ಚ್ 2022ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರ ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಸರಣಾ ಲೆಕ್ಕಪರಿಶೋಧನಾ ವರದಿ (2024ರ ವರದಿ ಸಂಖ್ಯೆ:3) ಗಳನ್ನು ಮಂಡಿಸಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿ, ಕರ್ನಾಟಕ ವಿಧಾನಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ ಮೂವತ್ತೊಂಭತ್ತನೇ ವರದಿ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 3ನೇ ವರದಿ, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಮೊದಲನೆಯ ವರದಿಗಳನ್ನು ಒಪ್ಪಿಸಲಾಯಿತು.

ವಿಧಾನ ಮಂಡಲದ ಜಂಟಿ/ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳಿಗೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್, ಕರ್ನಾಟಕ ರಾಜ್ಯ ಅಂಗವಿಕಲರ ಸಲಹಾ ಮಂಡಳಿ ಹಾಗೂ ಕರ್ನಾಟಕ ವಿಧಾನ ಪರಿಷತ್ತಿನ ನಿಯಮಾವಳಿ ಸಮಿತಿಗೆ ಮಾನ್ಯ ಶಾಸಕರುಗಳನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಸದನದಲ್ಲಿ ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:19.06.2024ರಿಂದ 02 ತಿಂಗಳುಗಳು ಹಾಗೂ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳ ಸಂಬಂಧ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ದಿನಾಂಕ:22.04.2024 ರಿಂದ 06 ತಿಂಗಳುಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವನೆಗಳಿಗೆ ಸದನದ ಸಹಮತಿಯನ್ನು ಪಡೆಯಲಾಯಿತು.

ನಾಲ್ಕು ಅಧಿಕೃತ ನಿರ್ಣಯಗಳನ್ನು ಸದನದಲ್ಲಿ ಮಂಡಿಸಿ ಅಂಗೀಕರಿಸಲಾಗಿರುತ್ತದೆ.

ನಿಯಮ 59 ರಡಿಯಲ್ಲಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಆ ಪೈಕಿ 01 ನಿಯಮ 68ಕ್ಕೆ, 01 ನಿಯಮ 72ಕ್ಕೆ ಪರಿವರ್ತನೆಗೊಂಡು ಸದನದಲ್ಲಿ ಉತ್ತರಿಸಲಾಗಿರುತ್ತದೆ ಹಾಗೂ 02 ನಿಯಮ 330ಕ್ಕೆ ಪರಿವರ್ತಿಸಲಾಗಿದೆ. 01 ತಿರಸ್ಕೃತಗೊಂಡಿರುತ್ತದೆ.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1,251 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 135 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 90 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 16 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು 1,116 ಪ್ರಶ್ನೆಗಳ ಪೈಕಿ 348 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 08 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. 3 ಸೂಚನೆಗಳನ್ನು ಚರ್ಚಿಸಲಾಗಿರುತ್ತದೆ.

ನಿಯಮ 72ರಡಿಯಲ್ಲಿ 126 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 08 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 49 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 87 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 05 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 31 ಸೂಚನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 62 ಸೂಚನೆಗಳ ಪೈಕಿ 39 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ಪರಿಶೀಲನಾ ಸಮಿತಿಗೆ ವಹಿಸಲಾಗಿದ್ದ ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕ ಹಾಗೂ ವಿಧಾನಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ ಕರ್ನಾಟಕ ಸಹಕಾರ ಸಂಘಗಳ (ತಿದ್ದುಪಡಿ) ವಿಧೇಯಕಗಳನ್ನು ಹಾಗೂ ವಿಧಾನಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2 ವಿಧೇಯಕಗಳು ಹಾಗೂ ತಿದ್ದುಪಡಿಯಿಲ್ಲದೆ ಅಂಗೀಕೃತ ರೂಪದಲ್ಲಿರುವ ಒಟ್ಟು 10 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತೇನೆ.

ಈಗ ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತಿದ್ದೇನೆ.

**(ಸದನವನ್ನು ಸಂಜೆ 4 ಗಂಟೆ 24 ನಿಮಿಷಕ್ಕೆ ರಾಷ್ಟ್ರಗೀತೆಯೊಂದಿಗೆ ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಯಿತು)**

****